ಸಂಪುಟ: 05 ಸಂಚಿಕೆ: 37 ಪುಟಗಳು: 08 ಸೋಮವಾರ 21 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಚಟುವಟಿಕೆಯಿಂದಿರಿ! ಜವಾಬ್ದಾರಿಯನ್ನು ತೆಗೆದುಕೊಳ್ಳಿ! ನೀವು ನಂಬುವ ವಿಷಯಗಳಿಗಾಗಿ ಕೆಲಸ ಮಾಡಿ. ನೀವು ಹಾಗೆ ಮಾಡದಿದ್ದರೆ, ನೀವು ನಿಮ್ಮ ಅದೃಷ್ಟವನ್ನು ಇತರರಿಗೆ ಒಪ್ಪಿಸುತ್ತಿದ್ದೀರಿ.

## ಡಿಜಿಟಲ್ ಅರೆಸ್ಟ್; 84 ಲಕ್ಷ ರೂ. ಕಳೆದುಕೊಂಡ ಮಹಿಳಾ ಟೆಕ್ಕಿ

• ಉದಯವಾಹಿನಿ, ಬೆಂಗಳೂರು

ಸೈಬರ್ ವಂಚಕರ ಡಿಜಿಟಲ್ ಅರೆಸ್ಟ್ ಜಾಲಕ್ಕೆ ಸಿಲುಕಿದ 25 ವರ್ಷದ ಸಾಫ್ಟ್‌ವೇರ್ ಎಂಜಿನಿಯರ್‌ವೊಬ್ಬರು 84.56 ಲಕ್ಷ ರೂ. ಕಳೆದುಕೊಂಡಿದ್ದಾರೆ. ಈ ಕುರಿತು ಸೌಮ್ಯಾ (ಹೆಸರು ಬದಲಿಸಲಾಗಿದೆ) ಎಂಬುವವರು ನೀಡಿದ ದೂರಿನ ಅನ್ವಯ ಪ್ರಕರಣ ದಾಖಲಿಸಿಕೊಂಡಿರುವ ವೈಟ್‌ಫೀಲ್ಡ್ ಸೈಬರ್ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಖಾಸಗಿ ಕಂಪನಿಯೊಂದರಲ್ಲಿ ಕಾರ್ಯ ನಿರ್ವಹಿಸುವ ಸೌಮ್ಯಾ ಅವರಿಗೆ ಕೆಲ ದಿನಗಳ ಹಿಂದೆ ಅಪರಿಚಿತನೊಬ್ಬ ವ್ಯಾಟ್ಸಾಪ್ ಮುಖಾಂತರ ಕರೆ ಮಾಡಿ, ತನ್ನನ್ನು ಆರ್‌ಬಿಐ ಅಧಿಕಾರಿ ಎಂದು ಪರಿಚಯಿಸಿಕೊಂಡಿದ್ದ. ಬಳಿಕ ನಿಮ್ಮ ಬ್ಯಾಂಕ್ ಖಾತೆಗಳಿಂದ ಅಕ್ರಮ ಹಣ ವರ್ಗಾವಣೆ ನಡೆದಿದೆ. ಹೀಗಾಗಿ, ಬ್ಯಾಂಕ್ ಖಾತೆಗಳನ್ನು ಫ್ರೀಜ್ ಮಾಡಲಾಗುತ್ತಿದೆ ಎಂದು ಹೆದರಿಸಿದ್ದ. ಈ ವಿಚಾರದ ಕುರಿತು ಮುಂಬೈ ಪೊಲೀಸರು ಕರೆ ಮಾಡಲಿದ್ದು, ಅವರೊಂದಿಗೆ ಚರ್ಚಿಸಿ ಎಂದು ಹೆದರಿಸಿದ್ದ. ಆನಂತರ ಮುಂಬೈ ಪೊಲೀಸರ ಹೆಸರಿನಲ್ಲಿ ಮತ್ತೊಬ್ಬ ವ್ಯಾಟ್ಸಾಪ್ ಮುಖಾಂತರ ವಿಡಿಯೊ ಕರೆ ಮಾಡಿ, ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಜೆಟ್ ಏರ್‌ವೇಸ್‌ನ ಮಾಜಿ ಮುಖ್ಯಸ್ಥ ನರೇಶ್ ಗೋಯಲ್, ತನ್ನ ಹಣಕಾಸು ವರ್ಗಾವಣೆಗೆ ದೇಶಾದ್ಯಂತ 300 ಬ್ಯಾಂಕ್ ಖಾತೆಗಳನ್ನು ಬಳಸಿದ್ದಾರೆ. ಇದರಲ್ಲಿ ನಿಮ್ಮ ಹೆಸರಿನಲ್ಲಿರುವ ಖಾತೆಗಳೂ ಇದ್ದು, ಕೋಟ್ಯಾಂತರ ರೂ. ಅಕ್ರಮ ವರ್ಗಾವಣೆ ನಡೆದಿದೆ. ಹೀಗಾಗಿ, ಈ ಪ್ರಕರಣದಲ್ಲಿ ನಿಮ್ಮನ್ನು ಬಂಧಿಸಲಾಗುವುದು ಎಂದಿದ್ದಾರೆ.

## ದೆಹಲಿಯಲ್ಲಿ ಕಟ್ಟಡ ಕುಸಿತ ಸಾವಿನ ಸಂಖ್ಯೆ 11ಕ್ಕೆ ಏರಿಕೆ; ತನಿಖೆಗೆ ಆದೇಶ

• ಉದಯವಾಹಿನಿ, ಹೊಸ ದಿಲ್ಲಿ

ಈಶಾನ್ಯ ದೆಹಲಿಯ ಶಕ್ತಿ ವಿಹಾರ್ ಪ್ರದೇಶದ ಮುಸ್ತಾಫಾಬಾದ್‌ನಲ್ಲಿ ಶನಿವಾರ ಬೆಳಗಿನ ಜಾವ ನಾಲ್ಕು ಅಂತಸ್ತಿನ ಕಟ್ಟಡ ಕುಸಿದು ಬಿದ್ದಿದೆ. ಈ ದುರಂತದಲ್ಲಿ ಇಬ್ಬರು ಮಹಿಳೆಯರು ಸೇರಿದಂತೆ ಕನಿಷ್ಠ 11 ಜನರು ಸಾವನ್ನಪ್ಪಿದ್ದಾರೆ. ಇದುವರೆಗೆ 14 ಜನರನ್ನು ರಕ್ಷಿಸಲಾಗಿದೆ. ಇನ್ನೂ ಹಲವರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಶಂಕೆ ಇದೆ ಎಂದು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಹೇಳಿದೆ. ಜೊತೆಗೆ ಪ್ರಕರಣದ ತನಿಖೆಗೆ ದೆಹಲಿ ಸಿಎಂ ರೇಖಾ ಗುಪ್ತಾ ಆದೇಶಿಸಿದ್ದಾರೆ. ಸುಮಾರು 3 ಗಂಟೆಗೆ ಮುಸ್ತಾಫಾಬಾದ್‌ನಲ್ಲಿ ಈ ದುರ್ಘಟನೆ ಸಂಭವಿಸಿದೆ. ಕಟ್ಟಡವು ಕಾಗದದಂತೆ ಕುಸಿದು ಬಿದ್ದಿದೆ. ಅನೇಕ ಜನರು ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡರು. ರಕ್ಷಣಾ ತಂಡ ಸ್ಥಳದಲ್ಲಿ ಬೀಡುಬಿಟ್ಟಿದ್ದು, ಜನರನ್ನು ರಕ್ಷಿಸುವ ಕಾರ್ಯ ಮುಂದುವರೆದಿದೆ. ದೆಹಲಿ ಅಗ್ನಿಶಾಮಕ ಸೇವೆಗಳು, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಮತ್ತು ಸ್ಥಳೀಯ ಸ್ವಯಂಸೇವಕರು ಕ್ರೇನ್‌ಗಳು ಮತ್ತು ಥರ್ಮಲ್ ಕ್ಯಾಮೆರಾಗಳನ್ನು ಬಳಸಿ ರಾತ್ರಿಯಿಡೀ ಕೆಲಸ ಮಾಡುತ್ತಿದ್ದಾರೆ. ಮುಸ್ತಫಾಬಾದ್‌ನ ಕಿರಿದಾದ ರಸ್ತೆಗಳು ಭಾರೀ ಉಪಕರಣಗಳನ್ನು ಸಾಗಿಸಲು ಕಷ್ಟಕರವಾಗಿಸುತ್ತಿವೆ. ಕಟ್ಟಡವು ಕಾರ್ಡ್‌ಗಳಂತೆ ಕುಸಿದು ಬಿತ್ತು ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ. ಒಬ್ಬ ಜೀವಂತ ಮಹಿಳೆಯನ್ನು ರಕ್ಷಿಸಲಾಗಿದೆ. ಸ್ಥಳ ತೆರವುಗೊಳಿಸುವವರೆಗೆ, ಹುಡುಕಾಟ ಮುಗಿಯುವವರೆಗೆ ರಕ್ಷಣಾ ಕಾರ್ಯ ಮುಂದುವರಿಯುತ್ತದೆ. 20-22 ಜನರು ಕಟ್ಟಡದಲ್ಲಿ ವಾಸಿಸುತ್ತಿದ್ದರು ಮತ್ತು 14 ಜನರನ್ನು ತಕ್ಷಣವೇ ರಕ್ಷಿಸಲಾಯಿತು. ನಾವು ಬಂದಾಗ, ಜೀವಂತವಾಗಿದ್ದವರನ್ನು ರಕ್ಷಿಸಿದ್ದೇವೆ ಎಂದು NDRF 16 ಬೆಟಾಲಿಯನ್‌ನ ಉಪ ಕಮಾಂಡೆಂಟ್ ನರಪಾಲ್ ಸಿಂಗ್ ಹೇಳಿದರು.

• ಜಾತಿ ಜನಗಣತಿ ವಿವಾದ: 'ಕೈ'ಕಮಾಂಡ್ ಅಂಗಳಕ್ಕೆ SES-2015 ವರದಿ • ಅಂತ್ಯವಾಗುತ್ತಾ ವಿವಾದ... • ಜಾತಿ ಗಣತಿ ವರದಿ ಬಗ್ಗೆ ರಾಹುಲ್ ಗಾಂಧಿ ಒಪ್ಪಿಗೆ ಪಡೆದಿದ್ದೇನೆ • ಸಚಿವರ ಅಭಿಪ್ರಾಯದ ನಂತರ ಅಂತಿಮ ತೀರ್ಮಾನ • ಆತುರದ ನಿರ್ಧಾರ ಕೈಗೊಳ್ಳಲ್ಲ

# ಜಾತಿ ಗಣತಿ ಜಗಳ ಹೈಕಮಾಂಡ್ ಅಂಗಳ






• ಉದಯವಾಹಿನಿ, ನವದೆಹಲಿ:

ಜಾತಿ ಗಣತಿ ವರದಿ ರಾಜ್ಯದಲ್ಲಿ ಭಾರೀ ಚರ್ಚೆ ಹಾಗೂ ವಿರೋಧಕ್ಕೆ ಕಾರಣವಾಗಿದೆ. ಸರ್ಕಾರದ ಸಚಿವ ಸಂಪುಟದಲ್ಲೇ ವರದಿಗೆ ಇದಕ್ಕೆ ಅಪಸ್ವರ ವ್ಯಕ್ತವಾಗಿದೆ. ಸಂಪುಟದಲ್ಲಿರುವ ಒಕ್ಕಲಿಗ, ಲಿಂಗಾಯತ ನಾಯಕರು ವರದಿ ಮರುಪರಿಶೀಲಿಸಬೇಕೆಂದು ಆಗ್ರಹಿಸಿದ್ದಾರೆ. ಹೀಗಾಗಿ ವಿಪಕ್ಷಗಳು ಇದನ್ನೇ ತಮ್ಮ ಅಸ್ತ್ರವಾಗಿಸಿಕೊಂಡು ಸರ್ಕಾರದ ಕಾಲೆಳೆಯುವ ಪ್ರಯತ್ನ ಮಾಡುತ್ತಿದೆ. ಈ ಎಲ್ಲಾ ಬೆಳವಣಿಗೆ ನಡುವಲ್ಲೇ ವರದಿಯು ಇದೀಗ ಕಾಂಗ್ರೆಸ್ ಹೈಕಮಾಂಡ್ ಅಂಗಳ ತಲುಪಿದೆ. ಎರಡು ಬಾರಿ ಮುಂದೂಡಲ್ಪಟ್ಟಿದ್ದ ವರದಿಯನ್ನು ಅಂತಿಮವಾಗಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಡನೆ ಮಾಡಲಾಗಿದ್ದು, ವರದಿಗೆ ಸ್ವಪಕ್ಷದ ನಾಯಕರೇ ವಿರೋಧ ವ್ಯಕ್ತಪಡಿಸಿದ್ದಾರೆಂದು ತಿಳಿದುಬಂದಿದೆ. ಸಂಪುಟದಲ್ಲಿ ವರದಿ ಮಂಡನೆ ಮಾಡುವುದಕ್ಕೂ ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಸಭೆ ಪ್ರತಿಪಕ್ಷದ ನಾಯಕರೂ ಆಗಿರುವ ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಅವರೊಂದಿಗೆ ಚರ್ಚಿಸಿದ್ದು, ರಾಹುಲ್ ಗ್ರೀನ್ ಸಿಗ್ನಲ್ ಕೊಟ್ಟ ಬಳಿಕವೇ ಈ ವರದಿಯನ್ನು ಸಂಪುಟ ಸಭೆಯಲ್ಲಿ ಮಂಡಿಸಿದ್ದಾರೆಂದು ಮೂಲಗಳು ತಿಳಿಸಿವೆ. ಹೀಗಾಗಿ ಇದೀಗ ಸಂಪುಟ ಸಭೆಯಲ್ಲಿ ನಡೆದ ಬೆಳವಣಿಗೆಗಳ ಕುರಿತು ರಾಹುಲ್ ಗಾಂಧಿಯವರಿಗೆ ಮಾಹಿತಿ ನೀಡಲು ನಿರ್ಧರಿಸಿದ್ದಾರೆಂದು ತಿಳಿದುಬಂದಿದೆ. ಕೆಲ ಸಚಿವರು ವರದಿಗೆ ವಿರೋಧ ವ್ಯಕ್ತಪಡಿಸಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಇತರ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ದೂರು ನೀಡುವ ಸಾಧ್ಯತೆಗಳಿವೆ ಎನ್ನಲಾಗಿದೆ. ಹೀಗಾಗಿ ಇದನ್ನು ತಡೆಯಲು ಮುಖ್ಯಮಂತ್ರಿಗಳು ಸಚಿವ ಅಭಿಪ್ರಾಯಗಳನ್ನು ಕಾಗದದ ಮೇಲೆ ಸಂಗ್ರಹಿಸಿ ಹೈಕಮಾಂಡ್'ಗೆ ಕಳುಹಿಸಲು ನಿರ್ಧರಿಸಿದ್ದಾರೆಂದು ಮೂಲಗಳು ತಿಳಿಸಿವೆ.

ಸಂವಿಧಾನ ಜಾರಿಯಾಗಿ 75 ವರ್ಷ ಆಯ್ತು. ಆದರೂ ಬಡವರು ಬಡವರಾಗಿಯೇ ಉಳಿಯಬೇಕಾ ಎಲ್ಲರಿಗೂ ಸಮಾನತೆ ಬರಬೇಕು. ಇನ್ನೂ ಜಾತಿಗೆ ಅಂಟಿಕೊಂಡೇ ಇರಬೇಕಾ ಮುಸ್ಲಿಮರು, ಹಿಂದುಳಿದವರು ಸೇರಿ ಎಲ್ಲಾ ಜಾತಿಯವರಿಗೆ ಶಿಕ್ಷಣ ಸಿಗಬೇಕಾ, ಬೇಡವಾ ಅವರಿಗೆ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಶಕ್ತಿ ತುಂಬಬೇಕೋ ಬೇಡವೋ'' ಎಂದು ಪ್ರಶ್ನಿಸುವ ಮೂಲಕ ಜಾತಿ ಗಣತಿ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡರು.

1 ಲಿಂಗಾಯತ ಪ್ರಾಬಲ್ಯ ತಗ್ಗಿಸಿತೇ 'ಮೀಸಲು' ಆಸೆ

2 ಚರ್ಚೆಗೆ ಗ್ರಾಸವಾದ 2 ದೋಣಿ ಮೇಲಿನ ನಡಿಗೆ

3 ಸಚಿವ ಸಂಪುಟದ ಮುಂದೆ ವರದಿ ಮಂಡನೆಯಾದ ಬಳಿಕ ನಾವು ಒಂದು ಕೋಟಿಗೂ ಹೆಚ್ಚಿದ್ದೇವೆ ಎಂಬ ಲಿಂಗಾಯತ ಸಮುದಾಯಕ್ಕೆ ಆಘಾತ ಸೃಷ್ಟಿಸಿದೆ.

**ಅಶೋಕಗೆ ತಿರುಗೇಟು**

ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯ ಮೂಲ ಪ್ರತಿ ಮುಖ್ಯಮಂತ್ರಿಗಳ ಬಳಿಯಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿ ಆಶೋಕ್ ಅವರು ಯಾವತ್ತಾದರೂ ಸತ್ಯವನ್ನು ಹೇಳಿದ್ದಾರೆಯೇ ಅವರು ಸುಳ್ಳೇ ಹೇಳುವುದು. ಮೂಲ ಪ್ರತಿ ನನ್ನ ಬಳಿಯಿರಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ರಾಹುಲ್ ಗಾಂಧಿಯವರಿಗೆ ನಾವು ಪತ್ರ ಬರೆದಿಲ್ಲ. ಆದರೆ ಅವರೊಂದಿಗೆ ಚರ್ಚೆ ಮಾಡಿ ಸಚಿವ ಸಂಪುಟ ಸಭೆಯಲ್ಲಿ ಸಮೀಕ್ಷೆಯ ವರದಿಯನ್ನು ಮಂಡಿಸಿದ್ದೇವೆ ಎಂದರು.

**ಯಾರದ್ದೂ ವಿರೋಧ ಇಲ್ಲ**

ಜಾತಿ ಗಣತಿ ವರದಿ ಸಂಬಂಧ ಸಂಪುಟ ಸಭೆಯಲ್ಲಿ ಯಾರೂ ವಿರೋಧ ಮಾಡಿಲ್ಲ. ಅಲ್ಲದೇ ಜೋರಾಗಿಯೂ ಮಾತನಾಡಿಲ್ಲ. ನಿಮ್ಮ ಅಭಿಪ್ರಾಯ ಹೇಳುವಂತೆ ತಿಳಿಸಿದ್ದೇನೆ. ಅವರು ಅಭಿಪ್ರಾಯ ನೀಡಿದ ಬಳಿಕ ಸಂಪುಟ ಸಭೆಯಲ್ಲಿ ಮತ್ತೊಮ್ಮೆ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳುತ್ತೇವೆ. ಮೊನ್ನೆ ಯಾವುದೇ ನಿರ್ಧಾರ ಆಗಿಲ್ಲ ಎಂದರು. ಲಿಂಗಾಯತರು ಮತ್ತು ಒಕ್ಕಲಿಗರ ಜನಸಂಖ್ಯೆ ಕಡಿಮೆ ತೋರಿಸಿದಿರಿ ಎಂಬ ಪ್ರಶ್ನೆಗೆ, ಮೆರಿಟ್ ಮೇಲೆ ನಾನು ಮಾತನಾಡಲು ಹೋಗಲ್ಲ. ಮುಂದಿನ ಸಭೆಯಲ್ಲಿ ಮಾತನಾಡುತ್ತೇನೆ. ಈಗ ಅಭಿಪ್ರಾಯ ಕೇಳಿದ್ದೇನೆ ಅಷ್ಟೇ. ಯಾರದ್ದೂ ವಿರೋಧ ಇಲ್ಲ. ಒಬ್ಬರಿಗೊಬ್ಬರು ಮಾತನಾಡಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದರು.

**ಗಣತಿ ಅಪಸ್ವರ; ಬೇಸರ**

**ಆತುರದ ನಿರ್ಧಾರ ಇಲ್ಲ:** ತುಳಿತಕ್ಕೆ ಒಳಗಾದವರಿಗೆ ಶಕ್ತಿ ತುಂಬಿ, ಎಲ್ಲರಿಗೂ ನ್ಯಾಯ ಒದಗಿಸಿಕೊಡಲಾಗುವುದು. ಜಾತಿ ಗಣತಿ ಜಾರಿ ವಿಚಾರದಲ್ಲಿ ಯಾವುದೇ ಆತುರದ ನಿರ್ಧಾರ ಇರುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಕಾಂಗ್ರೆಸ್ ಎಲ್ಲಾ ಸಮುದಾಯಗಳನ್ನು ಸರಿಸಮನಾಗಿ ತೆಗೆದುಕೊಂಡು ಹೋಗಲು ಬದ್ಧವಾಗಿದೆ. ಎಲ್ಲರಿಗೂ ನ್ಯಾಯ ಒದಗಿಸುವ ಉದ್ದೇಶವಿದೆ. ಯಾರಿಗಾದರೂ ಅನ್ಯಾಯ ಮಾಡಬೇಕು ಎಂದು ಎಲ್ಲಿಯೂ ಹೇಳಿಲ್ಲ. ತುಳಿತಕ್ಕೆ ಒಳಗಾದವರಿಗೆ ಶಕ್ತಿ ತುಂಬುವುದು ಪ್ರಮುಖ ಉದ್ದೇಶ. ಜೈನರು, ಒಕ್ಕಲಿಗರು, ಲಿಂಗಾಯತರು ಸೇರಿದಂತೆ ಎಲ್ಲಾ ಸಮುದಾಯದಲ್ಲೂ ಬಡವರಿದ್ದಾರೆ. ಎಲ್ಲರಿಗೂ ನ್ಯಾಯ ಒದಗಿಸಿ ಕೊಡಲಾಗುವುದು ಎಂದು ಹೇಳಿದರು. ವರದಿ ಅವೈಜ್ಞಾನಿಕ ಎಂಬ ಆರೋಪದ ಬಗ್ಗೆ ಕೇಳಿದಾಗ, 'ಈ ಸಮೀಕ್ಷೆಯಲ್ಲಿ ಶೇ 90ರಷ್ಟು ಜನರಿಂದ ಮಾಹಿತಿ ಪಡೆದಿದ್ದಾರೆ. ನಾವು ಈಗ ವರದಿಯ ಅಧ್ಯಯನ ಆರಂಭಿಸಿದ್ದೇವೆ. ಇದಕ್ಕೆ ಸಮಯ ಬೇಕು. ಈ ವಿಚಾರದಲ್ಲಿ ಯಾವುದೇ ಆತುರದ ತೀರ್ಮಾನವಿಲ್ಲ ಎಂದು ತಿಳಿಸಿದರು.



**ಯಾವ ಜಾತಿಗೂ ಅನ್ಯಾಯ ಆಗಬಾರದು**

ಯಾವ ಜಾತಿಗೂ ಅನ್ಯಾಯವಾಗಬಾರದು ಎನ್ನುವುದು ಸರ್ಕಾರದ ಉದ್ದೇಶ. ಇದು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ, ಸಂವಿಧಾನ ಜಾರಿಯಾಗಿ 75 ವರ್ಷಗಳಾಗಿದ್ದರೂ ಬಡವ ಬಡವನಾಗಿಯೇ ಉಳಿಯಬೇಕೆ ಸಮಾನತೆ ಬೇಡವೇ, ಜಾತಿಗೆ ಅಂಟಿಕೊಂಡೇ ಇರಬೇಕೆ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

**ನಾಯಕರಿಗೂ ಇಕ್ಕಟ್ಟು!**

ಹಳೇ ಮೈಸೂರು ಭಾಗದ ಚಾಮರಾಜನಗರ, ತುಮಕೂರು ಸೇರಿ ಮಧ್ಯ ಕರ್ನಾಟಕ ಹಾಗೂ ಉತ್ತರ ಕರ್ನಾಟಕದ 14 ಜಿಲ್ಲೆಗಳಲ್ಲಿ ಲಿಂಗಾಯತರು ದಟ್ಟವಾಗಿದ್ದಾರೆ. ಉತ್ತರ ಕನ್ನಡ ಜಿಲ್ಲೆ ಹೊರತುಪಡಿಸಿದರೆ ಉಳಿದೆಲ್ಲೆಡೆ ಲಿಂಗಾಯತ ಸಮುದಾಯದ ಜನರು ಹೆಚ್ಚಿದ್ದಾರೆ. ಕಿತ್ತೂರು ಕರ್ನಾಟಕದ ಜಿಲ್ಲೆಗಳಲ್ಲಿ ಈ ಸಮುದಾಯದ ಜನಸಂಖ್ಯೆ ಹೆಚ್ಚು. ಸಾಮಾಜಿಕವಾಗಿ ಒಟ್ಟಾಗಿರುವ ಸಮುದಾಯ, ಮೀಸಲು ಉದ್ದೇಶದಿಂದ ವಿಘಟನೆ ಆಗಿರುವುದು ಪ್ರಾಬಲ್ಯವನ್ನು ತಗ್ಗಿಸಿದ್ದು, ಜಾತಿಗಣತಿ ವಿಚಾರದಲ್ಲಿ ಲಿಂಗಾಯತ ಸಚಿವ, ಶಾಸಕ ಮತ್ತು ನಾಯಕರನ್ನು ಇಕ್ಕಟ್ಟಿಗೆ ದೂಡಿದೆ.

## 40 ಮರ ಕಡಿದ ಪ್ರಕರಣ: ವರದಿ ನೀಡುವಂತೆ ಸಚಿವ ಸೂಚನೆ

• ಉದಯವಾಹಿನಿ, ಮೈಸೂರು

ಹೈದರಾಲಿ ರಸ್ತೆಯ ಅಗಲೀಕರಣಕ್ಕೆ 40 ಮರಗಳ ಕಟಾವು ಮಾಡಿರುವ ಕುರಿತು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಮೈಸೂರಿನ ಅರಣ್ಯಾಧಿಕಾರಿಗಳಿಂದ ವರದಿ ಕೇಳಿದ್ದಾರೆ. ಈ ಸಂಬಂಧ ಸಿಸಿಎಫ್ ದರ್ಜೆಯ ಅಧಿಕಾರಿಯಿಂದ ತನಿಖೆ ನಡೆಸಿ 7 ದಿನಗಳೊಳಗಾಗಿ ವರದಿ ಸಲ್ಲಿಸುವಂತೆಯೂ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರು ಅರಣ್ಯ ಪಡೆ ಮುಖ್ಯಸ್ಥರಿಗೆ ಸೂಚನೆ ನೀಡಿದ್ದಾರೆ.

ಮೈಸೂರಿನ ಹೈದರಾಲಿ ರಸ್ತೆಯಲ್ಲಿ ಅನಗತ್ಯವಾಗಿ 40 ಬೃಹತ್ ಮರಗಳನ್ನು ಕಡಿದುರುಳಿಸಲಾಗಿದೆ. ಇದಕ್ಕೆ ಅರಣ್ಯ ಇಲಾಖೆ ಅನುಮತಿ ನೀಡಿರುವುದು ಸೂಕ್ತವಲ್ಲ. ಅಲ್ಲದೇ ರಸ್ತೆಯ ಅಗಲೀಕರಣ ಮಾಡುವ ಅಗತ್ಯವೇ ಇರಲಿಲ್ಲ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಏ.19ರಂದು ಸಂಜೆ ಸಾವಿರಾರು ವೃಕ್ಷಪ್ರಿಯರು, ಪರಿಸರಪ್ರೇಮಿಗಳು ಮರ ಕಡಿದ ಜಾಗದಲ್ಲಿ ಮೇಣದ ಬತ್ತಿ ಹಿಡಿದು ಮೌನ ಪ್ರತಿಭಟನೆ ಮಾಡಿ ಮರಗಳಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಸವಾಲುಗಳನ್ನು ಇಡೀ ವಿಶ್ವ ಎದುರಿಸುತ್ತಿರುವ ಪ್ರಸಕ್ತ ಸನ್ನಿವೇಶದಲ್ಲಿ ವೃಕ್ಷ ಸಂರಕ್ಷಣೆ ಇಲಾಖೆಯ ಕರ್ತವ್ಯವಾಗಿದೆ.

ಜೀವನವೂ ಇರಬೇಕು, ಜೀವನೋಪಾಯವೂ ನಡೆಯಬೇಕು. ಅಭಿವೃದ್ಧಿಯೂ ಆಗಬೇಕು. ಪ್ರಕೃತಿ ಪರಿಸರವೂ ಉಳಿಯಬೇಕು. ಈ ರೀತಿ ಸಮತೋಲಿತವಾಗಿ ಕ್ರಮ ವಹಿಸುವುದು ಇಂದಿನ ಅಗತ್ಯವಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟಿದ್ದಾರೆ.


ಹೈದರಾಲಿ ರಸ್ತೆಯ ಅಗಲೀಕರಣದ ಅಗತ್ಯ ಇತ್ತೇ. ಮರ ಕಡಿಯುವ ಅಗತ್ಯವಿತ್ತೇ. ಮರ ಕಡಿತಲೆಗೆ ನಿಯಮಾನುಸಾರ ಕ್ರಮ ವಹಿಸಲಾಗಿದೆಯೇ ಎಂಬ ಬಗ್ಗೆ ಸಿಸಿಎಫ್ ದರ್ಜೆಯ ಅಧಿಕಾರಿಯಿಂದ ತನಿಖೆ ನಡೆಸುವಂತೆ ಸೂಚಿಸಿದ್ದಾರೆ.

ಮರಗಳನ್ನು ಹನನ ಮಾಡಿರುವ ಕೃತ್ಯವನ್ನು ಖಂಡಿಸಿ, ಟೀಂ ಮೈಸೂರು ತಂಡದವರು ವಿನೂತನವಾಗಿ ಪ್ರತಿಭಟನೆ ನಡೆಸಿದರು. ತಂಡದ ಮನೋಹರ್ ಅವರು ಮರ ತನ್ನನ್ನು ಕಡಿದಾಗ ವೇದಿಸುತ್ತಿರುವ ಹಾಗೂ ಇದಕ್ಕೆ ಕಾರಣರಾದ ಕಾರ್ಯಾಂಗ ಹಾಗೂ ಶಾಸಕಾಂಗವನ್ನು ತಮ್ಮ ಕೈ ಕುಂಚದ ಮುಖಾಂತರ ರಸ್ತೆಯಲ್ಲಿ ಚಿತ್ರಬಿಡಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

**ಮರ ಕಡಿದು ವನದೇವಿಗೆ ಶ್ರದ್ಧಾಂಜಲಿ**

**40 ಮರಗಳ ಕಡಿದ ಪ್ರಕರಣ**

ನಂತರ ತಂಡದ ಗೋಕುಲ್ ಗೋವರ್ಧನ್ ಮಾತನಾಡಿ, ಪರಿಸರಪ್ರೇಮಿಗಳು ಅಭಿವೃದ್ಧಿಯ ವಿರೋಧಿಗಳಲ್ಲ, ಪರಿಸರ ಸಂರಕ್ಷಣೆಯೊಂದಿಗೆ ಅಭಿವೃದ್ಧಿ ಮಾಡಿ ಎನ್ನುವುದು ನಮ್ಮ ಆಗ್ರಹ. ಇಲ್ಲಿ ರಸ್ತೆ ವಿಸ್ತರಣೆಯನ್ನು ಮರಗಳನ್ನು ಉಳಿಸಿಕೊಂಡು ಮಾಡಬಹುದಿತ್ತು. ಆದರೆ, ನಿಮಗೆ ಪರಿಸರದ ಬಗ್ಗೆ ಕಾಳಜಿ ಇಲ್ಲ ಎಂದು ಕಿಡಿಕಾರಿದರು. ನಗರದಲ್ಲಿ ಅನೇಕ ರಸ್ತೆಗಳು ವಿಸ್ತರಣೆ ಆಗಬೇಕಿದೆ. ಆದರೆ, ಅಧಿಕಾರಿಗಳು ಅವುಗಳನ್ನು ಮಾಡುವುದಿಲ್ಲ. ಹೈದರಾಲಿ ರಸ್ತೆಯಲ್ಲಿದ್ದ ಮರಗಳನ್ನು ಕಡಿಯುವ ಮೂಲಕ ಮರಗಳಲ್ಲಿ ಆಶ್ರಯ ಪಡೆದಿದ್ದ ಪಕ್ಷಿಗಳ ಮೇಲೆ ಗದಾಪ್ರಹಾರ ಮಾಡಲಾಗಿದೆ. ಮುಂದಾದರೂ ಅಧಿಕಾರಿಗಳು ಈ ಪರಿಸರ ಸಂರಕ್ಷಿಸಿ ಅಭಿವೃದ್ಧಿ ಮಾಡಿ ಎಂದು ಆಗ್ರಹಿಸಿದರು.



## ಬೆಂಗಳೂರಿನಲ್ಲಿ ವಿಮಾನಕ್ಕೆ ಡಿಕ್ಕಿ ಹೊಡೆದ ಟಿಟಿ ವಾಹನ!

• ಉದಯವಾಹಿನಿ, ಬೆಂಗಳೂರು

ದೇವನಹಳ್ಳಿ ಸಮೀಪದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿಲ್ಲಿಸಿದ್ದ ಇಂಡಿಗೋ ವಿಮಾನಕ್ಕೆ ಟಿಟಿ ವಾಹನ ಡಿಕ್ಕಿ ಹೊಡೆದ ಘಟನೆ ನಡೆದಿದೆ.

ಎಂಜಿನ್ ದೋಷದಿಂದ ಕೆಟ್ಟು ನಿಂತಿದ್ದ ವಿಮಾನಕ್ಕೆ ಟಿಟಿ ವಾಹನ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಟಿಟಿ ವಾಹನದ ಟಾಪ್ ಸಂಪೂರ್ಣ ನಜ್ಜುಗುಜ್ಜಾಗಿದೆ. ಟಿಟಿ ವಾಹನದ ಚಾಲಕ ಸಣ್ಣಪುಟ್ಟ ಗಾಯಗಳೊಂದಿಗೆ ಅಪಾಯದಿಂದ ಪಾರಾಗಿದ್ದಾರೆ ಎಂದು ಹೇಳಲಾಗಿದೆ. 'ಏಪ್ರಿಲ್ 18 ರಂದು ರಾತ್ರಿ 12.15 ರ ವೇಳೆಗೆ ಕಾರ್ಯಾಚರಣೆಯಲ್ಲಿಲ್ಲದ ವಿಮಾನಕ್ಕೆ ನಿಲ್ದಾಣವನ್ನು ನಿರ್ವಹಿಸುವ ಸಂಸ್ಥೆಗೆ ಸೇರಿದ ವಾಹನ ಡಿಕ್ಕಿ ಹೊಡೆದಿದೆ. ಆದರೆ ಯಾವುದೇ ಗಾಯಗಳಾಗಿಲ್ಲ,' ಎಂದು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ (ಬಿಐಎಎಲ್) ಪ್ರಕಟಣೆ ತಿಳಿಸಿದೆ.

'ಘಟನೆಗೆ ಸಂಬಂಧಿಸಿದಂತೆ ಪಾಲುದಾರರ ಜತೆ ಸಮನ್ವಯದೊಂದಿಗೆ ಎಲ್ಲಾ ಅಗತ್ಯ ಶಿಷ್ಟಾಚಾರಗಳನ್ನು ತ್ವರಿತವಾಗಿ ಪಾಲಿಸಲಾಗುತ್ತಿದೆ. ಪ್ರಯಾಣಿಕರು, ವಿಮಾನಯಾನ ಪಾಲುದಾರರು ಮತ್ತು ವಿಮಾನ ನಿಲ್ದಾಣ ಸಿಬ್ಬಂದಿ ಸುರಕ್ಷತೆ ಮತ್ತು ಭದ್ರತೆ ನಮ್ಮ ಅಗ್ರ ಆದ್ಯತೆಯಾಗಿದೆ,' ಎಂದು ಬಿಐಎಎಲ್ ಹೇಳಿದೆ.



**ಕೆಂಪೇಗೌಡ ಏರ್‌ಪೋರ್ಟ್‌ನಲ್ಲಿ ಘಟನೆ**

**ಏರ್‌ಪೋರ್ಟ್ ಡ್ಯಾಶ್‌ಬೋರ್ಡ್‌ನಲ್ಲಿ ಹಿಂದಿ ನಾಪತ್ತೆ!:** ಇತ್ತೀಚೆಗಷ್ಟೇ ಕನ್ನಡ ವೆಬ್‌ಸೈಟ್ ಆರಂಭಿಸಿದ್ದ ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರವು, ಈಗ ವಿಮಾನಗಳ ಆಗಮನ, ನಿರ್ಗಮನ ಮಾಹಿತಿ ನೀಡುವ ಡ್ಯಾಶ್‌ಬೋರ್ಡ್‌ಗಳಲ್ಲೂ ಹಿಂದಿ ಭಾಷೆ ತೆಗೆದು ಕನ್ನಡಕ್ಕೆ ಮನ್ನಣೆ ನೀಡಿದೆ. ವಿಮಾನ ನಿಲ್ದಾಣದ ಡ್ಯಾಶ್‌ಬೋರ್ಡ್‌ಗಳಲ್ಲಿ ಕನ್ನಡ ಭಾಷೆ ಕಂಡು ಕನ್ನಡಿಗ ಪ್ರಯಾಣಿಕರು ಖುಷಿಪಟ್ಟಿದ್ದಾರೆ. ಇತ್ತ ಹಿಂದಿ ಮರೆಯಾಗಿರುವುದಕ್ಕೆ ಸಾಮಾಜಿಕ ಜಾಲತಾಣದಲ್ಲಿ ಒಂದಿಷ್ಟು ಪರ - ವಿರೋಧ ಚರ್ಚೆಗಳು ನಡೆಯುತ್ತಿವೆ. ವಿಮಾನ ವೇಳಾಪಟ್ಟಿ ಪ್ರಕಟಿಸುವ ಡ್ಯಾಶ್‌ಬೋರ್ಡ್‌ಗಳಲ್ಲಿ ಕನ್ನಡಕ್ಕೆ ಮಣೆ ಹಾಕಿರುವುದನ್ನು ಎಕ್ಸ್‌ನಲ್ಲಿ ಹಂಚಿಕೊಂಡಿರುವ ನೆಟ್ಟಿಗರೊಬ್ಬರು, ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 1ರಲ್ಲಿ ಅಚ್ಚರಿ ಕಾದಿತ್ತು.

ಎಲ್ಲಾ ಡಿಜಿಟಲ್ ಬೋರ್ಡ್‌ಗಳಲ್ಲೂ ವಿಮಾನಗಳ ಹಾರಾಟ ಹಾಗೂ ಮತ್ತಿತರ ಮಾಹಿತಿಗಳು ಕೇವಲ ಇಂಗ್ಲೀಷ್ ಹಾಗೂ ಕನ್ನಡ ಭಾಷೆಯಲ್ಲಿದ್ದವು ಎಂದು ಟ್ವೀಟ್ ಮಾಡಿದ್ದಾರೆ. ಪ್ರಾದೇಶಿಕ ಭಾಷೆಯನ್ನು ಉತ್ತೇಜಿಸುವುದರಲ್ಲಿ ತಪ್ಪಿಲ್ಲ. ಆದರೆ, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹಿಂದಿಯನ್ನು ಸಂಪೂರ್ಣವಾಗಿ ಹೊರಗಿಡುವುದು ತಪ್ಪು ಸಂದೇಶ ರವಾನಿಸುತ್ತದೆ. ಪ್ರವಾಸಿಗರು, ವಲಸಿಗರು ಮತ್ತು ಇತರ ರಾಜ್ಯಗಳ ಪ್ರಯಾಣಿಕರ ಮೇಲೆ ಪರಿಣಾಮ ಬೀರಬಹುದು ಎಂದು ಕೆಲವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಬೆಂಗಳೂರಿನಲ್ಲಿ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಓಂ ಪ್ರಕಾಶ್ ಕೊಲೆ!

■ ಮಾನಸಿಕ ಸ್ಥಿಮಿತತೆ ಕಳೆದುಕೊಂಡ ಪತ್ನಿ ಕೊಲೆ ಮಾಡಿ ಪೊಲೀಸರಿಗೆ ಮಾಹಿತಿ ■ ರಕ್ತದ ಮಡುವಿನಲ್ಲಿ ಬಿದ್ದಿದ್ದ ನಿವೃತ್ತ ಅಧಿಕಾರಿಯನ್ನು ಕಂಡು ಶಾಕ್

• ಉದಯವಾಹಿನಿ, ಬೆಂಗಳೂರು

ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ (68) ಅವರನ್ನು ಹತ್ಯೆ ಮಾಡಲಾಗಿದೆ. ಬೆಂಗಳೂರಿನ ಹೆಚ್‌ಎಸ್‌ಆರ್ ಲೇಔಟ್ ನಿವಾಸದಲ್ಲಿ ಓಂ ಪ್ರಕಾಶ್ ರಕ್ತದ ಮಡುವಿನಲ್ಲಿ ಬಿದ್ದಿದ್ದರು. ನಿವೃತ್ತ ಡಿಜಿ ಮತ್ತು ಐಜಿಪಿ ಓಂ ಪ್ರಕಾಶ್ ಅವರನ್ನು ಪತ್ನಿ ಪಲ್ಲವಿಯವರೇ ಕೊಲೆ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಪ್ರಕರಣ ಸಂಬಂಧ ಪೊಲೀಸರು ಪತ್ನಿ ಪಲ್ಲವಿ ಮತ್ತು ಪುತ್ರಿ ಕೃತಿ ಅವರನ್ನು ವಶಕ್ಕೆ ಪಡೆದಿದ್ದಾರೆ.

ಪ್ರಾಥಮಿಕ ತನಿಖೆ ವೇಳೆ, ಪತಿ ಓಂ ಪ್ರಕಾಶ್ ಅವರನ್ನು ಪತ್ನಿ ಪಲ್ಲವಿಯವರು 8 ರಿಂದ10 ಬಾರಿ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

**ಚಾಕುವಿನಿಂದ 8-10 ಬಾರಿ ಇರಿದು ಕೊಲೆ**

ಚಾಕು ಇರಿತದಿಂದ ಓಂ ಪ್ರಕಾಶ್ ಅವರ ಎದೆ, ಹೊಟ್ಟೆ ಹಾಗೂ ಕೈ ಭಾಗಕ್ಕೆ ಗಂಭೀರವಾದ ಗಾಯವಾಗಿದೆ. ಇನ್ನು, ಹೊಟ್ಟೆ ಭಾಗಕ್ಕೆ ಸುಮಾರು 4-5 ಬಾರಿ ಚಾಕುವಿನಿಂದ ಇರಿದ ಪರಿಣಾಮ ತೀವ್ರ ರಕ್ತಸ್ರಾವವಾಗಿದೆ. ಮನೆಯ ಪಡಸಾಲೆ ತುಂಬ ರಕ್ತ ಹರಿದಿದೆ. ಓಂ ಪ್ರಕಾಶ್ ಅವರು ಸುಮಾರು 15-20 ನಿಮಿಷಗಳ ಕಾಲ ರಕ್ತದ ಮಡುವಿನಲ್ಲಿ ಒದ್ದಾಡಿ ಪ್ರಾಣ ಬಿಟ್ಟಿದ್ದಾರೆ. ಪತಿಯ ನರಳಾಟವನ್ನು ಪತ್ನಿ ಪಲ್ಲವಿ ನೋಡುತ್ತಾ ನಿಂತಿದ್ದರು ಎಂಬ ಮಾಹಿತಿ ದೊರೆತಿದೆ. ನಂತರ, ಪತ್ನಿ ಪಲ್ಲವಿಯವರು ಹೆಚ್‌ಎಸ್‌ಆರ್ ಲೇಔಟ್ ಪೊಲೀಸರಿಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ.

ಇನ್ನು, ಪತಿ ಓಂ ಪ್ರಕಾಶ್ ಮೃತಪಟ್ಟ ಬಳಿಕ, ಪತ್ನಿ ಪಲ್ಲವಿಯವರು ಮತ್ತೋರ್ವ ನಿವೃತ್ತ ಡಿಜಿ ಮತ್ತು ಐಜಿಪಿಯ ಪತ್ನಿಗೆ ವಿಡಿಯೋ ಕರೆ ಮಾಡಿ,'I have Finished monster' ಅಂತ ಎಂದಿದ್ದರಂತೆ.

**ಆಸ್ತಿ ವಿಚಾರಕ್ಕೆ ನಡಿತಾ ಕೊಲೆ:** ಇನ್ನು, ಓಂ ಪ್ರಕಾಶ್ ಅವರನ್ನು ಕೊಲೆ ಮಾಡಲು ಕಾರಣಗಳೇನು ಯಾವ ಕಾರಣಕ್ಕಾಗಿ ಕೊಲೆ ಮಾಡಲಾಗಿದೆ ಎಂಬುವುದರ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಈ ನಡುವೆ ಆಸ್ತಿ ವಿಚಾರಕ್ಕೆ ಕೊಲೆಯಾಗಿದೆ ಎಂಬ ಅನುಮಾನವೂ ವ್ಯಕ್ತವಾಗಿದೆ. ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರು ದಾಂಡೇಲಿಯಲ್ಲಿ ಆಸ್ತಿ ಹೊಂದಿದ್ದರು ಎನ್ನಲಾಗಿದೆ. ಈ ಆಸ್ತಿಯನ್ನು ಓಂ ಪ್ರಕಾಶ್ ಅವರು ತಮ್ಮ ತಂಗಿಯ ಹೆಸರಿಗೆ ಮಾಡಿದ್ದರು ಎಂದು ತಿಳಿದುಬಂದಿದೆ. ತಂಗಿ ಹೆಸರಿನಲ್ಲಿ ಆಸ್ತಿ ಮಾಡಿದ್ದಕ್ಕೆ ಹಲವು ದಿನಗಳಿಂದ ಓಂ ಪ್ರಕಾಶ್ ಮತ್ತು ಅವರ ಪತ್ನಿ ಪಲ್ಲವಿ ನಡುವೆ ಗಲಾಟೆ ನಡೆಯುತ್ತಿತ್ತು ಎಂದು ಹೇಳಲಾಗುತ್ತಿದೆ. ಇನ್ನು, ತಂಗಿ ವಿಚಾರವಾಗಿ ಮಾತನಾಡಬೇಡ ಅಂತ ಪತ್ನಿ ಪಲ್ಲವಿ ಅವರಿಗೆ ಓಂಪ್ರಕಾಶ್ ವಾರ್ನ್ ಮಾಡಿದ್ದರಂತೆ. ಈ ವಿಚಾರಕ್ಕೆ ಕೊಲೆಯಾಗಿದೆ ಎಂದು ಹೇಳಲಾಗುತ್ತಿದೆ. ಓಂ ಪ್ರಕಾಶ್ ಅವರಿಗೆ ಸೇರಿದ ಎರಡು ಮನೆ ಬೆಂಗಳೂರಿನಲ್ಲಿ ಇವೆ. ಕಾವೇರಿ ಜಂಕ್ಷನ್‌ನ ಪ್ರೆಸ್ಟೀಜ್ ಅಪಾರ್ಟ್ಮೆಂಟ್‌ನಲ್ಲಿ ಫ್ಲಾಟ್ ಇದೆ. ಹೆಚ್.ಎಸ್.ಆರ್ ಲೇಔಟ್‌ನ ಐಪಿಎಸ್ ಕ್ವಾಟ್ರಸ್‌ನಲ್ಲಿ ಮನೆ ಇದೆ. ಮನೆಯಲ್ಲಿ ಗಲಾಟೆ ಆದಾಗ ಓಂ ಪ್ರಕಾಶ್ ಅವರು ಪ್ರೆಸ್ಟೀಜ್ ಅಪಾರ್ಟ್ಮೆಂಟ್‌ನಲ್ಲಿ ವಾಸಿಸುತ್ತಿದ್ದರು ಎಂದು ಮಾಹಿತಿ ದೊರೆತಿದೆ.



**ಕಾಳಿ ನದಿ ಪಕ್ಕದ ಬಾಡಗುಂದ ಬಳಿ 5 ಎಕರೆ ಭೂಮಿ**

ಓಂ ಪ್ರಕಾಶ್ ಅವರು ಸೂಪಾ ತಾಲ್ಲೂಕಿನ ಸಾಮ ಜೋಯಿಡಾ ಗ್ರಾಮದಲ್ಲಿ ಶ್ರೀ ಗಂಧದ ತೋಟ ಮಾಡಿದ್ದರು. ಓಂ ಪ್ರಕಾಶ್ ಅವರು 2011-12 ರಲ್ಲಿ ನಾಗೋಡಾ ಗ್ರಾಮದ ಸರ್ವೇ ನಂಬರ್ 3 ರಲ್ಲಿನ 2 ಎಕರೆ 20 ಗುಂಟೆ ಭೂಮಿಯನ್ನು ಖರೀದಿಸಿದ್ದರು. ಶ್ರೀ ಗಂಧದ ತೋಟದಲ್ಲಿ ಸುಂದರವಾದ ಫಾರ್ಮ್ ಹೌಸ್ ಮಾಡಲಾಗಿತ್ತು. ಓಂ ಪ್ರಕಾಶ್ ಅವರು ಆಗಾಗ ಫಾರ್ಮ್ ಹೌಸ್‌ಗೆ ಬಂದು ವಿಶ್ರಾಂತಿ ಪಡೆಯುತ್ತಿದ್ದರು. ಶ್ರೀ ಗಂಧದ ಜೊತೆಗೆ ಬಾಳೆ, ಕಾಳಮೆಣಸು, ಸಾಗವಾಣಿ ಸೇರಿದಂತೆ ಬೆಳೆ ಬೆಳೆದಿದ್ದರು. ಈ ಹಿಂದೆ ಓಂ ಪ್ರಕಾಶ ತೋಟದಲ್ಲಿನ ಶ್ರೀ ಗಂಧದ ಮರಗಳು ಕಳ್ಳತನ ಆಗಿ ಕೇಸ್ ದಾಖಲಾಗಿತ್ತು. ಸೂಪಾ ತಾಲ್ಲೂಕಿನ ಕಾಳಿ ನದಿ ಪಕ್ಕದ ಬಾಡಗುಂದ ಬಳಿ ಓಂ ಪ್ರಕಾಶ್ ಅವರು ಐದು ಎಕರೆ ಭೂಮಿ ಹೊಂದಿದ್ದರು. ಐದು ಎಕರೆ ಜಾಗದಲ್ಲಿ ರೆಸಾರ್ಟ್ ನಿರ್ಮಾಣ ಮಾಡಲು ನಿರ್ಧರಿಸಿದ್ದರು. ಕಾಳಿ ನದಿಯ ಪಕ್ಕದಲ್ಲೆ ಜಾಗ ಇರುವುದರಿಂದ ರ್‍ಯಾಫ್ಟಿಂಗ್ ಆರಂಭ ಮಾಡಿದ್ದರು. ಸದ್ಯ ಐದು ಎಕರೆ ಜಮೀನು ಆವರಣದಲ್ಲಿ ರ್‍ಯಾಫ್ಟಿಂಗ್ ಮಾಡಲಾಗುತ್ತಿದೆ. ಈ ಎಲ್ಲಾ ಆಸ್ತಿಯೂ ಓಂ ಪ್ರಕಾಶ್ ಅವರ ಪುತ್ರ ಕಾರ್ತಿಕೇಶ್ ಹೆಸರಿನಲ್ಲಿದೆ.

**ಕೌಟುಂಬಿಕ ಕಲಹಕ್ಕೆ ಕೊಲೆ:** ಮೂರು ದಿನಗಳ ಹಿಂದೆ ಫ್ಯಾಮಿಲಿ ವಾಟ್ಸಾಪ್ ಗ್ರೂಪ್‌ನಲ್ಲಿ ಪತ್ನಿ ಪಲ್ಲವಿಯವರು, ನನ್ನ ಪತಿ ನನಗೆ, ಮಗಳಿಗೆ ತುಂಬಾ ಚಿತ್ರಹಿಂಸೆ ಕೊಡುತ್ತಿದ್ದಾರೆ. ಮನೆಯಲ್ಲಿ ನನ್ನ ಪತಿ ಗನ್ ಹಿಡಿದುಕೊಂಡು ಓಡಾಡುತ್ತಿದ್ದಾರೆ. ಶೂಟ್ ಮಾಡಿ ಕೊಲೆ ಮಾಡುತ್ತೇನೆ ಎಂದು ಭಯಪಡಿಸುತ್ತಿದ್ದಾರೆ. ಹೀಗಾಗಿ, ಪತಿ ವಿರುದ್ಧ ಸುಮೊಟೋ ಕೇಸ್ ದಾಖಲಿಸುವಂತೆ ಮೆಸೇಜ್ ಮಾಡಿದ್ದರಂತೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.99 ₹/L ಬಂಗಾರ: ₹9,758/Gram24ct ₹8,945/Gram22ct ಬೆಳ್ಳಿ: ₹100.00/Gram

# ಕತ್ತು ಹಿಸುಕಿ ಅಪ್ಪನನ್ನೇ ಕೊಂದ ಮಗ

• ಉದಯವಾಹಿನಿ, ಬೆಂಗಳೂರು

ತನ್ನ ಮಗನನ್ನು ಸೇನಾ ಅಧಿಕಾರಿ ಮಾಡಬೇಕೆಂದು ಕನಸು ಹೊತ್ತಿದ ನಿವೃತ್ತ ಯೋಧರೊಬ್ಬರನ್ನು ಮಗನೇ ಕುತ್ತಿಗೆ ಹಿಸುಕಿ ಕೊಲೆ ಮಾಡಿರುವ ಘಟನೆ ವಿವೇಕ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಂದು ಮುಂಜಾನೆ ನಡೆದಿದೆ. ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಮಾಜಿ ಯೋಧರಾದ ಬೋಲುಅರಬ್ (47) ಕೊಲೆಯಾದವರು. ಇವರ ಪುತ್ರ ಸಮೀರ್ (19) ನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ವಿವೇಕನಗರದ ಬಸ್ ನಿಲ್ದಾಣ ಹಿಂಭಾಗದಲ್ಲಿರುವ ಹೊನ್ನಾರ ಪೇಟೆಯ ಮನೆಯೊಂದರಲ್ಲಿ ಬೋಲು ಅರಬ್ ಕುಟುಂಬ ವಾಸವಾಗಿದೆ. ಸಮೀರ್ ಸ್ಥಳೀಯ ಕಾಲೇಜಿನಲ್ಲಿ ಪ್ರಥಮ ವರ್ಷದ ಬಿ.ಕಾಂ ಪದವಿ ವ್ಯಾಸಂಗ ಮಾಡುತ್ತಿದ್ದಾನೆ. ಸಮೀರ್ ಸೇರಿದಂತೆ ಮನೆಯಲ್ಲಿ ಎಲ್ಲರೂ ನಿಯಮ ಪಾಲಿಸಬೇಕು ಎಂದು ಬೋಲುಅರಬ್ ಕಟ್ಟುನಿಟ್ಟಾಗಿ ಹೇಳುತ್ತಿದ್ದರು. ಆದರೆ ಕುಟುಂಬವನ್ನು ಹೆಚ್ಚು ಪ್ರೀತಿಸುತ್ತಿದ್ದರು.

ಸಮಯಪಾಲನೆ, ಆಚಾರ-ವಿಚಾರದಲ್ಲಿ ಕುಟುಂಬದವರ ಜೊತೆ ರಾಜಿ ಮಾಡಿಕೊಳ್ಳುತ್ತಿರಲಿಲ್ಲ. ಮಗ ಸಮೀರ್ ಕಾಲೇಜಿಗೆ ತೆರಳಿ ಮನೆಗೆ ತಡವಾಗಿ ಬಂದಾಗಲೆಲ್ಲ ಪ್ರಶ್ನಿಸುತ್ತಿದ್ದರು ಮತ್ತು ಅನಗತ್ಯವಾಗಿ ಹಣವೆಚ್ಚ ಮಾಡಬಾರದೆಂದು ಬುದ್ಧಿ ಮಾತು ಹೇಳುತ್ತಿದ್ದರು. ಆದರೆ ಇದು ಮಗ ಸಮೀರ್‌ಗೆ ಇಷ್ಟವಾಗುತ್ತಿರಲಿಲ್ಲ. ಇದೇ ವಿಚಾರದಲ್ಲಿ ತಂದೆ ಮಗನ ಜೊತೆ ವಾಗ್ವಾದ ನಡೆಯುತಿತ್ತು. ಕಳೆದ ರಾತ್ರಿ ಇದೇ ವಿಚಾರಕ್ಕೆ ಜಗಳ ನಡೆದು ಮುಂಜಾನೆ 2 ಗಂಟೆ ಸಂದರ್ಭದಲ್ಲಿ ಅಪ್ಪನ ಕುತ್ತಿಗೆ ಹಿಸುಕಿ ಮಗನೇ ಕೊಲೆ ಮಾಡಿದ್ದಾನೆ. ನಂತರ ಯಾರೋ ಐದಾರು ಜನ ಬಂದು ಹಲ್ಲೆ ಮಾಡಿ ಹೋದರು ಎಂದು ಪೊಲೀಸರಿಗೆ ತಿಳಿಸಿದ್ದ. ಸುದ್ದಿ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಸ್ಥಳೀಯ ಸಿಸಿ ಟಿವಿಗಳನ್ನು ನೋಡಿ ಪರಿಶೀಲನೆ ನಡೆಸಿದಾಗ ಯಾರೂ ಕೂಡ ಮನೆಯ ಒಳಗೆ ಬಾರದಿರುವುದನ್ನು ಅರಿತು ಸಮೀರ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಸತ್ಯಾಂಶ ಬೆಳಕಿಗೆ ಬಂದಿದೆ. ಘಟನೆ ಸಂದರ್ಭದಲ್ಲಿ ಮಗನಿಗೆ ತಾಯಿ ಸಹಕಾರ ನೀಡಿರಬಹುದೆಂದು ಅನುಮಾನ ಇದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಗ್ಗೆ ವಿವೇಕನಗರ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ ಎಂದು ತನಿಖೆ ಮುಂದುವರೆದಿದೆ.

# ಇದು ಬೆಂಗಳೂರು.. ಕನ್ನಡ ಅಲ್ಲ, ಹಿಂದಿ ಮಾತನಾಡು: ಚಾಲಕನಿಗೆ ಯುವಕನ ದರ್ಪ

• ಉದಯವಾಹಿನಿ, ಬೆಂಗಳೂರು

ಭಾಷೆಯ ವಿಚಾರವಾಗಿ ಯುವಕನೊಬ್ಬ ಬೆಂಗಳೂರಿನಲ್ಲಿ ಆಟೋ ಚಾಲಕನ ಜೊತೆ ಜಗಳ ತೆಗೆದಿರುವ ಘಟನೆ ನಡೆದಿದೆ. ಈ ಕುರಿತ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ್ದು ಯುವಕನ ವರ್ತನೆಗೆ ಕನ್ನಡಿಗರು ಕಿಡಿಕಾರಿದ್ದಾರೆ. ಹಳೆ ಏರ್ಪೋರ್ಟ್ ರಸ್ತೆಯ ಮುರುಗೇಶನಪಾಳ್ಯದಲ್ಲಿ ಈ ಘಟನೆ ನಡೆದಿದೆ ಎನ್ನಲಾಗಿದೆ. ಆಟೋ ಚಾಲನೊಂದಿಗೆ ಯಾವುದೊ ವಿಚಾರಕ್ಕೆ ಜಗಳ ತೆಗೆದಿದ್ದ ಅನ್ಯ ರಾಜ್ಯದ ಯುವಕ ಇದು ಬೆಂಗಳೂರು ಇರಬಹುದು, ಕನ್ನಡ ಅಲ್ಲ, ನೀನು ಹಿಂದಿ ಮಾತನಾಡು ಎಂದು ಆಟೋ ಚಾಲಕನ ಎದುರು ದುರಹಂಕಾರ ಪ್ರದರ್ಶಿಸಿದ್ದಾನೆ. ಇದಕ್ಕೆ ಆಟೋ ಚಾಲಕ, ನೀನು ಬೆಂಗಳೂರಿಗೆ ಬಂದಿರುವುದು ನೀನು ಕನ್ನಡ ಮಾತನಾಡು' ಎಂದು ತಿರುಗೇಟು ನೀಡಿದ್ದಾರೆ. ಆಟೋ ಚಾಲಕ ಮಾಡಿಕೊಂಡಿರುವ ಈ ವಿಡಿಯೋ ಸಾಕಷ್ಟು ಗಮನ ಸೆಳೆದಿದ್ದು ಅನೇಕ ನೆಟ್ಟಿಗರು ಯುವಕನ ವರ್ತನೆಯನ್ನು ಖಂಡಿಸಿದ್ದಾರೆ. ಬೆಂಗಳೂರಿನಲ್ಲಿ ಮೇಲಿಂದ ಮೇಲೆ ಹಿಂದಿ ಭಾಷಿಕರ ಹಾವಳಿ ಹೆಚ್ಚುತ್ತಿದೆ ಎಂದು ನೆಟ್ಟಿಗರು ಆರೋಪಿಸಿದ್ದಾರೆ.

# ಚಾಲಕನ ಅಪಹರಣ ರೌಡಿಶೀಟರ್ ಸೇರಿ ನಾಲ್ವರ ಬಂಧನ

• ಉದಯವಾಹಿನಿ, ಬೆಂಗಳೂರು

ಮಿನಿ ಬಸ್ ಚಾಲಕನನ್ನು ಅಪಹರಿಸಿ ಹಲ್ಲೆ ನಡೆಸಿದ್ದ ರೌಡಿಶೀಟರ್ ಸೇರಿ ನಾಲ್ವರು ಆರೋಪಿಗಳನ್ನು ತಲಘಟ್ಟಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ. ತಲಘಟ್ಟಪುರ ಠಾಣೆ ರೌಡಿಶೀಟರ್ ಮಂಜೇಶ್ ಅಲಿಯಾಸ್ ಅವಲಹಳ್ಳಿ ಮಂಜ, ಆತನ ಸಹಚರರಾದ ದಿಲೀಪ್, ಚಂದ್ರಶೇಖರ್, ನೂತನ್ ಬಂಧಿತರು. ಆರೋಪಿಗಳು ಏ.8ರಂದು ಮಿನಿ ಬಸ್ ಚಾಲಕ ಕಿರಣ್ ಎಂಬಾತನನ್ನು ಬಸ್ ಸಮೇತ ಅಪಹರಿಸಿದ್ದರು. ನಂತರ ಹಲ್ಲೆ ನಡೆಸಿದ್ದರು. ಅಲ್ಲದೇ ಕಿರಣ್ ಅವರ ಬಳಿಯಿದ್ದ ಹಣವನ್ನೂ ಕಸಿದುಕೊಂಡಿದ್ದರು. ಕಿರಣ್ ಕುಟುಂಬಸ್ಥರು ನೀಡಿದ ದೂರು ಆಧರಿಸಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದರು.

ಅಪಹರಣಕ್ಕೆ ಒಳಗಾದ ಕಿರಣ್ ಅವರು ಈ ಹಿಂದೆ ಮಂಜೇಶ್ ಪತ್ನಿಯ ತವರು ಮನೆಯಲ್ಲಿ ಕಾರು ಚಾಲಕನಾಗಿ ಕೆಲಸ ಮಾಡುತ್ತಿದ್ದರು. ಆಗ ಕಿರಣ್‌ಗೆ ಮಂಜೇಶ್ ಅವರ ಪತ್ನಿಯ ಪರಿಚಯವಾಗಿತ್ತು. ಆತ್ಮೀಯತೆ ಇತ್ತು ಎನ್ನಲಾಗಿದೆ. ಬಳಿಕ ಕಿರಣ್ ಕೆಲಸ ಬಿಟ್ಟು ಸ್ವಂತ ಮಿನಿ ಬಸ್ ಖರೀದಿಸಿ ಪ್ರವಾಸಿ ತಾಣಗಳಿಗೆ ಬಾಡಿಗೆಗೆ ಹೋಗುತ್ತಿದ್ದರು. ಈ ಮಧ್ಯೆ ಕಿರಣ್ ಅವರಿಂದ ಮಂಜೇಶ್ ಅವರ ಪತ್ನಿ 40 ಸಾವಿರ ಸಾಲ ಪಡೆದುಕೊಂಡಿದ್ದರು. ಸಾಲವನ್ನೂ ತೀರಿಸುತ್ತಿದ್ದರು. ಇಬ್ಬರ ಸ್ನೇಹದ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದ ಮಂಜೇಶ್ ಏಪ್ರಿಲ್ 8ರಂದು ಮಹಿಳೆಯೊಬ್ಬರಿಂದ ಕರೆ ಮಾಡಿಸಿದ್ದ. ಕೋಟಿ ಲಿಂಗೇಶ್ವರಕ್ಕೆ ಪ್ರವಾಸಕ್ಕೆ ಹೋಗಬೇಕು. ಬಾಡಿಗೆಗೆ ಬಸ್ ಬೇಕು ಎಂದು ಹೇಳಿದ್ದರು. ಬಾಡಿಗೆಗೆ ಬಂದಾಗ ಬೇರೊಂದು ಸ್ಥಳಕ್ಕೆ ಕರೆದೊಯ್ದು ಹಲ್ಲೆ ನಡೆಸಿದ್ದರು ಎಂದು ಮೂಲಗಳು ತಿಳಿಸಿವೆ.

ಪಾಲಿಕೆ ಮಾಜಿ ಸದಸ್ಯ ಸೋಮಣ್ಣ ಅವರ ಅಣ್ಣನ ಮಗ ವಿನೋದ್ ಕೊಲೆ ಪ್ರಕರಣದಲ್ಲಿ ಜೈಲು ಸೇರಿದ್ದ ಮಂಜೇಶ್, ಎರಡು ತಿಂಗಳ ಹಿಂದೆ ಜಾಮೀನು ಪಡೆದು ಬಿಡುಗಡೆಯಾಗಿದ್ದ' ಎಂದು ಮೂಲಗಳು ತಿಳಿಸಿವೆ.

# ಆರೋಪಿಗಳು ನಾಪತ್ತೆ: ಮಾಹಿತಿ ನೀಡಲು ಲೋಕಾಯುಕ್ತ ತನಿಖಾ ತಂಡ ಮನವಿ

• ಉದಯವಾಹಿನಿ, ಬೆಂಗಳೂರು

ನ್ಯಾಯಾಲಯಕ್ಕೆ ವಿಚಾರಣೆಗೆ ಹಾಜರಾಗದೇ ತಲೆಮರೆಸಿಕೊಂಡಿರುವ ನಿವ್ಯಾ ಟ್ರೇಡರ್ಸ್‌ನ ವಿ.ಸುಕುಮಾರ್ ಮತ್ತು ಪ್ರೋಗ್ರೆಸಿವ್ ಮೈನ್ಸ್ ಅಂಡ್ ಮಿನರೆಸ್ಸಿನ ರಾಜ್‌ಕುಮಾರ್ ಕ್ರಿಶ್ಚಿಯನ್ ಅವರ ಬಗ್ಗೆ ಮಾಹಿತಿ ನೀಡುವಂತೆ ಲೋಕಾಯುಕ್ತ ವಿಶೇಷ ತನಿಖಾ ತಂಡ ಸಾರ್ವಜನಿಕರಿಗೆ ಮನವಿ ಮಾಡಿದೆ.

23ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯವು ಘೋಷಿತ ಆರೋಪಿಗಳು ಎಂದು ಪ್ರಕಟಿಸಿದೆ . ಆರೋಪಿಗಳ ಬಗ್ಗೆ ಮಾಹಿತಿ ದೊರೆತಲ್ಲಿ ವಿಶೇಷ ತನಿಖಾ., ಲೋಕಾಯುಕ್ತ ಪೊಲೀಸ್ ಅಧೀಕ್ಷಕರು 9449840251, 9448023018, 080-22942702 ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

## ಜಾತಿ ಗಣತಿ ವರದಿ ಚರ್ಚಿಸಲು ಸರ್ವಪಕ್ಷ ಸಭೆ ಕರೆಯಿರಿ, ಸ್ವಾಮೀಜಿಗಳನ್ನು ಆಹ್ವಾನಿಸಿ: ನಿಖಿಲ್ ಕುಮಾರಸ್ವಾಮಿ ಒತ್ತಾಯ

# ಜಾತಿಗಣತಿ ವರದಿ ಸಮೀಕ್ಷೆ ಕ್ರಮಬದ್ಧವಾಗಿಲ್ಲ

• ಉದಯವಾಹಿನಿ, ಬೆಂಗಳೂರು



ಜಾತಿಗಣತಿ ವರದಿ ಬಗ್ಗೆ ಚರ್ಚಿಸಲು ರಾಜ್ಯ ಸರಕಾರ ಕೂಡಲೇ ಸರ್ವಪಕ್ಷ ಸಭೆ ಕರೆಯಬೇಕು. ಹಾಗೆಯೇ ಎಲ್ಲಾ ಸಮುದಾಯಗಳ ಸ್ವಾಮೀಜಿಗಳು, ಮುಖಂಡರು, ಬುದ್ಧಿಜೀವಿಗಳನ್ನು ಆಹ್ವಾನಿಸಿ ಸಮಾಲೋಚನೆ ನಡೆಸಿ ಸರ್ವಸಮ್ಮತ ಪರಿಹಾರ ಕಂಡುಕೊಳ್ಳಬೇಕು ಎಂದು ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದರು. ಜೆಡಿಎಸ್ ರಾಜ್ಯ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತಿಗಣತಿಯನ್ನು ಜೆಡಿಎಸ್ ಯಾವುದೇ ಕಾರಣಕ್ಕೂ ವಿರೋಧಿಸುತ್ತಿಲ್ಲ. ಸಮೀಕ್ಷೆ ಕ್ರಮಬದ್ಧವಾಗಿಲ್ಲ, ಸೋರಿಕೆಯಾರುವ ಅಂಕಿಅಂಶಗಳ ಸತ್ಯಾಸತ್ಯತೆ ಬಗ್ಗೆಯಷ್ಟೇ ಪ್ರಶ್ನೆ ಮಾಡಿದ್ದೇವೆ. ಸಮೀಕ್ಷರು ಯಾರ ಮನೆಗೆ ಹೋಗಿದ್ದಾರೆ, ಯಾವ ಮಾನದಂಡದಡಿ ಸಮೀಕ್ಷೆ ನಡೆಸಿದ್ದಾರೆ ಎಂಬ ಸರಿಯಾದ ಮಾಹಿತಿ ಇಲ್ಲ. ಹಾಗಾಗಿ ಇಡೀ ವರದಿಯನ್ನು ಪುನರ್ ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

**ಪಶ್ಚಾತ್ತಾಪ ಯಾತ್ರೆಯ ದಿನ ದೂರವಿಲ್ಲ:** ಭಾರತ್ ಜೋಡೋ ಯಾತ್ರೆ ನಡೆಸಿದ ರಾಹುಲ್ ಗಾಂಧಿ ಅವರಿಗೆ ಒಂದು ಪ್ರಶ್ನೆ ಸಮೀಕ್ಷೆ ಹೆಸರಿನಲ್ಲಿ ಜಾತಿ ಜಾತಿ ಒಡೆದು ಕರ್ನಾಟಕಕ್ಕೆ ಯಾವ ಸಂದೇಶ ಕೊಡುತ್ತೀರಿ? ಸಮುದಾಯಗಳ ನಡುವೆ ವಿಷಬೀಜ ಬಿತ್ತಿದ್ದು, ಜನ ಬೀದಿಬೀದಿಗಳಲ್ಲಿ ಹೊಡೆದಾಡಬೇಕೇ? ನೀವು ಮಾಡಿದ ಪಾಪಕ್ಕೆ ಪಶ್ಚಾತ್ತಾಪ ಯಾತ್ರೆ ಮಾಡುವ ದಿನ ದೂರವಿಲ್ಲ, ಎಂದು ಹೇಳಿದರು.

### ಡಿಕೆಶಿ ವಿರುದ್ಧ ವಾಗ್ದಾಳಿ

**ಮಿಸ್ಟರ್ ಡಿ.ಕೆ.ಶಿವಕುಮಾರ್ ಅವರೇ, ಪೆನ್ನು ಪೇಪರ್ ಕೊಡಿ ಎಂದು ಅಂಗಲಾಚಿ ಬೇಡಿಕೊಂಡಿರಿ. ಜನರು ಕೊಟ್ಟಿದ್ದಾರೆ. ಆ ಪೆನ್ನು ಪೇಪರ್ ಯಾವುದಕ್ಕೆ ಬಳಸುತ್ತಿದ್ದೀರಿ ನಿಮ್ಮ ಆತ್ಮಸಾಕ್ಷಿಯನ್ನು ಪ್ರಶ್ನಿಸಿಕೊಳ್ಳಿ ಕೇಂದ್ರ ಸರಕಾರದ ವಿರುದ್ಧ ಪ್ರತಿಭಟನೆಯಲ್ಲಿ ಖಾಲಿ ಸಿಲಿಂಡರ್ ಎತ್ತಿಕೊಂಡು ಪೋಸ್ ಕೊಟ್ಟಿದ್ದೀರಿ. ಭಾರವನ್ನೆಲ್ಲಾ ಜನರ ಮೇಲೆ ಹಾಕಿ ಖಾಲಿ ಎತ್ತಲು ನೀವೇ ಬೇಕೆ ಶಿವಕುಮಾರಣ್ಣ ಅದ್ಭುತ ನಟನೆ ನಿಮ್ಮದು, ಎಂದು ವ್ಯಂಗ್ಯವಾಡಿದರು.**

### ಜಾತಿ ಗಣತಿ ವರದಿಗೆ ಜೈನ ಸಮಾಜ ವಿರೋಧ

**ರಾಜ್ಯ ಸರಕಾರ ನಡೆಸಿದ ಜಾತಿ ಗಣತಿ ವರದಿಯಲ್ಲಿ ಜೈನ ಸಮಾಜದ ಜನಸಂಖ್ಯೆ 2011ನೇ ಸಾಲಿಗಿಂತಲೂ ಕಡಿಮೆಯಾಗಿರುವುದು ತಿಳಿದುಬಂದಿದೆ. ಆದ್ದರಿಂದ ಸಮಂಜಸವಲ್ಲದ ಈ ವರದಿ ಯನ್ನು ಒಪ್ಪಲು ಸಾಧ್ಯವಿಲ್ಲವೆಂದು ಹೊಂಬುಜ ಜೈನಮಠದ ಡಾ. ದೇವೇಂದ್ರ ಕೀರ್ತಿ ಭಟ್ಟಾರಕ ಸ್ವಾಮೀಜಿ ಹೇಳಿದರು.**

ಸರಿಯಾದ ಮಾಹಿತಿ ಇಲ್ಲ

ಹೊಂಬುಜ ಜೈನಮಠದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಜೈನ ಸಮುದಾಯ ಯಾರ ವಿರೋಧಿಗಳು ಅಲ್ಲ. ಸಂಪುಟ ಸಭೆಯಲ್ಲಿ ಮಂಡಿಸಿರುವ ವರದಿಯಲ್ಲಿ ಜೈನರ ಸಂಖ್ಯೆ 3 ಲಕ್ಷ ತೋರಿಸಿರುವುದು ಕಳವಳಕಾರಿಯಾಗಿದೆ. ಒಂದು ಅಂದಾಜಿನ ಪ್ರಕಾರ ರಾಜ್ಯದಲ್ಲಿ 17 ರಿಂದ 20 ಲಕ್ಷ ಜೈನ ಜನಸಂಖ್ಯೆ ಇರುವುದು ತಿಳಿದು ಬಂದಿದೆ. ರಾಜ್ಯಾದ್ಯಂತ ಗ್ರಾಮೀಣ ಪ್ರದೇಶದಲ್ಲಿ ದುಡಿದು ತಿನ್ನುವ ಬಡ ಜೈನರು ಇದ್ದಾರೆ. ಇವರುಗಳ ನಿಖರ ಮಾಹಿತಿ ಅಗತ್ಯವಿದ್ದು, ಪುನರ್ ಗಣತಿ ಆಗಬೇಕಿದೆ. ಸರಕಾರದಲ್ಲಿ ಜಾತಿ ಆಧಾರಿತ ಮನ್ನಣೆ ನೀಡುವ ವ್ಯವಸ್ಥೆಯಿದೆ. ಆದರೆ, ಜಾತಿ ಆಧಾರಿತವಾಗಿ ರಾಜಕೀಯ ಹುದ್ದೆ ಪಡೆಯುವ ಆಕಾಂಕ್ಷಿಗಳು ನಾವಲ್ಲ. ಜನಗಣತಿಯ ಅಂಕಿಅಂಶದ ಆಧಾರದ ಮೇಲೆ ಸಂವಿಧಾನಾತ್ಮಕವಾದ ಹಕ್ಕನ್ನು ಕೇಳುತ್ತೇವೆ. ಆದ್ದರಿಂದ ಈಗಿನ ಜಾತಿ ಗಣತಿಯನ್ನು ಒಪ್ಪಲಾಗದು ಎಂದರು.

# ಬಿಜೆಪಿಗೆ ಎ.ಟಿ.ರಾಮಸ್ವಾಮಿ ರಾಜೀನಾಮೆ

• ಉದಯವಾಹಿನಿ, ಬೆಂಗಳೂರು



ಮಾಜಿ ಶಾಸಕ ಎ.ಟಿ.ರಾಮಸ್ವಾಮಿ ಬಿಜೆಪಿಗೆ ರಾಜೀನಾಮೆ ನೀಡಿದ್ದಾರೆ. ಬಿ.ವೈ.ವಿಜಯೇಂದ್ರ ಅವರಿಗೆ ಬರೆದಿರುವ ಪತ್ರದಲ್ಲಿ ಬಿಜೆಪಿ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುವು ದಾಗಿ ತಿಳಿಸಿದ್ದಾರೆ. ಅಲ್ಲದೆ ರಾಮಸ್ವಾಮಿ ಅವರು ಯಾವ ಕಾರಣಕ್ಕೆ ರಾಜೀನಾಮೆ ನೀಡುತ್ತಿದ್ದಾರೆ? ಮುಂದಿನ ನಡೆ ಏನು? ಎಂಬುದನ್ನೂ ಪತ್ರದಲ್ಲಿ ತಿಳಿಸಿದ್ದು, ತಮನ್ನು ಪರಿಸರ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದಾಗಿ ಅವರು ಹೇಳಿದ್ದಾರೆ. ಮತ್ತೊಂದೆಡೆ ಅವರು ಬೇರೆ ಪಕ್ಷಕ್ಕೆ ಸೇರ್ಪಡೆ ಯಾಗುವ ಮಾತುಗಳು ಕೂಡ ಕೇಳಿಬರುತ್ತಿವೆ. ನಾವು ಪರಿಸರವನ್ನು ಉಳಿಸಿದರೆ, ಜೀವ ಸಂಕುಲ ಉಳಿಯುತ್ತವೆ.

### ರಾಜೀನಾಮೆ ಪತ್ರದಲ್ಲೇನಿದೆ?

**ರಾಮಸ್ವಾಮಿ ಅವರು ವಿಜಯೇಂದ್ರಗೆ ಬರೆದಿರುವ ಪತ್ರದಲ್ಲಿ, ವಿಶ್ವ ತಾಪಮಾನ ವಿಪರೀತ ಏರಿಕೆಯಿಂದ ಹವಾ ಮಾನದ ಅಸಮತೋಲನ ಉಂಟಾಗಿದ್ದು, ಇದರಿಂದ ನೆರೆ, ಬರ, ಚಂಡಮಾರುತ, ಭೂಕಂಪಗಳು ಹೆಚ್ಚಾಗಿವೆ. ನಾವು ಕುಡಿಯುತ್ತಿರುವ ನೀರು, ಉಸಿರಾಡುವ ಗಾಳಿ, ಸೇವಿಸುವ ಆಹಾರ ಎಲ್ಲವೂ ವಿಷಪೂರಿತವಾಗಿದೆ. ಬೆಟ್ಟ-ಗುಡ್ಡ, ಅರಣ್ಯ ನಾಶದಿಂದ ನದಿ ಜಲಮೂಲಗಳು ಬತ್ತಿ ಹೋಗಿವೆ. ಅಂತರ್ಜಲ ಮಟ್ಟವೂ ಕುಸಿದು ಹೋಗಿದೆ. ಇದರಿಂದ ಜೀವ ಸಂಕುಲಗಳಿಗೆ ಸಂಕಷ್ಟ ಎದುರಾಗಿದೆ. ಈಗಲಾದರೂ ನಾವು ಜನ ಜಾಗೃತಿ ಮೂಡಿಸಿ ಪರಿಸರ ಸಂರಕ್ಷಣೆ ಕೆಲಸ ಮಾಡಬೇಕು ಎಂದು ರಾಮಸ್ವಾಮಿ ಹೇಳಿದ್ದಾರೆ.**

ಇಂತಹ ಸನ್ನಿವೇಶದಲ್ಲಿ ರಾಜಕೀಯಕ್ಕಿಂತ ಪರಿಸರ ಸಂರಕ್ಷಣೆಯೇ ಮುಖ್ಯ ಎಂದು ಭಾವಿಸಿದ್ದೇನೆ. ಹಾಗಾಗಿ ನನ್ನ ಪೂರ್ಣ ಸಮಯವನ್ನು ಕೃಷಿಯ ಜೊತೆಗೆ ಪರಿಸರ ಸಂರಕ್ಷಣೆ ಕೆಲಸದಲ್ಲಿ ತೊಡಗಿಸಿಕೊಳ್ಳಲು ತೀರ್ಮಾನಿಸಿದ್ದೇನೆ. ಈಗಾಗಲೇ ನಾನು ನಿಮೊಂದಿಗೆ ಈ ವಿಚಾರವಾಗಿ ಮಾತನಾಡಿದ್ದೇನೆ. ಇದೀಗ ಬಿಜೆಪಿ ಪಕ್ಷದ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತಿದ್ದೇನೆ. ಇಲ್ಲಿವರೆಗೆ ತಾವೆಲ್ಲರೂ ತೋರಿದ ಪ್ರೀತಿ ವಿಶ್ವಾಸಕ್ಕೆ ನಾನು ಕೃತಜ್ಞ ಎಂದು ತಿಳಿಸಿದ್ದಾರೆ.

ಕಳೆದ ವಿಧಾನಸಭೆ ಚುನಾವಣೆಯ ವೇಳೆ ರಾಮಸ್ವಾಮಿ ಅವರು ಜೆಡಿಎಸ್ ತೊರೆದು ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗಿದ್ದರು. ಹಾಸನ ಜಿಲ್ಲೆಯ ಅರಕಲಗೂಡು ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮಾಜಿ ಶಾಸಕರಾಗಿದ್ದ ಇವರು ದೆಹಲಿಯಲ್ಲೇ ಕೇಂದ್ರ ಸಚಿವ ಅನುರಾಗ್ ಠಾಕೂರ್ ಅವರ ಸಮ್ಮುಖದಲ್ಲಿ ಬಿಜೆಪಿ ಸೇರ್ಪಡೆಯಾಗಿದ್ದರು.

ನಾನು ಅತ್ಯಂತ ಸಂತೋಷದಿಂದ ಬಿಜೆಪಿ ಸೇರಿದ್ದೇನೆ. ಮೋದಿ, ಅಮಿತ್ ಶಾ, ನಡ್ಡಾ ಅವರನ್ನು ಭೇಟಿಯಾಗುತ್ತಿರುವುದು ಸಂತಸ ಮೂಡಿದೆ. ಇಡೀ ವಿಶ್ವದಲ್ಲೇ ಭಾರತವು ಪ್ರಗತಿಯಲ್ಲಿ ದಾಪುಗಾಲು ಇಡುತ್ತಿದೆ. ಬಿಜೆಪಿ ನಾಯಕರು ಮೌಲ್ಯಗಳನ್ನು ಇಟ್ಟುಕೊಂಡು ಕೆಲಸ ಮಾಡುತ್ತಿದ್ದು, ಇದೇ ಕಾರಣಕ್ಕೆ ನಾನು ಬಿಜೆಪಿ ಸೇರುತ್ತಿದ್ದೇನೆ ಎಂದು ಹೇಳಿದ್ದರು.

ಆದರೆ ಜೆಡಿಎಸ್ ಜತೆ ಬಿಜೆಪಿ ಮೈತ್ರಿ ಮಾಡಿಕೊಂಡ ವಿಚಾರವಾಗಿ ರಾಮಸ್ವಾಮಿ ಅವರು ಭಾರೀ ಅಸಮಾಧಾನಗೊಂಡಿದ್ದರು, ಅಲ್ಲದೆ ಇತ್ತೀಚೆಗೆ ಬಿಜೆಪಿಯಿಂದಲೂ ಅಂತರ ಕಾಯ್ದುಕೊಂಡಿದ್ದರು.

# ಪ್ರಾಸಿಕ್ಯೂಷನ್‌ಗೆ ಸ್ಪೀಕರ್ ಅನುಮತಿ

• ಉದಯವಾಹಿನಿ, ಬೆಂಗಳೂರು



### ಶಾಸಕ ಮುನಿರತ್ನಗೆ ಸಂಕಷ್ಟ

ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕ ಮುನಿರತ್ನ ಅವರ ಮೇಲೆ ಚಾರ್ಜ್ ಶೀಟ್ ಆಗಿರುವ ಪ್ರಕರಣವೊಂದರಲ್ಲಿ ಪ್ರಾಸಿಕ್ಯೂಷನ್‌ಗೆ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಅನುಮತಿ ನೀಡಿದ್ದಾರೆ.ಹನಿಟ್ರ್ಯಾಪ್ ನಡೆಸಲು ಎಚ್‌ಐವಿ ಸೋಂಕಿತ ಮಹಿಳೆಯರನ್ನು ಬಳಸಿಕೊಂಡಿದ್ದು, ದಲಿತರ ಮೇಲೆ ಜಾತಿ ನಿಂದನೆ ಒಳಗೊಂಡಂತೆ ಬಹಳ ಗಂಭೀರ ಆರೋಪಗಳನ್ನು ಶಾಸಕ ಮುನಿರತ್ನ ಎದುರಿಸುತ್ತಿದ್ದಾರೆ. ಅವರ ಮೇಲೆ ಎಫ್‌ಐಆರ್ ಕೂಡಾ ದಾಖಲಾಗಿದೆ. ಈ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಜೈಲಿನಲ್ಲಿಯೂ ಇದ್ದರು. ಆ ನಂತರ ಜಾಮೀನು ಪಡೆದು ಹೊರಬಂದು ಕಳೆದ ಬಜೆಟ್ ಅಧಿವೇಶನದಲ್ಲೂ ಭಾಗಿಯಾಗಿದ್ದರು. ಬಜೆಟ್ ಅಧಿವೇಶನದಲ್ಲಿ ಸಚಿವ ಕೆ.ಎನ್.ರಾಜಣ್ಣ ಹನಿಟ್ರ್ಯಾಪ್ ನಡೆಯುತ್ತಿದೆ ಎಂದು ಹೇಳಿದ್ದು, ಆಗ ದೊಡ್ಡ ಚರ್ಚೆಯ ವಿಷಯವಾಗಿತ್ತು. ಬಿಜೆಪಿ ಶಾಸಕರು ದೊಡ್ಡ ಮಟ್ಟದ ಪ್ರತಿಭಟನೆಯನ್ನೂ ಮಾಡಿದ್ದರು. ಈ ವೇಳೆ ಹನಿಟ್ರ್ಯಾಪ್, ಜಾತಿ ನಿಂದನೆ ಆರೋಪ ಹೊತ್ತಿದ್ದ ಮುನಿರತ್ನ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದು ಟೀಕೆಗೆ ಗುರಿಯಾಗಿತ್ತು. ಇದೀಗ ಜಾತಿನಿಂದನೆ ಕೇಸ್ ಶಾಸಕ ಮುನಿರತ್ನಗೆ ಸಂಕಷ್ಟ ತಂದೊಡ್ಡಿದೆ. ಪ್ರಾಸಿಕ್ಯೂಷನ್‌ಗೆ ಒಳಪಡಿಸಲು ಸ್ಪೀಕರ್ ಯು. ಟಿ.ಖಾದರ್ ಅನುಮತಿ ಕೊಟ್ಟಿದ್ದಾರೆ. ಈ ಸಂಬಂಧ ಒಳಾಡಳಿತ ಇಲಾಖೆ ಆದೇಶ ಹೊರಡಿಸಿದೆ. ಜಾತಿನಿಂದನೆ ಆರೋಪ ಸಂಬಂಧ ವೈಯಾಲಿಕಾವಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಪ್ರಕರಣದ ತನಿಖೆಯನ್ನು ಸಿಐಡಿಯ ಎಸ್‌ಐಟಿಗೆವಹಿಸಲಾಗಿತ್ತು. ತನಿಖೆ ನಡೆಸಿದ್ದ ಎಸ್‌ಐಟಿ ಕೋರ್ಟ್‌ಗೆ ಚಾರ್ಜ್‌ಶೀಟ್ ಸಲ್ಲಿಸಿತ್ತು. ಮುನಿರತ್ನ ಶಾಸಕರಾಗಿರುವ ಕಾರಣ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಸ್ಪೀಕರ್ ಮೊರೆ ಹೋಗಿತ್ತು. ಇದೀಗ ಸ್ಪೀಕರ್ ಯು.ಟಿ.ಖಾದರ್ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಇದರಿಂದ ಕೋರ್ಟ್ ವಿಚಾರಣೆ ನಡೆಸಲು ಅನುಕೂಲ ಆಗಲಿದೆ.**

# ರಿಕ್ಕಿ ರೈ ಹತ್ಯೆಯತ್ನ, ಸುಪಾರಿ ನೀಡಿರುವ ಶಂಕೆ

• ಉದಯವಾಹಿನಿ, ಬೆಂಗಳೂರು

ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ಗುಂಡು ಹಾರಿಸಿ ಕೊಲೆಗೆ ಪ್ರಯತ್ನಿಸಿ ಪರಾರಿಯಾಗಿರುವವರು ಸುಪಾರಿ ಕಿಲ್ಲರ್‌ರಸ ಇರಬಹುದು ಎಂದು ರಾಮನಗರ ಜಿಲ್ಲಾ ಪೊಲೀಸರು ಶಂಕಿಸಿ ತನಿಖೆ ತೀವ್ರಗೊಳಿಸಿದ್ದಾರೆ. ಗುಂಡು ಹಾರಿಸಿ ಪರಾರಿಯಾಗಿರುವ ದುಷ್ಕರ್ಮಿಗಳ ಬಂಧನಕ್ಕೆ ರಚಿಸಲಾಗಿರುವ ನಾಲ್ಕು ತಂಡಗಳಲ್ಲಿ ಒಂದು ತಂಡ ಈ ನಿಟ್ಟಿನಲ್ಲಿ ತನಿಖೆ ಕೈಗೊಂಡು ಕೆಲವು ಸುಪಾರಿ ಕಿಲ್ಲರ್‌ಗಳನ್ನು ವಿಚಾರಣೆಗೆ ಒಳಪಡಿಸಿ, ಮಾಹಿತಿ ಪಡೆದುಕೊಳ್ಳುತ್ತಿದೆ.

ಘಟನೆ ನಡೆದು 24 ಗಂಟೆ ಕಳೆದರೂ ಸಹ ರಿಕ್ಕಿ ರೈ ಮೇಲೆ ಗುಂಡು ಹಾರಿಸಿ ಓಡಿಹೋಗಿರುವ ದುಷ್ಕರ್ಮಿಗಳು ಯಾರು ಎಂಬುದು ನಿಖರವಾಗಿ ಪೊಲೀಸರಿಗೆ ಇನ್ನೂ ಗೊತ್ತಾಗಿಲ್ಲ. ಒಟ್ಟಾರೆ ಪ್ರಕರಣ ಇನ್ನೂ ನಿಗೂಢವಾಗಿದೆ. ರಿಕ್ಕಿ ರೈ ಮೇಲೆ ಯಾರು, ಯಾವ ಕಾರಣಕ್ಕಾಗಿ ಗುಂಡು ಹಾರಿಸಿದ್ದಾರೆ ಎಂಬುದರ ಬಗ್ಗೆ ಸಾಕಷ್ಟು ಅನುಮಾನಗಳು ಪೊಲೀಸರನ್ನು ಕಾಡುತ್ತಿವೆ.

ಮುತ್ತಪ್ಪರೈ ಅಪಾರ ಆಸ್ತಿ ಮಾಡಿರುವುದರಿಂದ ಆಸ್ತಿ ವಿಚಾರದಲ್ಲಾಗಿದೆಯಾ, ರಿಕ್ಕಿ ರೈ ರಿಯಲ್ ಎಸ್ಟೇಟ್ ವ್ಯವಹಾರ ಮಾಡುತ್ತಿರುವುದರಿಂದ ಆ ವ್ಯವಹಾರದ ಹಿನ್ನೆಲೆಯಲ್ಲಿ ಏನಾದರೂ ಆಗಿದೆಯಾ ಅಥವಾ ಹಳೆ ದ್ವೇಷದ ಹಿನ್ನೆಲೆಯಲ್ಲಿ ಈ ಘಟನೆಯಾಗಿದೆಯಾ ಎಂಬುದರ ಬಗ್ಗೆ ಪೊಲೀಸರು ಇಂಚಿಂಚೂ ಮಾಹಿತಿ ಕಲೆಹಾಕುತ್ತಿದ್ದಾರೆ.





ರಿಕ್ಕಿ ರೈ ಅವರ ಕಾರಿನ ಚಾಲಕ ಬಸವರಾಜು ಅವರು ಮುತ್ತಪ್ಪರೈನ ಎರಡನೇ ಪತ್ನಿ ಅನುರಾಧ, ರೈನ ಆಪ್ತ ರಾಕೇಶ್ ಮಲ್ಲಿ, ನಿತೀಶ್ ಶೆಟ್ಟಿ, ವೈದ್ಯನಾಥನ್ ರವರುಗಳ ವಿರುದ್ಧ ಅನುಮಾನ ವ್ಯಕ್ತಪಡಿಸಿ ಬಿಡದಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ರಿಕ್ಕಿ ರೈ ಅವರೇ ಇವರುಗಳ ಮೇಲೆ ಅನುಮಾನ ವ್ಯಕ್ತಪಡಿಸಿ ನನ್ನ ಬಳಿ ಹೇಳಿದ್ದಾರೆ ಎಂದು ದೂರಿನಲ್ಲಿ ಬಸವರಾಜು ತಿಳಿಸಿದ್ದಾರೆ. ಈ ದೂರಿನ ಹಿನ್ನೆಲೆಯಲ್ಲಿ ಎಫ್‌ಐಆರ್‌ನಲ್ಲಿ ದಾಖಲಾಗಿರುವ ನಾಲ್ವರಿಗೂ ವಿಚಾರಣೆಗೆ ಹಾಜರಾಗುವಂತೆ ಪೊಲೀಸರು ಸದ್ಯದಲ್ಲೇ ನೋಟೀಸ್ ನೀಡಲಿದ್ದಾರೆ.

ಪ್ರಕರಣ ದಾಖಲಾದ ನಂತರ ಒಂದು ತಂಡ ಎಫ್‌ಐಆರ್‌ನಲ್ಲಿರುವ ಅಂಶಗಳ ಬಗ್ಗೆ ತೀವ್ರ ತನಿಖೆ ನಡೆಸುತ್ತಿದೆ. ಘಟನೆ ನಡೆದ ಸ್ಥಳದಲ್ಲಿ ಸಿಮ್ ಇಲ್ಲದ ಬೇಸಿಕ್ ಮೊಬೈಲ್ ಸೆಟ್ ದೊರೆತಿದೆ. ಅದನ್ನು ವಶಪಡಿಸಿಕೊಂಡಿರುವ ಪೊಲೀಸರು ತನಿಖೆಯನ್ನು ತೀವ್ರಗೊಳಿಸಿದ್ದಾರೆ.

ಈಗಾಗಲೇ ಚಾಲಕ ಬಸವರಾಜು ಅವರಿಂದ ಹಲವಾರು ಮಾಹಿತಿಗಳನ್ನು ಪಡೆದುಕೊಂಡಿರುವ ಬಿಡದಿ ಠಾಣೆ ಪೊಲೀಸರು ಗಾಯಗೊಂಡು ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರಿಕ್ಕಿ ರೈರನ್ನು ಭೇಟಿ ಮಾಡಿ ಘಟನೆಗೆ ಸಂಬಂಧಿಸಿದಂತೆ ಮಾಹಿತಿಯನ್ನು ಪಡೆದುಕೊಳ್ಳಲಿದ್ದಾರೆ.

ರಿಕ್ಕಿ ರೈ ಅವರ ಹೇಳಿಕೆ ಪಡೆದ ನಂತರ ಈ ಪ್ರಕರಣದ ತನಿಖೆ ಮತ್ತಷ್ಟು ಚುರುಕುಗೊಳ್ಳಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಈ ಸಂಜೆಗೆ ತಿಳಿಸಿದ್ದಾರೆ.

# ಪೌರಕಾರ್ಮಿಕರು ಕಾಯಂ: ಅಂತಿಮ ಪಟ್ಟಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಪೌರಕಾರ್ಮಿಕ ಹುದ್ದೆಗಳಿಗೆ ಆಯ್ಕೆಯಾಗಿರುವ 12,692 ಅಭ್ಯರ್ಥಿಗಳ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದೆ. 2024ರ ಅಕ್ಟೋಬರ್‌ನಲ್ಲಿ ಕರಡು ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ವಲಯ ಮಟ್ಟದಲ್ಲಿ ನಿಗದಿ ಪಡಿಸಲಾಗಿರುವ ದಿನಗಳಂದು ಮೀಸಲಾತಿ ಮತ್ತು ಇತರೆ ದಾಖಲೆಗಳನ್ನು ಹಾಜರುಪಡಿಸಬೇಕು ಎಂದು ಸೂಚಿಸಲಾಗಿದೆ.

ಪೌರಕಾರ್ಮಿಕರನ್ನು ಕಾಯಂಗೊಳಿಸಿ, ಮೇ 1ರಂದು ನೇಮಕ ಪತ್ರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇತ್ತೀಚೆಗೆ ಪ್ರಕಟಿಸಿದ್ದರು. ಅದರಂತೆ, ಬಿಬಿಎಂಪಿ ಪ್ರಕ್ರಿಯೆ ಆರಂಭಿಸಿದೆ. ಪಾಲಿಕೆ ವ್ಯಾಪ್ತಿಯಲ್ಲಿ ನೇರ ಪಾವತಿಯಡಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್ 'ಡಿ' ವೃಂದದ ಪೌರಕಾರ್ಮಿಕರ ನೇಮಕಾತಿ ಪ್ರಕ್ರಿಯೆಯನ್ನು ಎರಡು ಹಂತದಲ್ಲಿ ನಡೆಸಲಾಗಿದೆ. ಮೊದಲ ಹಂತದಲ್ಲಿ 3,673, ಎರಡನೇ ಹಂತದಲ್ಲಿ 11, 307 ಹುದ್ದೆಗಳು ಸೇರಿದಂತೆ ಒಟ್ಟು 14,980 ಪೌರಕಾರ್ಮಿಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಬೇಕಾಗಿದೆ. ಇದರಲ್ಲಿ ನಿಯಮಾನುಸಾರ 12,692 ಅರ್ಹ ಪೌರಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲು ಕ್ರಮಕೈಗೊಳ್ಳಲಾಗಿದೆ ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ.

ಘನತ್ಯಾಜ್ಯ ನಿರ್ವಹಣೆ, ವಿವಿಧ ಸ್ವಚ್ಛತಾ ಕಾರ್ಯಗಳ ನಿರ್ವಹಣೆಗಾಗಿ ಘನತ್ಯಾಜ್ಯ ವಿಭಾಗದಲ್ಲಿ ನೇರ ಪಾವತಿಯಡಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಂದ 15 ಸಾವಿರಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದವು. ದೀರ್ಘಾವಧಿ ಸೇವೆ, ರೋಸ್ಟರ್ ಪದ್ಧತಿ ಹಾಗೂ ವಿವಿಧ ಮಾನದಂಡಗಳ ಆಧಾರದ ಮೇಲೆ ಎರಡು ಹಂತಗಳಲ್ಲಿ ಅರ್ಜಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸಿದವರ ಪೈಕಿ 12,692 ಪೌರಕಾರ್ಮಿಕರನ್ನು ಆಯ್ಕೆ ಮಾಡಲಾಗಿದೆ. ಅಂತಿಮ ಆಯ್ಕೆ ಪಟ್ಟಿಯನ್ನು ಪಾಲಿಕೆ ವೆಬ್ ಸೈಟ್ HTTPS://BBMP.GOV.IN/HOMEನಲ್ಲಿ ಪ್ರಕಟಿಸಲಾಗಿದೆ.

# ಆ್ಯಪ್‌ನಲ್ಲಿ ಹಣ ಹೂಡಿಕೆ: 66 ಲಕ್ಷ ವಂಚಿಸಿದ ಆರೋಪಿಗಳು

• ಉದಯವಾಹಿನಿ, ಬೆಂಗಳೂರು

ನಗರದ ನಿವಾಸಿಯೊಬ್ಬರು ವಾಟ್ಸ್‌ಆ್ಯಪ್‌ಗೆ ಬಂದ ಆ್ಯಪ್‌ನಲ್ಲಿ ಹಣ ಹೂಡಿಕೆ ಮಾಡಿ 66.51 ಲಕ್ಷ ಕಳೆದುಕೊಂಡಿರುವ ಘಟನೆ ನಡೆದಿದೆ. ಶ್ರೀನಿವಾಸಪುರದ ನಿವಾಸಿ ಅವರ ದೂರು ಆಧರಿಸಿ ಸೆನ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಮಿರೇ ಅಸೆಟ್ ಶೇರ್ಖಾನ್ ಸೆಕ್ಯುರಿಟೀಸ್ ಕಂಪನಿಯಲ್ಲಿ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭಾಂಶ ಸಿಗಲಿದೆ ಎಂದು ವಂಚಕರು ನಂಬಿಸಿದರು. ಈ ಲಿಂಕ್ ಮೇಲೆ ಕ್ಲಿಕ್ ಮಾಡಿ ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ಹಂತ ಹಂತವಾಗಿ ಷೇರುಗಳ ಖರೀದಿ, ಮಾರಾಟ ವ್ಯವಹಾರ ನಡೆಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಒಟ್ಟು 66 ಲಕ್ಷ ಮೌಲ್ಯದ ಷೇರುಗಳನ್ನು ಖರೀದಿ ಮಾಡಿದ್ದು, ಆ್ಯಪ್‌ನಲ್ಲಿ 1 ಕೋಟಿ ಲಾಭಾಂಶ ಗಳಿಸಿರುವುದಾಗಿ ವಂಚಕರು ತೋರಿಸುತ್ತಿದ್ದರು. ಲಾಭಾಂಶ ಮೊತ್ತ ಪಡೆಯಲು ಪ್ರಯತ್ನಿಸಿದಾಗ ಆರೋಪಿಗಳು ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು, ಸಂಪರ್ಕಕ್ಕೆ ಸಿಕ್ಕಿರಲಿಲ್ಲ. ಬಳಿಕ ಅವರಿಗೆ ಮೋಸ ಹೋಗಿರುವುದು ಗೊತ್ತಾಗಿದೆ ಎಂದರು.

# ವೇತನ ನೀಡದೇ ವಂಚನೆ: ಮೂವರ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಬೆಂಗಳೂರು



ವೇತನ ನೀಡದೇ ವಂಚನೆ ನಡೆಸಲಾಗಿದೆ ಎಂಬ ಆರೋಪದ ಅಡಿ ಬೆಟಾಲಕ್ಸ್ ಕನ್ಸಲ್ಟಿಂಗ್ ಕಂಪನಿಯ ಸಿಇಒ ಸೇರಿ ಮೂವರ ವಿರುದ್ಧ ಸಿಸಿಬಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಎ.ಶರವಣನ್ ಅವರು ನೀಡಿರುವ ದೂರು ಆಧರಿಸಿ, ಕಂಪನಿಯ ಸಿಇಒ ಅನಿಮೇಶ್ ಕುಮಾರ್, ಸಿಟಿಒ ಉತ್ಕರ್ಷ್ ಸಿನ್ಹಾ, ಲೆಕ್ಕ ಪರಿಶೋಧಕ ಪವನ್ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಸಿಸಿಬಿ ಮೂಲಗಳು ತಿಳಿಸಿವೆ. 'ಶರವಣನ್ ಕೆಲಸಕ್ಕೆ ಸೇರಿಕೊಂಡ ಬಳಿಕ ಕಂಪನಿಗೆ ಸುಮಾರು 20 ಕೋಟಿ ವ್ಯವಹಾರದ ಒಪ್ಪಂದ ಆಗಿತ್ತು. ದೂರುದಾರರು ಕಂಪನಿಗೆ ಸೇರಿಕೊಳ್ಳುವ ಸಂದರ್ಭದಲ್ಲಿ ವಾರ್ಷಿಕವಾಗಿ 90 ಲಕ್ಷ ವೇತನ ನೀಡುವುದಾಗಿ ಭರವಸೆ ನೀಡಿದ್ದರು.

ಕೆಲಸಕ್ಕೆ ಸೇರಿದ ಮೇಲೆ ಡಿಸೆಂಬರ್‌ನಲ್ಲಿ ವೇತನ ಪರಿಶೀಲಿಸಿದಾಗ ಅದು 80 ಲಕ್ಷಕ್ಕೆ ಕಡಿತ ಆಗಿರುವುದು ಕಂಡುಬಂದಿತ್ತು. ನಿರ್ದೇಶಕರನ್ನು ಪ್ರಶ್ನಿಸಿದಾಗ ಬೋನಸ್ ರೂಪದಲ್ಲಿ 10 ಲಕ್ಷ ಪಾವತಿ ಮಾಡುವುದಾಗಿ ಭರವಸೆ ನೀಡಿದ್ದರು. ವೇತನದ ರಶೀದಿಯನ್ನು ಪರಿಶೀಲನೆ ನಡೆಸಿದಾಗ 31 ದಿನ ಕೆಲಸ ನಿರ್ವಹಿಸಿದ್ದರೂ ಕಂಪನಿಯವರು 28 ದಿನ ಎಂಬುದಾಗಿ ತೋರಿಸಿದ್ದರು. ಆ ಕುರಿತು ಕಂಪನಿಯ ನಿರ್ದೇಶಕರನ್ನು ಪ್ರಶ್ನಿಸಿದಾಗ, ಸರಿಪಡಿಸಲಾಗುವುದು ಎಂದು ಭರವಸೆ ನೀಡಿದ್ದರು ಎಂಬ ದೂರು ಆಧರಿಸಿ ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ.

ನಂತರ ದಿನಗಳಲ್ಲಿ ವೇತನವನ್ನು ಪಾವತಿ ಮಾಡಿರಲಿಲ್ಲ. ಕರೆ ಮಾಡಿ ಪ್ರಶ್ನಿಸಿದಾಗ ಇನ್ನೂ ಹೆಚ್ಚಿನ ಕೆಲಸ ಮಾಡಿದರೆ ಎಲ್ಲಾ ಬಾಕಿ ವೇತನವನ್ನೂ ನೀಡುವುದಾಗಿ ಅನಿಮೇಶ್ ಕುಮಾರ್ ಹೇಳಿದ್ದರು. ಬಾಕಿ ವೇತನ ಸಿಗುವ ಭರವಸೆಯಿಂದ ಶರವಣನ್ ಅವರು ಹೆಚ್ಚು ಅವಧಿಯಲ್ಲಿ ಕೆಲಸ ಮಾಡಿದ್ದರು. ಹಿಂದಿನ ನೌಕರರ ಜತೆಗೆ ಚರ್ಚಿಸಿದಾಗ ಅವರಿಗೂ ಟಿಡಿಎಸ್ ಹಣ ಕಟಾವಣೆ ಮಾಡಿಕೊಂಡು ಮೋಸ ಮಾಡಿರುವುದು ಗೊತ್ತಾಗಿತ್ತು. ಕಂಪನಿಯು 1.04 ಕೋಟಿ ವಂಚನೆ ಮಾಡಿದೆ' ಎಂಬ ದೂರು ಆಧರಿಸಿ ಎಫ್‌ಐಆರ್‌ನಲ್ಲಿ ವಿವರಿಸಲಾಗಿದೆ.

# ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿಯ ಮೂಲ ಪ್ರತಿ ನಾಪತ್ತೆ

## ಸೀಲ್ಡ್ ಬಾಕ್ಸ್ ತೆರೆದಾಗ ಮುದ್ರಿತ ವರದಿಯಲ್ಲಿ ಆಯೋಗದ ಸದಸ್ಯ ಕಾರ್ಯದರ್ಶಿ ಸಹಿ ಇಲ್ಲ

• ಉದಯವಾಹಿನಿ, ಬೆಂಗಳೂರು

ಶಾಶ್ವತ ಹಿಂದುಳಿದ ಆಯೋಗ ನಡೆಸಿದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿಯ ಮೂಲ ಹಸ್ತಪ್ರತಿ ನಾಪತ್ತೆ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆಗೆ ಕೊಡಬೇಕು ಎಂದು ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್.ಅಶೋಕ್ ಸರ್ಕಾರವನ್ನು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2021ರ ಅಕ್ಟೋಬರ್‌ನಲ್ಲಿ ಆಯೋಗದ ಅಧ್ಯಕ್ಷರಾಗಿದ್ದ ಜಯಪ್ರಕಾಶ್ ಹೆಗ್ಡೆಯವರು ಸರ್ಕಾರಕ್ಕೆ ಪತ್ರ ಬರೆದು ಜಾತಿಗಣತಿ ವರದಿ ಕಾಣೆಯಾಗಿದೆ ಎಂದು ಹೇಳಿದ್ದಾರೆ. ಸೀಲ್ಡ್ ಬಾಕ್ಸ್ ತೆರೆದಾಗ ಮುದ್ರಿತ ವರದಿಯಲ್ಲಿ ಆಯೋಗದ ಸದಸ್ಯ ಕಾರ್ಯದರ್ಶಿ ಸಹಿ ಇಲ್ಲ. ಇದರ ಜೊತೆಗೆ ಮೂಲ ಹಸ್ತಪ್ರತಿ ಇರಲಿಲ್ಲ ಎಂದು ಸರ್ಕಾರಕ್ಕೆ ಪತ್ರ ಬರೆದಿದ್ದರು ಎಂದು ಅವರು ಹೇಳಿದರು. ಸರ್ಕಾರ ಈಗ ಹೇಳಲಿ. ಈ ಜಾತಿಗಣತಿ ವರದಿ ವರ್ಜಿನಲ್ಲಾ?, ಮೂಲ ವರದಿಯ ಹಸ್ತಪ್ರತಿಯೇ ಸೀಲ್‌ಡಬಾಕ್ಸನಲ್ಲಿ ಇಲ್ಲ ಎಂದ ಮೇಲೆ ವರದಿ ಹೇಗೆ ವರ್ಜಿನಲ್ ಆಗುತ್ತದೆ, ಇದು ರಕ್ತ ಕಣ್ಣೀರು ಸಿನಿಮಾ ಎಂದು ವ್ಯಂಗ್ಯವಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಡಳಿತ ವೈಫಲ್ಯವನ್ನು ಮುಚ್ಚಿಕೊಳ್ಳಲು ಜಾತಿಗಣತಿ ವಿಚಾರವನ್ನು ಹೊರಗೆ ತಂದರು. ಅವರು ಯಾವಾಗ ಬೇಕೋ ಆಗ ವರದಿ ನೀಡುತ್ತಾರೆ. ಇದಕ್ಕೆ ತಮೊಂದಿಗೆ ನಾಟಕ ಕಂಪನಿಯನ್ನು ಇಟ್ಟುಕೊಂಡಿದ್ದಾರೆ. ಇದು ಶಕುನಿ ಸರ್ಕಾರ. ಅಭಿವೃದ್ಧಿ ಬೇಕಾಗಿಲ್ಲ ಎಂದು ಟೀಕಾಪ್ರಹಾರ ನಡೆಸಿದರು. ಆಯೋಗದ ಅಧ್ಯಕ್ಷರೇ ವರದಿಯ ಮೂಲಪ್ರತಿ ಇಲ್ಲ ಎಂದಿದ್ದಾರೆ. ಅವರು ಸಮೀಕ್ಷೆ ಮಾಡಿದ್ದು 6 ಕೋಟಿ ಜನರನ್ನು. ಉಳಿದ ಒಂದು ಕೋಟಿ ಜನರಿಗೆ ನಾಮವೇ ಎಂದು ಪ್ರಶ್ನಿಸಿದ ಅವರು, ಜಾತಿಗಣತಿಯ ವರ್ಜಿನಲ್ ಪ್ರತಿ ಸಿದ್ದರಾಮಯ್ಯನವರ ಮನೆಯಲ್ಲಿದೆ. ಈಗ ಮಂಡಿಸಿರುವ ವರದಿ ನಕಲಿ ಎಂದು ಆರೋಪಿಸಿದರು. ಸಮೀಕ್ಷೆ ಮಾಡುವವರು ಮಠಕ್ಕೆ ಬಂದಿಲ್ಲ ಎಂದು ಸಿದ್ದಗಂಗಾ ಮಠದ ಶ್ರೀಗಳೇ ಹೇಳಿದ್ದಾರೆ. ಕಾಂಗ್ರೆಸ್‌ನ ಕೆಲ ಶಾಸಕರೂ ಸಹ ನಮ ಮನೆಗಳಿಗೆ ಬಂದಿಲ್ಲ ಎಂದು ಹೇಳಿದ್ದಾರೆ. ಹಾಗಾದರೆ ಸಮೀಕ್ಷೆಗಳಿಗೆ ಖರ್ಚು ಮಾಡಿದ್ದ 169 ಕೋಟಿ ರೂ. ದೊಡ್ಡ ಹಗರಣವಾಗಿದೆ. ಮುಂದೆ ನಮ ಸರ್ಕಾರ ಅಧಿಕಾರಕ್ಕೆ ಬಂದಾಗ ಈ ಹಗರಣದ ತನಿಖೆ ಮಾಡಿಸುತ್ತೇವೆ ಎಂದರು. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು ಯಾರ್ಯಾರು ಮಾಡಿದ್ದರು, ಯಾವ ಏಜೆನ್ಸಿಗೆ ಕೊಟ್ಟಿದ್ದರು. ಯಾವ ಶಿಕ್ಷಕರು ಹೋಗಿದ್ದರು ಎಂಬ ಮಾಹಿತಿ ನೀಡಲಿ. ಜಾತಿಗಣತಿಗೆ ನಾವು ವಿರೋಧವಿಲ್ಲ. ತುಳಿತಕ್ಕೊಳಗಾದ ಜಾತಿಗಳಿಗೆ ನ್ಯಾಯ ಸಿಗಬೇಕು. ಮನೆಮನೆಗೆ ಹೋಗಿ ಸಮೀಕ್ಷೆ ಮಾಡಿರುವ ದಾಖಲೆಗಳು ಬಹಿರಂಗವಾಗಬೇಕು. ಇದರ ಹಿಂದಿನ ನಿರ್ದೇಶಕರು, ಸ್ಕ್ರೀನ್ ಪ್ಲೇ ಎಲ್ಲವೂ ಸಿದ್ದರಾಮಯ್ಯನವರು ಎಂದು ಆಪಾದಿಸಿದರು.



### ನ್ಯಾಯಾಂಗ ತನಿಖೆಗೆ ಅಶೋಕ್ ಆಗ್ರಹ

**ಸಂವಿಧಾನಬದ್ಧ ಸರ್ಕಾರವಲ್ಲ:** ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಜನಿವಾರಕ್ಕೆ ಕತ್ತರಿ, ಶಿವದಾರ ಶಿವನ ಪಾದ, ಉಡುದಾರಕ್ಕೆ ಊರುಗೋಲಿಲ್ಲ, ತಾಳಿಗೆ ಭಾಗ್ಯವಿಲ್ಲ, ಹಿಜಾಬ್‌ಗೆ ಬಹುಪರಾಖ್ ನಡೆಯುತ್ತಿದೆ ಎಂದು ಅಶೋಕ್ ಇದೇ ಸಂದರ್ಭದಲ್ಲಿ ಆರೋಪಿಸಿದರು. ಬಾಬಾ ಸಾಹೇಬ ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನಬದ್ಧ ಸರ್ಕಾರ ಇದಲ್ಲ, ಧಾರವಾಡದಲ್ಲೂ ನಂದನ್ ಎಂಬ ವಿದ್ಯಾರ್ಥಿಯ ಜನಿವಾರ ಕತ್ತರಿಸಿದ ಪ್ರಕರಣ ನಡೆದಿದೆ. ಜನಿವಾರ ತೆಗಿ ಎಂದು ಸಿಇಟಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳ ಭಾವನೆಯನ್ನು ಘಾಸಿ ಮಾಡಿದ್ದಾರೆ. ಹಿಜಾಬ್ ತೆಗೆದಿದ್ದಕ್ಕೆ ಬಾಯಿ ಬಾಯಿ ಬಡಿದುಕೊಂಡರು ಎಂದು ಟೀಕಿಸಿದರು. ಮಹಿಳೆಯರ ತಾಳಿಗೆ ಕೈ ಹಾಕಿದ ಕಾಂಗ್ರೆಸ್ ಸರ್ವನಾಶವಾಗುತ್ತದೆ. ತಾಳಿ, ಓಲೆ ಎಲ್ಲವನ್ನೂ ತೆಗೆಸಿದ್ದಾರೆ. ಕಾಂಗ್ರೆಸ್ ಸರ್ಕಾರ ಹಿಂದೂಗಳನ್ನು ಅಪಮಾನಿಸಿ ದಮನ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕೇಂದ್ರ ಹಾಗೂ ರಾಜ್ಯ ಮಾನವ ಹಕ್ಕುಗಳ ಆಯೋಗ ಸರ್ಕಾರದ ಮೇಲೆ ಕ್ರಮ ಕೈಗೊಳ್ಳಬೇಕು ಎಂದ ಅವರು, ಈ ಸಂಬಂಧ ಕೇಂದ್ರ ಮಹಿಳಾ ಆಯೋಗಕ್ಕೆ ಪತ್ರ ಬರೆಯುವುದಾಗಿ ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾವ ಧರ್ಮ ಕಾಪಾಡುತ್ತಾರೆ ಎಂಬುದನ್ನು ಹೇಳಲಿ. ಕುಕ್ಕರ್ ಬಾಂಬ್ ಹಾಕಿದವರನ್ನು ಬ್ರದರ್ ಎಂದು ಕರೆದ ವರು ಎಂದು ಮೂದಲಿಸಿದರು.ಪಿಎಸ್‌ಐ ಪರಶುರಾಮು ಸಾವಿನ ಪ್ರಕರಣದಲ್ಲಿ ಶಾಸಕ ಚನ್ನಾರೆಡ್ಡಿ ಪಾಟೀಲ್ ಅವರ ಮೇಲಿನ ಆರೋಪಕ್ಕೆ ಬಿ ರಿಪೋರ್ಟ್ ಹಾಕುವ ಮೂಲಕ ಮುಚ್ಚಿ ಹಾಕುವ ಯತ್ನ ನಡೆದಿದೆ ಎಂದು ಅಶೋಕ್ ಆರೋಪಿಸಿದರು. ವಾಣಿವಿಲಾಸ ಆಸ್ಪತ್ರೆಯಲ್ಲಿ ಮತ್ತೊಬ್ಬ ಬಾಣಂತಿ ಸಾವಾಗಿದೆ. ಈ ಸರ್ಕಾರಕ್ಕೆ ಮಹಿಳೆಯರ ರಕ್ಷಣೆಯ ಬಗ್ಗೆ ಕಾಳಜಿ ಇಲ್ಲ ಎಂದು ಟೀಕಿಸಿದರು.

ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯ ಮೂಲ ಪ್ರತಿ ಮುಖ್ಯಮಂತ್ರಿಗಳ ಬಳಿಯಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಆಶೋಕ್ ಅವರು ಯಾವತ್ತಾದರೂ ಸತ್ಯವನ್ನು ಹೇಳಿದ್ದಾರೆಯೇ? ಅವರು ಸುಳ್ಳೇ ಹೇಳುವುದು. ಮೂಲ ಪ್ರತಿ ನನ್ನ ಬಳಿಯಿರಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು, ಕಾಂಗ್ರೆಸ್ ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿಯವರಿಗೆ ನಾವು ಪತ್ರ ಬರೆದಿಲ್ಲ ಆದರೆ ಅವರೊಂದಿಗೆ ಚರ್ಚೆ ಮಾಡಿ ಸಚಿವ ಸಂಪುಟ ಸಭೆಯಲ್ಲಿ ಸಮೀಕ್ಷೆಯ ವರದಿಯನ್ನು ಮಂಡಿಸಿದ್ದೇವೆ ಎಂದರು.

### ಮೂಲಪ್ರತಿ ನನ್ನ ಬಳಿ ಇರಲು ಹೇಗೆ ಸಾಧ್ಯ?: ಸಿಎಂ



**ಮುಸಲ್ಮಾನರಿಗೆ, ಹಿಂದುಳಿದವರಿಗೆ ಮಾತ್ರವಲ್ಲದೆ, ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೆ ಶಿಕ್ಷಣ ಸಿಗಬೇಕು, ಸಾಮಾಜಿಕ ಮತ್ತು ಆರ್ಥಿಕ ಶಕ್ತಿ ತುಂಬಬೇಕು. ಇದೇ ನಮ ಗುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ವೃಷಭ** ವಯಸ್ಸಾದವರು ತಮ್ಮ ಆರೋಗ್ಯವನ್ನು ನೋಡಿಕೊಳ್ಳಬೇಕು. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ.

**ಮಿಥುನ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

**ಕರ್ಕಾಟಕ** ಹೊಸ ನೋಟ– ಹೊಸ ಉಡುಪು– ಹೊಸ ಸ್ನೇಹಿತರು ನೀವು ಇಂದು ನಿಮಗಾಗಿರಬಹುದು. ನಿಮ್ಮ ಪ್ರೀತಿಪಾತ್ರರಿಂದ ಅಥವಾ ಸಂಗಾತಿಯಿಂದ ಬರುವ ಸಂದೇಶ ಇಂದು ನಿಮ್ಮ ಸ್ಥೈರ್ಯವನ್ನು ಹೆಚ್ಚಿಸುತ್ತದೆ.

**ಸಿಂಹ** ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು. ಕೆಲಸದಲ್ಲಿ ಮತ್ತು ಮನೆಯಲ್ಲಿ ಒತ್ತಡ ನಿಮ್ಮ ಸಹನೆಯನ್ನು ಪರೀಕ್ಷಿಸಬಹುದು.

**ಕನ್ಯಾ** ಸಂಬಂಧಿಕರಿಂದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ . ನಿಮ್ಮ ಜೀವನದಲ್ಲಿ ಒಂದು ಭವ್ಯವಾದ ಲಯವನ್ನು ರೂಪಿಸಿಕೊಳ್ಳಿ.

**ತುಲಾ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ವೃಶ್ಚಿಕ** ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ.

**ಧನಸ್ಸು** ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು.

**ಮಕರ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ನಿಮಗೆ ಈ ಮಾತು ಅರ್ಥವಾಗಬಹುದು.

**ಕುಂಭ** ಧ್ಯಾನ ಪರಿಹಾರ ತರುತ್ತದೆ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ.

**ಮೀನ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

## ರಸ್ತೆ ಕಾಮಗಾರಿಯನ್ನು ಪರಿಶೀಲನೆ ನಡೆಸಿದ ನಗರ ಸಭೆ ಅಧ್ಯಕ್ಷ ಎಂ ಶಮಿವುಲ್ಲಾ

• ಉದಯವಾಹಿನಿ ಅರಸೀಕೆರೆ


ಉದಯವಾಹಿನಿ ಚಿತ್ರ

ಅರಸೀಕೆರೆ ನಗರದ್ಯಂತ ಸುಮಾರು ವರ್ಷಗಳಿಂದಲೂ ರಸ್ತೆ ಕಾಮಗಾರಿಯಾಗದೆ ಅಲ್ಲಲ್ಲಿ ಗುಂಡಿಗಳು ಇದ್ದುದರಿಂದ ನಗರದ ನಾಗರೀಕರಿಗೆ ದ್ವಿಚಕ್ರ ವಾಹನದಲ್ಲಿ ಓಡಾಟ ನಡೆಸಲು ತುಂಬಾ ತೊಂದರೆಯಾಗುತ್ತಿತ್ತು. ಅರಸೀಕೆರೆ ನಗರದಲ್ಲಿ ನಗರೋತ್ಥಾನ ಯೋಜನೆ ಅಡಿಯಲ್ಲಿ ರಸ್ತೆ ಡಾಂಬರೀಕರಣ ಪ್ರಾರಂಭವಾಗಿದ್ದು ಶಾನುಭೋಗರ ಬೀದಿಯಿಂದ ಸಂತೆ ಮೈದಾನದ ಮುಖ್ಯರಸ್ತೆಗೆ ಹಾಗೂ ನಗರದಲ್ಲೆಡೆ ಕಾಮಗಾರಿ ನಡೆಯುತ್ತಿದ್ದು ನಗರದ ನಾಗರಿಕರು ನಗರ ಸಭೆಯ ಆಡಳಿತದ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ನಗರಸಭೆ ಅಧ್ಯಕ್ಷರಾದ ಎಮ್ ಶಮಿವುಲ್ಲಾ ಭಾನುವಾರದ ರಜಾ ದಿನವಾದರೂ ಸಹ ರಸ್ತೆ ಕಾಮಗಾರಿಗಳ ಬಗ್ಗೆ ಪರಿಶೀಲನೆ ನಡೆಸಿದರು ಮುಖಂಡರಾದ ಮನೋಜ್ ಕುಮಾರ್ ಉಪಸ್ಥಿತರಿದ್ದರು.

## ಸಿಡಿಲಿಗೆ ಆಕಳು ಬಲಿ: ಮಳೆಗೆ ಬೆಳೆ ಹಾನಿ

• ಉದಯವಾಹಿನಿ, ಹರಪನಹಳ್ಳಿ

ತಾಲ್ಲೂಕಿನಲ್ಲಿ ರಾತ್ರಿ ಸುರಿದ ಭಾರಿ ಮಳೆ-ಗಾಳಿ ಗುಡುಗು-ಸಿಡಿಲಿಗೆ ಆಕಳು ಸಾವನ್ನಪ್ಪಿದೆ. ಜಂಗಮತುಂಬಿಗೇರಿಯಲ್ಲಿ ಎಚ್.ಕೊಟ್ರೇಶ ಎಂಬುವವರಿಗೆ ಸೇರಿದ ಆಕಳು ಸಿಡಿಲು ಬಡಿದು ಸಾವನ್ನಪ್ಪಿದೆ. ನಂದಿಬೇವೂರಿನಲ್ಲಿ ಒಂದು ಮನೆ ಭಾಗಶಃ ಹಾನಿಯಾಗಿದೆ. ನಂದಿಬೇವೂರಿನಲ್ಲಿ ವಿರುಪಾಕ್ಷಪ್ಪ ಎಂಬವವರ ಅರ್ಧ ಎಕರೆ ಪಪ್ಪಾಯಿ ಬೆಳೆ ಹಾನಿಯಾಗಿದ್ದು, ಸ್ಥಳಕ್ಕೆ ಗ್ರಾಮ ಆಡಳಿತ ಅಧಿಕಾರಿ ಎಚ್. ಕವಿತಾ ಭೇಟಿ ನೀಡಿ ಪರಿಶೀಲಿಸಿದ್ದಾರೆ, ಮಾದಾಪುರ ಗ್ರಾಮದಲ್ಲಿ ಚೌಡಾಪುರದ ದೇವೀರಮ್ಮನವರ 1 ಎಕರೆ ಪಪ್ಪಾಯಿ ಹಾನಿಯಾಗಿದೆ. ಕಾನಹಳ್ಳಿ ಗ್ರಾಮದಲ್ಲಿ ಮಾಗಳದ ಪಾಂಡುರಂಗಪ್ಪ ಎಂಬುವವರ 150 ಪಪ್ಪಾಯಿ ಹಾಗೂ 35ಕ್ಕೂ ಹೆಚ್ಚು ಬಟರ್ ಫ್ರೂಟ್ ಗಿಡಗಳು ನೆಲಕ್ಕೆ ಉರುಳಿವೆ. ತಡರಾತ್ರಿ ಸುರಿದ ಮಳೆಯಿಂದ ಹಾನಿಗೊಳಗಾದ ಬೆಳೆ ಸಮೀಕ್ಷೆ ನಡೆಸಿ ಸಂತ್ರಸ್ಥರಿಗೆ ಸೂಕ್ತ ಪರಿಹಾರ ನೀಡಲಾಗುವುದು ಎಂದು ತಹಶೀಲ್ದಾರ ಬಿ.ವಿ.ಗಿರೀಶಬಾಬು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

## ಫೈನಾನ್ಸ್‌ನಲ್ಲಿ ಸಾಲ: ಕಿರಕುಳ ಪ್ರಕರಣ ದಾಖಲು

• ಉದಯವಾಹಿನಿ, ಪಡುಬಿದ್ರಿ

ಫೈನಾನ್ಸ್‌ನಲ್ಲಿ ಸಾಲ ಪಡೆದ ಮಹಿಳೆಯೊಬ್ಬರು ಸಾಲದ 1 ಕಂತು ಮರುಪಾವತಿಗೆ ಒಂದು ಕಂತು ತಡವಾಗಿರುವುದರಿಂದ ಸಾಲ ಮರುಪಾವತಿಸುವಂತೆ ಬೆದರಿಕೆ ಹಾಕಿರುವ ಬಗ್ಗೆ ಪಡುಬಿದ್ರಿ ಠಾಣೆಯಲ್ಲಿ ಮೈಕ್ರೋ ಫೈನಾನ್ಸ್ ಪ್ರಕರಣ ದಾಖಲಾಗಿದೆ. ಬಡಾ ಗ್ರಾಮದ ನಿವಾಸಿ ಪುಷ್ಪಲತಾ 2024 ನವೆಂಬರ್ ತಿಂಗಳ ಮೊದಲನೇ ವಾರದಲ್ಲಿ ಮುಕ್ಕದ ಸಾನಿಧ್ಯ ಫೈನಾನ್ಸ್‌ನಲ್ಲಿ ರೂ 30,000 ಸಾಲ ಪಡೆದುಕೊಂಡಿದ್ದರು. ಸಾಲದ ಕಂತುಗಳನ್ನು ಪ್ರತೀ ತಿಂಗಳು ಗೂಗಲ್ ಪೇ ಹಾಗೂ ಕೆಲವೊಮ್ಮೆ ನಗದಾಗಿ ಮುಖಾಂತರ ಫೈನಾನ್ಸ್ ನವರಿಗೆ ಪಾವತಿ ಮಾಡುತ್ತಿದ್ದರು.

ಸಾಲ ಮರುಪಾವತಿ ಮಾಡಲು ತಡವಾದುದಕ್ಕೆ ಇತ್ತೀಚೆಗೆ ಒಂದುವಾರದಿಂದ ಫೈನಾನ್ಸ್ ರಿಕವರಿ ಆಫೀಸರ್ ಅಶ್ರಫ್ ಹಾಗೂ ಇತರರು ಮನೆಗೆ ಪದೇ ಪದೇ ಬಂದು ಸಾಲವನ್ನು ಸರಿಯಾದ ಸಮಯಕ್ಕೆ ಕಟ್ಟದಿದ್ದರೆ ತಲೆ ಒಡೆದು ಸಾಯಿಸುತ್ತೇವೆ ಎಂದು ಜೀವ ಬೆದರಿಕೆ ಹಾಕಿ ಅವಮಾನ ಮಾಡಿದ್ದಾರೆ. ಈ ಬಗ್ಗೆ ಸಂತ್ರಸ್ಥೆ ಪಡುಬಿದ್ರಿ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಕರ್ನಾಟಕ ಮೈಕ್ರೋ ಲೋನ್ ಅಂಡ್ ಸ್ಮಾಲ್ ಲೋನ್ ಪ್ರಿವೆನ್ಷನ್ ಆಫ್ ಕಾನ್ ಕ್ರೀವ್ ಆಕ್ಷನ್ ಆರ್ಡಿನೆನ್ಸ್‌ರಂತೆ ಪ್ರಕರಣ ದಾಖಲಾಗಿದೆ.

### ಈ ರೋಗವು ಪಶ್ಚಿಮಘಟ್ಟದ ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ಜನರಲ್ಲಿ ನಿರಂತರವಾಗಿ ಕಾಣಿಸಿಕೊಳ್ಳುತ್ತದೆ

# ಜಿಲ್ಲೆಯಲ್ಲಿ ಮಂಗನ ಕಾಯಿಲೆ ಕುರಿತು ಐಸಿಎಂಆರ್ ಸಮೀಕ್ಷೆ

• ಉದಯವಾಹಿನಿ ಶಿವಮೊಗ್ಗ


ಉದಯವಾಹಿನಿ ಚಿತ್ರ

**ಮಂಗನ ಕಾಯಿಲೆ ಶುರು**

ಶಿವಮೊಗ್ಗ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಮಂಗನ ಕಾಯಿಲೆ ಆತಂಕ ಶುರುವಾಗುತ್ತದೆ. ವೈದ್ಯಕೀಯ ಕ್ಷೇತ್ರದಲ್ಲಿ ಇಷ್ಟೊಂದು ಸಂಶೋಧನೆಗಳು ನಡೆದರೂ ಸಹ ಕ್ಯಾಸನೂರು ಫಾರೆಸ್ಟ್ ಡಿಸೀಜ್ ಅಥವ ಮಂಗನ ಕಾಯಿಲೆ ನಿಯಂತ್ರಣಕ್ಕೆ ತರಲು ಸಾಧ್ಯವಾಗಿಲ್ಲ. ಇದರಿಂದಾಗಿ ಹಲವಾರು ಜನರು ಪ್ರಾಣ ಕಳೆದುಕೊಳ್ಳುತ್ತಲೇ ಇದ್ದಾರೆ. ಈಗ ಕ್ಯಾಸನೂರು ಫಾರೆಸ್ಟ್ ಡಿಸೀಜ್ (ಕೆಎಫ್‌ಡಿ) ಬಗ್ಗೆ ಐಸಿಎಂಆರ್ ಸಮೀಕ್ಷೆಯನ್ನು ನಡೆಸಲಿದೆ. ಕೆಎಫ್‌ಡಿ ರೋಗದ ಹರಡುವಿಕೆ ಪ್ರಮಾಣ ಅರ್ಥ ಮಾಡಿಕೊಂಡು ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವ ಉದ್ದೇಶದಿಂದ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಎಪಿಡೆಮಿಯಾಲಜಿಯು ಶಿವಮೊಗ್ಗ ಜಿಲ್ಲೆಯಲ್ಲಿ ಸೀರೋ ಸರ್ವೇ ನಡೆಸಿದೆ.

ಕೆಎಫ್‌ಡಿಯನ್ನು ಸಾಮಾನ್ಯವಾಗಿ ಮಂಗನ ಕಾಯಿಲೆ ಎಂದು ಕರೆಯಲಾಗುತ್ತದೆ. ಈ ರೋಗವು ಪಶ್ಚಿಮಘಟ್ಟದ ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ಜನರಲ್ಲಿ ನಿರಂತರವಾಗಿ ಕಾಣಿಸಿಕೊಳ್ಳುತ್ತದೆ.

ಆರಂಭದಲ್ಲಿ ಈ ರೋಗವು ಕೇವಲ ಕರ್ನಾಟಕದ ಶಿವಮೊಗ್ಗ ಜಿಲ್ಲೆಯಲ್ಲಿ ಮಾತ್ರ ಕಂಡುಬಂದಿದ್ದರೆ, ಈಗ ಇದು ಕರ್ನಾಟಕದ ಇತರ ಜಿಲ್ಲೆಗಳಲ್ಲಿಯೂ ಹಾಗೂ ಪಕ್ಕದ ರಾಜ್ಯಗಳಲ್ಲಿಯೂ ಹರಡಿದೆ.

ಈ ರೋಗದ ಹರಡುವಿಕೆ ಪ್ರಮಾಣವನ್ನು ಅರ್ಥಮಾಡಿಕೊಳ್ಳಲು ಐಸಿಎಂಆರ್ ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಎಪಿಡೆಮಿಯಾಲಜಿ ವಿಭಾಗವು ಪಶ್ಚಿಮ ಘಟ್ಟದ ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳ ಹಾಗೂ ವಯಸ್ಕರಲ್ಲಿ ಕೆಎಫ್‌ಡಿ ಸೀರೋ ಸರ್ವೇ (ರಕ್ತಸಾರ ಸಮೀಕ್ಷೆ) ನಡೆಸುತ್ತಿದೆ.

ಈ ಸರ್ವೇಯನ್ನು ಕರ್ನಾಟಕ, ಮಹಾರಾಷ್ಟ್ರ, ಗೋವಾ, ಕೇರಳ ಮತ್ತು ತಮಿಳುನಾಡು ಸೇರಿದಂತೆ 5 ರಾಜ್ಯಗಳಲ್ಲಿ ನಡೆಸಲಾಗುತ್ತದೆ. ಕರ್ನಾಟಕದಲ್ಲಿ ಈ ಸಮೀಕ್ಷೆಯನ್ನು ಶಿ ವಮೊಗ್ಗದ ಸುಬ್ಬಯ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಮುದಾಯ ವೈದ್ಯಕೀಯ ವಿಭಾಗ ಹಾಗೂ ರಾಜ್ಯ ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಅಧ್ಯಯನಕ್ಕಾಗಿ ಕರ್ನಾಟಕದ ಎಂಟು ಜಿಲ್ಲೆಗಳ 51 ಗ್ರಾಮಗಳಲ್ಲಿ ಸಮೀಕ್ಷೆ ನಡೆಸಲಾಗುತ್ತದೆ.

**ಕೆಎಫ್‌ಡಿ ಸೋಂಕು**

**ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳು ಹಾಗೂ ವಯಸ್ಕರ ಪೈಕಿ ಎಷ್ಟು ಮಂದಿ ಈಗಾಗಲೇ ಕೆಎಫ್‌ಡಿ ಸೋಂಕು ಹೊಂದಿದ್ದಾರೆ ಮತ್ತು ಎಷ್ಟು ಮಂದಿ ಈ ಸೋಂಕಿಗೆ ಅತಿ ಸಂಭಾವ್ಯರಾಗಿ ಉಳಿದಿದ್ದಾರೆ ಎಂಬುದನ್ನು ತಿಳಿಯುವುದಕ್ಕಾಗಿ ಐಸಿಎಂಆರ್-ಎನ್‌ಐಇ ಈ ಸಂಶೋಧನೆ ನಡೆಸುತ್ತಿದೆ.**

**ರಕ್ತದ ಮಾದರಿ ಸಂಗ್ರಹ**

**ಸಮೀಕ್ಷೆ ಯೋಜನೆಯಂತೆ, ಎನ್‌ಐಇ ಚೆನ್ನೈ ತಂಡ ಉತ್ತರ ಕನ್ನಡ ಜಿಲ್ಲೆಯ 10 ಗ್ರಾಮಗಳು, ಉಡುಪಿ ಜಿಲ್ಲೆಯ 6, ಶಿವಮೊಗ್ಗದ 7, ಕೊಡಗಿನ 8, ಹಾಸನದ 1, ದಕ್ಷಿಣ ಕನ್ನಡದ 14, ಚಿಕ್ಕಮಗಳೂರಿನ 4 ಹಾಗೂ ಬೆಳಗಾವಿಯ 1 ಗ್ರಾಮಗಳಲ್ಲಿ ಸಿರೋ ಸರ್ವೇ ನಡೆಸಲಿದ್ದು, ಶಿವಮೊಗ್ಗ ಜಿಲ್ಲೆಯಲ್ಲಿ ಮಾರ್ಚ್ 22 ರಿಂದ ಏಪ್ರಿಲ್ 15 ರ ತನಕ ಈ ಸಮೀಕ್ಷೆಯನ್ನು ನಡೆಸಲಾಗಿದೆ. ಪ್ರತಿ ಗ್ರಾಮದಲ್ಲಿ 6 ರಿಂದ 18 ವರ್ಷದೊಳಗಿನ 14 ಮಕ್ಕಳಿಂದ ಹಾಗೂ 18 ರಿಂದ 50 ವರ್ಷದೊಳಗಿನ 22 ಜನ ವಯಸ್ಕರಿಂದ ರಕ್ತದ ಮಾದರಿಗಳನ್ನು ಸಂಗ್ರಹಿಸಲಾಗುತ್ತದೆ. ಈ 36 ಜನರನ್ನು ಸದರಿ ಗ್ರಾಮಗಳಲ್ಲಿ ರ್‍ಯಾಂಡಮ್ ಆಗಿ ಆಯ್ಕೆ ಮಾಡಲಾಗುತ್ತದೆ. ಸಂಗ್ರಹಿಸಿದ ರಕ್ತದ ಮಾದರಿಗಳನ್ನು ನಿಯಮಿತವಾಗಿ ಪುಣೆಯ ಐಸಿಎಮ್‌ಆರ್ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ವೈರೋಲಾಜಿಗೆ ಕಳುಹಿಸಿ, ಕೆಎಫ್‌ಡಿ ವೈರಸ್ ವಿರೋಧಿ ಪ್ರತಿಕಾಯಗಳನ್ನು ಪರೀಕ್ಷಿಸಲಾಗುತ್ತದೆ.**


ಉದಯವಾಹಿನಿ ಚಿತ್ರ

ಇವುಗಳಲ್ಲಿ ಹಿಂದೆ ಕೆಎಫ್‌ಡಿ ಪ್ರಕರಣಗಳು ಕಂಡು ಬಂದ 20 ಗ್ರಾಮಗಳನ್ನು ವಿಶೇಷವಾಗಿ ಆಯ್ಕೆ ಮಾಡಲಾಗಿದೆ.

ಈ ಸೀರೋ ಸರ್ವೇ ಮೂಲಕ ವೈರಸ್ ಹೆಚ್ಚು ಹರಡಿರುವ ಭೌಗೋಳಿಕ ಪ್ರದೇಶಗಳ ಬಗ್ಗೆ ಮಾಹಿತಿ ಲಭ್ಯವಾಗಲಿದೆ ಹಾಗೂ ವೈರಸ್‌ನ ಸಂಚಾರ ನಡೆಯುತ್ತಿರುವ ಪ್ರದೇಶಗಳ ಪತ್ತೆಯೂ ಸಾಧ್ಯವಾಗುತ್ತದೆ. ಹೆಚ್ಚಿನ ಅಪಾಯವಿರುವ ಜಿಲ್ಲೆಗಳಲ್ಲಿ ಮತ್ತು ವಯೋವರ್ಗಗಳಲ್ಲಿ ಲಸಿಕಾಕರಣವನ್ನು ಆದ್ಯತೆಯಾಗಿಸಲು ಈ ಮಾಹಿತಿಯು ಸಹಾಯ ಮಾಡುತ್ತದೆ.

ಜೊತೆಗೆ, ಈ ಅಧ್ಯಯನದಿಂದ ದೊರೆಯುವ ಸಾಕ್ಷ್ಯಾಧಾರಗಳು ರೋಗದ ನಿಗಾ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಸಹಕರಿಸುತ್ತದೆ ಹಾಗೂ ಇದರಿಂದ ಪ್ರಭಾವಿತ ಪ್ರದೇಶಗಳಲ್ಲಿ ರೋಗವನ್ನು ಬೇಗನೆ ಪತ್ತೆ ಹಚ್ಚುವುದು ಸುಲಭವಾಗುತ್ತದೆ.

## ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆ ಆಗಮನ
## ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ಪ್ರಚುರಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆಗೆ ಭಾನುವಾರ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ ನೀಡಿದರು.

ನಗರದ ಡಿಸಿ ಕಚೇರಿ ಸಮೀಪದ ಒನಕೆ ಓಬವ್ವ ವೃತ್ತದಲ್ಲಿ ರಥಯಾತ್ರೆಯನ್ನು ವಿವಿಧ ಜಾನಪದ ಕಲಾಮೇಳಗಳೊಂದಿಗೆ ಸ್ವಾಗತಿಸಿ, ಜಿಲ್ಲಾಡಳಿತದ ವತಿಯಿಂದ ಬಸವಾದಿ ಶರಣರಿಗೆ ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಲಾಯಿತು.

ಇದೇ ಏ.29 ಮತ್ತು 30ರಂದು ಬಾಗಲಕೋಟೆ ಜಿಲ್ಲೆಯ ಕೂಡಲ ಸಂಗಮದಲ್ಲಿ ಎರಡು ದಿನಗಳ ಕಾಲ ಆಯೋಜಿಸಿರುವ ''ಅನುಭವ ಮಂಟಪ-ಬಸವಾದಿ ಶರಣ ವೈಭವ'' ಕಾರ್ಯಕ್ರಮದ ಅಂಗವಾಗಿ ರಥಯಾತ್ರೆ ಆಯೋಜಿಸಲಾಗಿದ್ದು, ತುಮಕೂರಿನಿಂದ ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ ರಥಯಾತ್ರೆಯು ರಾತ್ರಿ ಚಿತ್ರದುರ್ಗ ನಗರಲ್ಲಿ ವಾಸ್ತವ್ಯ ಮಾಡಿತು.

ನಂತರ ಭಾನುವಾರ ದಾವಣಗೆರೆ ಜಿಲ್ಲೆಗೆ ರಥಯಾತ್ರೆಯು ತೆರಳಿತು. ಜಗತ್ತಿನ ಪ್ರಪ್ರಥಮ ಸಂಸತ್ತು ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥದಲ್ಲಿ ಬಸವಣ್ಣ ಅವರೊಂದಿಗೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಭಗವಾನ್ ಗೌತಮ ಬುದ್ಧ, ಶಿವಶರಣೆ ಅಕ್ಕಮಹಾದೇವಿ, ಸಂತ ಶಿಶುನಾಳ ಶರೀಪ, ಗುರುನಾನಕ್, ಭಗವಾನ್ ಮಹಾವೀರ, ನಾರಾಯಣ ಗುರು, ಯೇಸು ಕ್ರಿಸ್ತರ ಪ್ರತಿಮೆಗಳನ್ನು ಅಳವಡಿಸಲಾಗಿದೆ. ಉಪವಿಭಾಗಾಧಿಕಾರಿ ಮೆಹ ಬೂಬ್ ಜಿಲಾನಿ ಖುರೇಷಿ, ತಹಶೀಲ್ದಾರ ಗೋವಿಂದರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಮುಖಂಡರಾದ ಮಹಡಿ ಶಿವಮೂರ್ತಿ, ರೀನಾ ವೀರಭದ್ರಪ್ಪ, ಕೆಇಬಿ ಷಣ್ಮುಖಪ್ಪ, ಕೆ.ಸಿ.ನಾಗರಾಜು, ಚಿನ್ಮಾಯಿನಂದ, ಶಶಿಧರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಹಾಜಿ ಸರವರ್ ಉರುಸ್ ಶರೀಫ್ ಏ. 24ರಿಂದ ಪ್ರಾರಂಭ

• ಉದಯವಾಹಿನಿ ಚಿಂಚೋಳಿ


ಉದಯವಾಹಿನಿ ಚಿತ್ರ


ತಾಲ್ಲೂಕಿನ ಗಡಿಕೇಶ್ವಾರ ಗ್ರಾಮದ ಹೊರವಲಯದಲ್ಲಿರುವ ಹಾಜಿ ಸರವರ್ ಉರುಸ್ ಶರೀಫ್ ಮಹೋತ್ಸವ ಪ್ರತಿ ವರ್ಷದಂತೆ ಈ ವರ್ಷವು ಕೂಡ ಏಪ್ರಿಲ್ 24 ಗುರುವಾರದಿಂದ ನಾಲ್ಕು ದಿನಗಳು ಅದ್ದೂರಿಯಾಗಿ ಆಚರಣೆ ಮಾಡಲಾಗುವುದು ಸದ್ಭಕ್ತರು ಆಗಮಿಸಿ ದರ್ಶನ ಪಡೆದು ಪುನೀತರಾಗಬೇಕು ಎಂದು ಹಾಜಿ ಸರವರ್ ದರ್ಗಾದ ಸಜ್ಜಾದೆ ನಶೀನ್ ಮಸ್ತಾನ ಅಲಿ ಪಟ್ಟೇದಾರ ತಿಳಿಸಿದ್ದಾರೆ.

ಏಪ್ರಿಲ್ 24ಗುರುವಾರ ರಾತ್ರಿ 8ಗಂಟೆಗೆ ಗಂಧದ ಮೆರವಣಿಗೆಯು ಮಸ್ತಾನ ಅಲಿ ಪಟ್ಟೇದಾರ ಮತ್ತು ಅಬ್ದುಲ್ ಗನಿ, ಚುನ್ನುಮಿಯ್ಯಾ ಇನಾಮದಾರ ಸಜ್ಜಾದೆ ನಶೀನ್ ಗಡಿಕೇಶ್ವರ ಅವರ ಮನೆಯಿಂದ ಪುರ ಮುಖ್ಯ ರಸ್ತೆ ಮಾರ್ಗವಾಗಿ ಮೆರವಣಿಗೆ ದರ್ಗಾ ಶರೀಫ್‌ಗೆ ತಲುಪುತ್ತದೆ. ಶುಕ್ರವಾರ ಏಪ್ರಿಲ್ 25ಕ್ಕೆ ದೀಪೋತ್ಸವ ನೇರವೇರಿಸಿ ರಾತ್ರಿ 9-00ಗಂಟೆಗೆ ದೀಪೋತ್ಸವದಲ್ಲಿ ಮಿಲಾದುನ್ ನಬಿ ಇವರ ಖವ್ವಾಲಿ ಕಾರ್ಯಕ್ರಮಗಳು ಜರಗುತ್ತವೆ, ಶನಿವಾರ ಏ. 26-00 ರಂದು ಮುಂಜಾನೆ 6-00 ಗಂಟೆಗೆ ದೇವರ ಪ್ರಸಾದ ವಿತರಿಸಲಾಗುವುದು.

ರವಿವಾರ 27ಕ್ಕೆ ಭಾರಿ ಪ್ರಮಾಣ ಹರಿಜಾತ್ರೆ ನಡೆದು ಅಲ್ಲಿಂದ ಮಸ್ತಾನ ಅಲಿ,ಚುನ್ನುಮಿಯ್ಯಾ ಇನಾಮದಾರ ಸಜ್ಜಾದ ನಶೀನ್ ಗಡಿಕೇಶ್ವರ ಇವರ ಮನೆಗೆ ಮರಳಿ ದೇವರನ್ನು ತರುವುದೊಂದಿಗೆ ಜಾತ್ರೆ ಮುಕ್ತಾಯಗೊಳ್ಳುತ್ತದೆ. ಕಾರಣ ತಾವೆಲ್ಲರೂ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಜಾತಿ, ಮತ, ಭೇದ ಎನ್ನದೆ ಹಾಜಿ ಸರವರ್ ದರ್ಶನ ಪಡೆದು ಪುನೀತರಾಗಿ ಎಂದು ಕೋರಿದ್ದಾರೆ.

## ವೀರ ಕನ್ನಡಿಗರ ಸೇನೆ ಪದಾಧಿಕಾರಿಗಳು ನೇಮಕ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಐನಾಪೂರ ವ್ಯಾಪ್ತಿಯ ಯಲ್ಮಾಡಗಿ ಗ್ರಾಮದಲ್ಲಿ ವೀರ ಕನ್ನಡಿಗರ ಸೇನೆ ಗ್ರಾಮ ಘಟಕದ ಪದಾಧಿಕಾರಿಗಳು ನೇಮಕ ಮಾಡಿ ನೇಮಕಾತಿ ಪತ್ರ ನೀಡಲಾಯಿತು ಎಂದು ವೀರ ಕನ್ನಡಿಗರ ಸೇನೆ ತಾಲ್ಲೂಕಾಧ್ಯಕ್ಷ ಗೋಪಾಲ ಇಡಗೋಟ್ಟಿ ತಿಳಿಸಿದ್ದಾರೆ.

ವೀರ ಕನ್ನಡಿಗರ ಸೇನೆ ರಾಜ್ಯಾಧ್ಯಕ್ಷರು ಹಾಗೂ ಸಂಸ್ಥಾಪಕ ಅಮೃತ ಪಾಟೀಲ್ ಸಿರನೂರು ಆದೇಶದ ಮೇರೆಗೆ ಹಾಗೂ ವೀರ ಕನ್ನಡಿಗ ಸೇನೆ ಕಲ್ಯಾಣ ಕರ್ನಾಟಕ ಕಾರ್ಯಾಧ್ಯಕ್ಷ ವಿಠ್ಠಲ್ ಕುಸಾಳೆ ಸಮ್ಮುಖದಲ್ಲಿ ತಾಲ್ಲೂಕಾಧ್ಯಕ್ಷ ಅಧ್ಯಕ್ಷತೆಯಲ್ಲಿ ಗ್ರಾಮ ಘಟಕದ ಪದಾಧಿಕಾರಿಗಳು ನೇಮಕ ಮಾಡಿ ಸನ್ಮಾನಿಸಿ ಗೌರವಿಸಲಾಯಿತು. ಯಲ್ಮಮಡಗಿ ಗ್ರಾಮ ಘಟಕ ಅಧ್ಯಕ್ಷರಾಗಿ ರತ್ನಕುಮಾರ ದತ್ತು,ಉಪಾಧ್ಯಕ್ಷರಾಗಿ ರಾಜಕುಮಾರ ತಳಕೇರಿ,ಕಾರ್ಯದರ್ಶಿಯಾಗಿ ಮೌನೇಶ ವಿಶ್ವಕರ್ಮ, ಖಜಾಂಚಿಯಾಗಿ ಅಂಬೋಜಿ ವಿಶ್ವಕರ್ಮ,ಅವರನ್ನು ಆದೇಶ ಪತ್ರವನ್ನು ನೀಡಿ ನೇಮಿಸಿ ಜವಾಬ್ದಾರಿ ನೀಡಲಾಯಿತು. ಉಮೇಶ ಸಿಂಗೆ,ಮಲ್ಲಿಕಾರ್ಜುನ ಕುಂಬಾಳ್,ರಾಜು ತೋಡಿ ಅನೇಕರಿದ್ದರು.

## ಇಂದು ವಿವಿಧ ಹಳ್ಳಿಗಳಲ್ಲಿ ವಿದ್ಯುತ್ ವ್ಯತ್ಯಯ

• ಉದಯವಾಹಿನಿ ಕಾರಟಗಿ

II0/1IKV ಕ.ವಿ.ಪ್ರನಿ, ವಿದ್ಯುತ್ ವಿತರಣಾ ಉಪ-ಕೇಂದ್ರದ ಎಫ್-3 ಎನ್.ಜೆ.ವಾಯ್. ಮಲ್ಲಾನಹಳ್ಳಿ ಹಾಗೂ ಎಫ್-4 ಐ.ಪಿ ಬೂದಗುಂಪಾ ಫೀಡರ್‌ಗಳಲ್ಲಿ 1ಕೆವಿ ವಿದ್ಯುತ್ ಮಾರ್ಗ ಕಾಮಗಾರಿ ಕಾರ್ಯ ನಿರ್ವಾಹಣೆ ಕೈಗೊಳ್ಳುವ ನಿಮಿತ್ತ ದಿನಾಂಕ: 22.04.2025 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ .ಕಾರಣ

ಕಾರಟಗಿ ಉಪ-ವಿಭಾಗದ ಕಾರಟಗಿ ಹಾಗೂ ಬೂದಗುಂಪಾ ಶಾಖಾ ವ್ಯಾಪ್ತಿಯಲ್ಲಿ ದಿನಾಂಕ: 22.04.2025 ಮಂಗಳವಾರದಂದು 110/11ಏಗಿ ಕಾರಟಗಿ ವಿದ್ಯುತ್ ಉಪ-ಕೇಂದ್ರದಿಂದ ಸರಬರಾಜುವಾಗುವ ಎಫ್-3 ಎನ್. ಜೆ.ವಾಯ್.ಮಲ್ಲಾನಹಳ್ಳಿ ಹಾಗೂ ಎಫ್-4 ಐ.ಪಿ ಬೂದಗುಂಪಾ ಫೀಡರ್‌ಗಳಲ್ಲಿ 11ಏಗಿ ವಿದ್ಯುತ್ ಮಾರ್ಗ ಕಾಮಗಾರಿಯ ಕಾರ್ಯ ನಿರ್ವಾಹಣೆ ಕೈಗೊಳ್ಳುತ್ತಿದ್ದು, ಬೆಳ್ಳಿಗ್ಗೆ 10:00 ರಿಂದ ಸಾಯಂಕಾಲ 04:00 ಗಂಟೆವರೆಗೆ ವಿದ್ಯುತ್ ಸರಬರಾಜು ವ್ಯತ್ಯಯ ಉಂಟಾಗುತ್ತದೆ. ಕಾರಣ ಕಾರಟಗಿ ಶಾಖೆಯ ಎಫ್-3 ಎನ್. ಜೆ.ವಾಯ್ ಮರ್ಲಾನ ಹಳ್ಳಿ ಹಾಗೂ ಬೂದಗುಂಪಾ ಶಾಖೆಯ ಎಫ್-4 ಐ.ಪಿ. ಬೂದಗುಂಪಾ ಫೀಡರ್‌ಗಳ ವ್ಯಾಪ್ತಿಯಲ್ಲಿ ಬರುವಂತಹ ಈ ಕೆಳಕಾಣಿಸಿದ ಹಳ್ಳಿಗಳ ಗ್ರಾಹಕರು ಕಂಪನಿಯೊಂದಿಗೆ ಸಹಕರಿಸಲು ಗ್ರಾಹಕರಿಗೆ ಈ ಮೂಲಕ ತಿಳಿಸಲಾಗಿದೆ.




ಎಫ್-4 ಐ.ಪಿ ಬೂದಗುಂಪಾ ಫೀಡರ್‌ಗೆ ಒಳಪಡುವ ಮರ್ಲನಹಳ್ಳಿ , ಹಳೇ ಜೂರಟಗಿ, ಹೊಸ ಜೂರಟಗಿ, ಎಚ್ ಬಸವಣ್ಣಕ್ಯಾಂಪ್, ಹುಳ್ಳಿಹಾಳ, ಹುಳ್ಳಿಹಾಳ ಕ್ಯಾಂಪ್, 28ನೇ ಕಾಲುವೆ, 29ನೇ ಕಾಲುವೆ, ತೊಂಡಿಹಾಳ, ತೊಂಡಿಹಾಳ ಕ್ಯಾಂಪ್, ದುಂಡಗಿ, ಹಗೇದಾಳ, ಚಳ್ಳೂರು. ಚಳ್ಳೂರು ಕ್ಯಾಂಪ್, ಹಾಗೂ ಇನ್ನಿತರ ಸುತ್ತಮುತ್ತಲಿನ ಹಳ್ಳಿಗಳಲ್ಲಿ ವಿದ್ಯುತ್ ವ್ಯತ್ಯಯವಾಗುತ್ತದೆ. ಕಾರಣ ಗ್ರಾಹಕರು ಕಂಪನಿಯೊಂದಿಗೆ ಸಹಕರಿಸಲು ಈ ಮೂಲಕ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪತ್ರಿಕ ಮೂಲಕ ತಿಳಿಸಿದ್ದಾರೆ.

## ಆನೂರ ಗ್ರಾಮದ ದಲಿತ ಕಾಲೋನಿ ಚರಂಡಿಯಲ್ಲಿ ಸೊಳ್ಳೆ ಸಾಮ್ರಾಜ್ಯ

• ಉದಯವಾಹಿನಿ, ಅಫಜಲಪುರ


ಉದಯವಾಹಿನಿ ಚಿತ್ರ

ಸೊಳ್ಳೆ ಕಡಿತದಿಂದ ಉಂಟಾಗುವ ರೋಗಗಳ ನಿಯಂತ್ರಣಕ್ಕಾಗಿ ಸರ್ಕಾರ ಕೋಟಿ ಕೋಟಿ ಹಣ ಖರ್ಚು ಮಾಡುತ್ತಿದೆ. ಆದರೆ ತಾಲ್ಲೂಕಿನ ಆನೂರ ಗ್ರಾಮದ ದಲಿತ ಕಾಲೋನಿಯಲ್ಲಿನ ಚರಂಡಿಗಳಲ್ಲಿ ಸೊಳ್ಳೆಗಳ ಸಾಮ್ರಾಜ್ಯವೇ ಇದ್ದು ಇಡೀ ಬಡಾವಣೆ ಜನ ಸೊಳ್ಳೆ ಕಾಟದಿಂದ ಬೇಸತ್ತು ಹೋಗಿದ್ದಾರೆ.

ತಾಲ್ಲೂಕಿನ ಆನೂರ ಗ್ರಾಮದ ದಲಿತ ಕಾಲೋನಿಯಲ್ಲಿ ಚರಂಡಿಯಲ್ಲಿ ಕಸ, ಪ್ಲಾಸ್ಟಿಕ್ ತ್ಯಾಜ್ಯಗಳನ್ನು ತುಂಬಿಕೊಂಡಿದ್ದರಿಂದ ಚರಂಡಿ ನೀರು ಹರಿದು ಹೋಗದೆ ನಿಂತಲ್ಲೆ ನಿಂತು ಲಾರ್ವಾ ಹುಟ್ಟಿಕೊಂಡು ಸೊಳ್ಳೆಗಳ ಸಾಮ್ರಾಜ್ಯವಾಗಿ ಮಾರ್ಪಟ್ಟಿದೆ. ಚರಂಡಿ ನೀರಲ್ಲಿ ಹಂದಿಗಳು ಒದ್ದಾಡಿ ಇನ್ನಷ್ಟು ಕಲುಷಿತಗೊಳಿಸುತ್ತಿರುವುದರಿಂದ ದುರ್ನಾತ ಬೀರುವಂತಾಗಿದೆ. ಐದಾರು ತಿಂಗಳ ಹಿಂದೆ ತಾ.ಪಂ ಇಒ ವೀರಣ್ಣ ಕವಲಗಿ ಆನೂರ ಗ್ರಾಮದ ದಲಿತ ಕಾಲೋನಿಗೆ ಭೇಟಿ ನೀಡಿ ಬಡಾಣೆಯಲ್ಲಿ ಸುತ್ತಾಡಿ ಇಲ್ಲಿನ ಅವ್ಯವಸ್ಥೆ ಕಂಡು ಬೇಸರ ವ್ಯಕ್ತಪಡಿಸಿದ್ದರಲ್ಲದೆ ಆನೂರ ಪಂಚಾಯಿತಿಯವರ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ ಆದಷ್ಟು ಬೇಗ ಸಮಸ್ಯೆ ಸರಿಪಡಿಸಬೇಕೆಂದು ತಾಕೀತು ಮಾಡಿದ್ದರು.

ತಾ.ಪಂ ಅಧಿಕಾರಿಗಳ ತಾಕೀತನ್ನು ಕೂಡ ಇಲ್ಲಿನ ಪಂಚಾಯಿತಿಯವರು ಮರೆತಂತೆ ವರ್ತಿಸುತ್ತಿದ್ದಾರೆ. ನಾವು ನಿತ್ಯ ಸಮಸ್ಯೆ ಅನುಭವಿಸುವಂತಾಗಿದೆ ಎಂದು ಬಡಾವಣೆ ನಿವಾಸಿಗಳು ಅಳಲು ತೋಡಿಕೊಂಡಿದ್ದಾರಲ್ಲದೆ ಸಂಬಂಧಪಟ್ಟವರು ಸಮಸ್ಯೆಗೆ ಪರಿಹಾರ ಕಲ್ಪಿಸದೇ ಇದ್ದರೆ ಪಂಚಾಯಿತಿಗೆ ಬೀಗ ಜಡಿದು ಪ್ರತಿಭಟನೆ ನಡೆಸುತ್ತೇವೆ ಎಂದು ಎಚ್ಚರಿಸಿದ್ದಾರೆ.

**ಸಂಬಂಧ ಪಟ್ಟವರ ಮೇಲೆ ಹಿಡಿ ಶಾಪ**

**ನಿತ್ಯ ಇಲ್ಲಿನ ಜನ ದುರ್ನಾತ ತಡೆದುಕೊಳ್ಳುವುದು ಒಂದು ಕಡೆಯಾದರೆ ನಿತ್ಯ ಸಂಜೆಯಾಗುತ್ತಿದ್ದಂತೆ ದಾಳಿ ಇಡುವ ಸೊಳ್ಳೆ ಕಾಟದಿಂದ ರೋಸಿ ಹೋಗಿದ್ದು ಇಲ್ಲಿನ ಪಂಚಾಯಿತಿಯವರ ಮೇಲೆ ಮತ್ತು ಸಂಬಂಧ ಪಟ್ಟವರ ಮೇಲೆ ಹಿಡಿ ಶಾಪ ಹಾಕುತ್ತಿದ್ದಾರೆ.**

## ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ

• ಉದಯವಾಹಿನಿ ಚನ್ನಮ್ಮನ ಕಿತ್ತೂರು

ಕಿತ್ತೂರ ಅರಸರ ಸಮಾಧಿಗಳ ಸ್ವಚ್ಛತೆ ಹಾಗೂ ವಿಶ್ವ ಪರಂಪರೆ ಮತ್ತು ಸುತ್ತಮುತ್ತಲಿನ ಐತಿಹಾಸಿಕ ವಣ್ಣೂರು ಭಾವಿ ಸೇರಿದಂತೆ ವಿವಿಧ ಸ್ಮಾರಕಗಳು, ದೇವಾಲಯಗಳು, ಶಿಲ್ಪಿಗಳು, ಶಾಸನಗಳ ರಕ್ಷಣೆ-ಸ್ವಚ್ಛತೆಯಿಂದಿಟ್ಟುಕೊಳ್ಳುವುದು. ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಕಿನಾವಿವ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವಪರಂಪರೆ ದಿನಾಚರಣೆ ಅಂಗವಾಗಿ ಕಲ್ಮಠ ಅವರಣದಲ್ಲಿರುವ ಕಿತ್ತೂರು ಅರಸರ ಸಮಾಧಿಗಳ ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ದೀಪ ಬೆಳಗಿಸಿ ಮಾತನಾಡಿದವರು. ಸ್ಮಾರಕಗಳು ಒಂದು ತಲೆಮಾರಿನಿಂದ ಮತ್ತೊಂದು ತಲೆಮಾರು ಪಡೆದು ಅತ್ಯಮೂಲ್ಯ ಬಳವಳಿಅಯಾಗಿದ್ದು ನಮ್ಮ ಪರಂಪರೆಯ ಪ್ರತೀಕವಾಗಿವೆ. ಇವುಗಳನ್ನು ಕಾಪಾಡಿಕೊಂಡು ಹೋಗುವ ದೊಡ್ಡ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಇಂತಹ ಕಾಯಕ್ರಮಗಳ ಕುರಿತು ಸಾರ್ವಜನಿಕರ ಹಾಗೂ ಶಾಲಾ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು.

ಕ್ಯೂರೇಟರ್ ರಾಘವೇಂದ್ರ ಮಾತನಾಡಿ ವಿಶ್ವ ಪರಂಪರೆ ದಿನಾಚರಣೆ ಮಹತ್ವ ಹಾಗೂ ಪರಂಪರೆ ವಿಧಿಗಳ ಕುರಿತು ಸವಿಸ್ತಾರ ಮಾಹಿತಿ ನೀಡಿದರು. ಸಾನಿಧ್ಯವಹಿಸಿ ಮಾತನಾಡಿದ ಮಡಿವಾಳ ರಾಜಯೋಗೀಂದ್ರ ಸ್ವಾಮಿಜೀ ರಾಜಗುರು ಸಂಸ್ಥಾನ ಕಲ್ಮಠ ಕಿತ್ತೂರು ನಮ್ಮ ದೇಶವು ಅಪಾರ ಶ್ರೀಮಂತಿಕೆ ಹೊಂದಿದೆ ಎಂದರು.

### ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಅಲೆಮಾರಿ ಸಮುದಾಯಗಳ ಸಮಸ್ಯೆ, ಮತ್ತು ಪರಿಹಾರೋಪಾಯಗಳು

# ಸಂಸ್ಕೃತಿ ಅಭಿವೃದ್ಧಿಗೆ ಅಲೆಮಾರಿ ಸಮುದಾಯದ ಕೊಡುಗೆ ಅಪಾರ: ಪಲ್ಲವಿ.ಜಿ

• ಉದಯವಾಹಿನಿ, ಬೀದರ


ಉದಯವಾಹಿನಿ ಚಿತ್ರ

**ಅಲೆಮಾರಿಗಳು ಪ್ರಕೃತಿಯ ಆರಾಧಕರು**

ನಮ್ಮ ದೇಶದ ಸಾಂಸ್ಕೃತಿಕ ವೈಭವದಲ್ಲಿ, ಜನ ಜೀವನದಲ್ಲಿ, ಅಭಿವೃದ್ಧಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲೆಮಾರಿ ಜನಾಂಗಗಳ ಕೊಡುಗೆ ಸ್ಮರಣೀಯವಾದುದಾಗಿದೆ ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ ಹೇಳಿದರು.

ಅವರು ಬೀದರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿದ್ದು ಹಮ್ಮಿಕೊಂಡಿದ್ದ 'ಬೀದರ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಅಲೆಮಾರಿ ಸಮುದಾಯಗಳ ಸಮಸ್ಯೆ, ಸವಾಲುಗಳು ಮತ್ತು ಪರಿಹಾರೋಪಾಯಗಳು' ಕುರಿತಾದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು.

ವಿಶೇಷ ಉಪನ್ಯಾಸಕರಾಗಿದ್ದ ಬಿ.ಎಸ್. ಆನಂದಕುಮಾರ ಏಕಲವ್ಯ ಅವರು ಮಾತನಾಡಿ, ಅಲೆಮಾರಿಗಳು ಸಾರ್ಥಕ ಬದುಕಿನ ನಿಜವಾದ ರೂವಾರಿಗಳು. ನಾಳಿನ ಬದುಕಿಗಾಗಿ, ಸ್ವಚ್ಛ ಭಾರತದ ನಿಜವಾದ ನಾಗರೀಕರು. ತಮ್ಮ ಉಪಜೀವನಕ್ಕಾಗಿ ಹಾವು, ಕೋತಿ, ಕರಡಿ ಆಡುಸುತ್ತಾ ಸಮಾಜದ ಸ್ವಾಸ್ಥಕ್ಕಾಗಿ, ಸಾಂಸ್ಕೃತಿಕವಾಗಿ ಶ್ರೀಮಂತಗೊಳಿಸುವ ಪ್ರಾಂಜಲಭಾವದ ಕಾಯಕಜೀವಿಗಳು. ಅವರು ಸ್ವಂತ ಸೂರಿಲ್ಲದೇ ನಿರಂತರ ಸಂಚರಿಸಿ ತಾವು ಪಟ್ಟ ಪಾಡೇ ದೇಶಕ್ಕೆ ಹಾಡಾಗಿಸಿದರು. ಅತ್ಯಂತ ಕಠಿಣ ಕೆಲಸಗಳನ್ನು ಈ ಅಲೆಮಾರಿ, ಬುಡಕಟ್ಟು ಜನಾಂಗದಿಂದಲೇ ಅಂದಿನ ಆಡಳಿತವರ್ಗ ಮಾಡಿಸಿತು.

ಅಲೆಮಾರಿ ಗಳು ಪ್ರಕೃತಿಯ ಆರಾಧಕರು. ಪ್ರಕೃತಿಯೊಂದಿಗೆ ಮಾತಾಡುವವರು. ಅರಣ್ಯದ ಹಕ್ಕನ್ನು ನಿಷೇಧ ಮಾಡಿದಾಗ ಅವರು ಅರಣ್ಯವನ್ನು ತೊರೆದು ದೊಂಬರಾಟ, ದುರುಗಮುರುಗಿ ಮುಂತಾದ ಕಾಯಕದಲ್ಲಿ ತಮ್ಮನ್ನು ಗುರುತಿಸಿಕೊಂಡು ಬಾಳಿದರು. ಅಲೆಮಾರಿ ಬದುಕು ಆಧುನಿಕತೆಯ ಹೊಡೆತಕ್ಕೆ ಸಿಕ್ಕು ಮೂರಾಬಟ್ಟೆಯಾಗಿದೆ. ಅವರು ತಯಾರಿಸುವ ವಸ್ತುಗಳ ಸ್ಥಾನದಲ್ಲಿ ಪ್ಲಾಸ್ಟಿಕ್, ಎಲೆಕ್ಟ್ರಾನಿಕ್ ವಸ್ತುಗಳು ಆವರಿಸಿವೆ. ಹೀಗಾಗಿ ಅಲೆ ಮಾರಿಗಳ ಅಭಿವೃದ್ಧಿ, ಅವರ ಬದುಕು ಕಟ್ಟಿಕೊಡುವಲ್ಲಿ ಎಲ್ಲರೂ ಪ್ರಾಮಾಣಿಕವಾಗಿ, ಸಹಕಾರಿಯಾಗಬೇಕೆಂದರು. ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸುರೇಖಾ ಕೆ.ಎ.ಎಸ್. ಮಾತನಾಡಿ, ದೇಶದ ಉದ್ಧಾರವೆಂದರೆ ಎಲ್ಲರ ಜೀವನ ಮಟ್ಟ ಸುಧಾರಣೆಯಾಗಬೇಕು. ಅಲೆಮಾರಿಗಳ, ತಳವರ್ಗದ ಜನರೆಲ್ಲ ಮುಖ್ಯವಾಹಿನಿಗೆ ತರಬೇಕಾದ ಅವಶ್ಯಕತೆಯಿದೆ ಎಂದರು. ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಶ್ರೀನಾಗಭೂಷಣ ಕಮಠಾಣೆ, ಶಾಂತಲಿಂಗ ಸಾವಳಗಿ, ಸಚಿನ್ ಶಿವರಾಜ, ವಿಠ್ಠಲದಾಸ ಪ್ಯಾಗೆ, ಅಬ್ದುಲ್ ಸತ್ತಾರಸಾಬ, ವೈಷ್ಣವಿ ಪಾಟೀಲ, ಪ್ರೊ. ಪರಮೇಶ್ವರನಾಯ್ಕ.ಟಿ. ವಿಶ್ವವಿದ್ಯಾಲಯದ ಅಧ್ಯಾಪಕ, ಅಧ್ಯಾಪಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> **ಅಲೆಮಾರಿ ಜನಾಂಗ ಧ್ವನಿಯಿಲ್ಲದ, ಶಕ್ತಿಯಿಲ್ಲದ ಜನಾಂಗ. ಬಡವರ ನೋವು ಅದನ್ನು ಅನುಭವಿಸಿದವರಿಗೆ ಮಾತ್ರ ಅರ್ಥವಾಗುತ್ತದೆ. ಇಂದಿಗೂ ನಿರ್ಲಕ್ಷಕ್ಕೊಳಗಾದ ಅಲೆಮಾರಿ ಸಮುದಾಯ ನಿರಂತರ ಸಂಚಾರದಿಂದಾಗಿ ಜನಸಂಖ್ಯಾ ಗಣತಿಯಲ್ಲಿ, ಆಧಾರನಲ್ಲಿಯೂ ಅಡ್ರೆಸ್ ಸಿಗದಷ್ಟು ನತದೃಷ್ಟರಾಗಿದ್ದಾರೆ. ಅವರ ಜೀವನ ನಿಜವಾಗಿಯೂ ಶೋಚನೀಯ. ಅವರು ಸಂಜೆ ನಾಳೆಯ ಹೊಟ್ಟೆಪಾಡಿಗಾಗಿ ಹುಡುಕಾಡುತ್ತಿರುವ ಅತ್ಯಂತ ಕಷ್ಟದ ಬದುಕನ್ನು ಹೊಂದಿದವರಾಗಿದ್ದಾರೆ. ಅಂತಹ ನಿರ್ಲಕ್ಷಿತರ ಸಬಲೀಕರಣಕ್ಕಾಗಿ ಎಲ್ಲರೂ ಶ್ರಮಿಸಬೇಕಾಗಿದೆ -ಪ್ರೊ.ಬಿ.ಎಸ್.ಬಿರಾದಾರರವರು, ಕುಲಪತಿ**

> **ವಿದ್ಯಾವಂತರಾದವರು ತಳವರ್ಗದ, ಅಲೆಮಾರಿಗಳ ಚಿಂತನೆ ಮಾಡಬೇಕು. ಧ್ವನಿಯಿಲ್ಲದವರಿಗೆ ಅವಕಾಶ ವಂಚಿತರಿಗೆ ಅವಕಾಶ ನೀಡುವ ಮನಸ್ಸು ಮಾಡಬೇಕು. ಸಮಾಜ ಕಲ್ಯಾಣವೆಂದರೆ ಜನರ ಕಲ್ಯಾಣ, ಸಮುದಾಯದ ಕಲ್ಯಾಣ. ಹೀಗಾಗಿ ಮೂಲನಿವಾಸಿಗಳಾದ ಪರಿಶಿಷ್ಟ ಜಾತಿ, ಪಂಗಡ ಹಾಗೂ ಅಲೆಮಾರಿಗಳ ಕುರಿತು ಅಧ್ಯಯನ ಕೈಗೊಂಡು ಅವರ ವಾಸ್ತವ ಬದುಕಿನ ಬಗ್ಗೆ ಬೆಳಕು ಚೆಲ್ಲಬೇಕಾದ ಅವಶ್ಯಕತೆಯಿದೆ -ಪಲ್ಲವಿ.ಜಿ,**

### ಕೇಂದ್ರ ಬ್ಯಾಂಕ್‌ನ ಸ್ವಾಯತ್ತತೆ ಮೇಲೆ ಕಣ್ಣು, ಟ್ರಂಪ್ ಬಿಟ್ಟ ಟಾರಿಫ್ ಬಾಣ ಸ್ವತಃ ಅಮೆರಿಕಕ್ಕೇ ತಿರುಗುಬಾಣ

# ಫೆಡರಲ್ ರಿಸರ್ವ್‌ನ ಅಧ್ಯಕ್ಷರನ್ನೇ ಕೆಳಗಿಳಿಸೋಕೆ ಟ್ರಂಪ್ ಪ್ಲ್ಯಾನ್

**ಅಮೇರಿಕ:** ಜಗತ್ತಿನಾದ್ಯಂತ ಬಹುತೇಕ ಎಲ್ಲಾ ರಾಷ್ಟ್ರಗಳ ಮೇಲೂ ಪ್ರತಿ ಸುಂಕದ ಹೆಸರಿನಲ್ಲಿ ಯರ್ರಾಬಿರ್ರಿ ಟಾರಿಫ್ ಅನ್ನು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ ಮಾಡ್ತಿದ್ದಂತೆ ಷೇರುಪೇಟೆಗಳಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಯಾಗಿತ್ತು. ಮಲ್ಟಿನ್ಯಾಷನಲ್ ಕಂಪನಿಗಳ ಷೇರು ಬೆಲೆಯು ಮುಗ್ಗರಿಸಿ ಬಿದ್ದವು. ಬೇರೆ ಬೇರೆ ದೇಶಗಳಿಂದ ಆಮದಾಗುವ ವಸ್ತುಗಳ ಮೇಲೆ ಅವಲಂಬಿಸಿರೋ ಕಂಪನಿಗಳು ದುಪ್ಪಟ್ಟು ಹಣ ಕೊಡ್ಬೇಕಾಗುತ್ತೆ ಅಂತ ಪ್ರೊಡಕ್ಷನ್ ಮಾಡೋದನ್ನೇ ನಿಲ್ಲಿಸಿದವು. ಟ್ರಂಪ್ ಬಿಟ್ಟ ಟಾರಿಫ್ ಬಾಣವು ಸ್ವತಃ ಅಮೆರಿಕಕ್ಕೇ ತಿರುಗುಬಾಣ ಆಗ್ತಿರೋದು ಅರಿವಿಗೆ ಬಂದರೂ, ಇದೆಲ್ಲವೂ ಅಲ್ಪ ಕಾಲದ ತಲ್ಲಣ ಅಷ್ಟೇ ಅಂತ ಅಮೆರಿಕನ್ನರನ್ನು ಟ್ರಂಪ್ ಸಮಾಧಾನ ಪಡಿಸಿದರು.

ಮುಂದಿನ ಅಪಾಯಗಳು ಊಹೆಗೂ ಮೀರಿದ್ದು

ಆದರೆ, ಆರ್ಥಿಕ ತಜ್ಞರು, ಹೂಡಿಕೆದಾರರು ಟ್ರಂಪ್ ಕ್ರಮಗಳನ್ನು ಕಠುವಾಗಿ ಟೀಕಿಸಿದರು. ಅದರಲ್ಲಿ ಅಮೆರಿಕದ ಕೇಂದ್ರ ಬ್ಯಾಂಕ್ ಫೆಡರಲ್ ರಿಸರ್ವ್‌ನ ಮುಖ್ಯಸ್ಥರೂ ಒಬ್ಬರು. ತಮ್ಮ ಕ್ರಮಗಳನ್ನು ವಿರೋಧಿಸಿರುವ ಜೆರೋಮ್ ಪೊವೆಲ್ ಮೇಲೆ ಟ್ರಂಪ್ ಕೆಂಡಕಾರುತ್ತಿದ್ದು, ಈಗ ಟ್ರಂಪ್ ಕಣ್ಣು ಫೆಡರಲ್ ರಿಸರ್ವ್‌ನ ಮೇಲೆ ಬಿದ್ದಿದೆ.

ಟ್ರಂಪ್ ಎಂಥದ್ದೇ ನಿರ್ಧಾರಗಳನ್ನು ತೆಗೆದುಕೊಂಡ್ರೂ, 'ಜೀ ಹುಕುಂ..' ಅನ್ನಲೇಬೇಕು. ಯಾರಾದ್ರೂ ಅವರ ವಿರುದ್ಧ ದನಿ ಎತ್ತಿದರೆ, ಅಲ್ಲಿಗೆ ಅವರು ಟಾರ್ಗೆಟ್ ಆದಂತೆಯೇ. ಇದು ಜನರು, ದೇಶ, ಸಂಸ್ಥೆಗಳು,..ಎಲ್ಲರಿಗೂ ಎಲ್ಲದಕ್ಕೂ ಅನ್ವಯ.

ಈಗ ಅಮೆರಿಕ ಫೆಡರಲ್ ರಿಸರ್ವ್‌ನ ಅಧ್ಯಕ್ಷರನ್ನೇ ಸ್ಥಾನದಿಂದ ಕಿತ್ತೊಗೆಯುವ ಮಾತುಗಳನ್ನು ಟ್ರಂಪ್ ಆಡಿದ್ದಾರೆ. ಈಗಾಗ್ಲೇ ಯೂನಿರ್ಸಿಟಿಗಳು, ಶಿಕ್ಷಣ ಇಲಾಖೆ ಸೇರಿದಂತೆ ಸರಕಾರದ ಹಲವು ಇಲಾಖೆಗಳಿಗೆ ಭರ್ಜರಿ ಸರ್ಜರಿಯನ್ನೇ ನಡೆಸಿರುವ ಟ್ರಂಪ್ ಆಡಳಿತವು ಫೆಡರಲ್ ರಿಸರ್ವ್‌ನ ಸ್ವಾಯತ್ತತೆಯ ಮೇಲೆ ಕಣ್ಣಿಟ್ಟಿದೆ. ರಾಜಕೀಯ, ಸರಕಾರದ ಅಧಿಕಾರಗಳಿಂದ ಸ್ವತಂತ್ರವಾಗಿ ಉಳಿದಿರುವ ಫೆಡರಲ್ ರಿಸರ್ವ್ ಮೇಲೆ ನಿಯಂತ್ರಣ ಸಾಧಿಸೋಕೆ ಟ್ರಂಪ್ ಪ್ರಯತ್ನ ನಡೆಸಿದ್ದಾರೆ. ಈಗಾಗಲೇ ಚೀನಾ ಜೊತೆಗಿನ ಸುಂಕ ಸಮರ ಹಾಗೂ ಆಮದು ಸುಂಕ ಹೇರಿಕೆಯಿಂದಾಗಿ ಹಣಕಾಸು ಮಾರುಕಟ್ಟೆಗಳಲ್ಲಿ ತಲ್ಲಣ ಉಂಟಾಗಿದೆ. ಇನ್ನು ದೇಶದಲ್ಲಿ ಬ್ಯಾಂಕ್‌ಗಳ ಬಡ್ಡಿ ದರಗಳು, ಆರ್ಥಿಕ ಬೆಳವಣಿಗೆ ಹಾಗೂ ಹಣಕಾಸು ದುಬ್ಬರದ ನಿರ್ವಹಣೆ ಮಾಡುವ ಫೆಡರಲ್ ರಿಸರ್ವ್ ಕೂಡ ಟ್ರಂಪ್ ಪ್ರಭಾವಕ್ಕೆ ಒಳಗಾದ್ರೆ, ಮುಂದಿನ ಅಪಾಯಗಳು ಊಹೆಗೂ ಮೀರಿದ್ದು ಅನ್ನೋದು ಆರ್ಥಿಕ ತಜ್ಞರ ಆತಂಕ.



**ಅವರ ಕೆಲಸಗಳು ನನಗೆ ತೃಪ್ತಿ ಕೊಟ್ಟಿಲ್ಲ**

ಫೆಡರಲ್ ರಿಸರ್ವ್‌ನ ಅಧ್ಯಕ್ಷ ಜೆರೋಮ್ ಪೊವೆಲ್ ಬಡ್ಡಿದರಗಳನ್ನು ದೊಡ್ಡ ಮಟ್ಟದಲ್ಲಿ ಕಡಿತ ಮಾಡ್ತಿಲ್ಲ ಅಂತ ಆರೋಪಿಸಿರುವ ಟ್ರಂಪ್ ಅವರ ಕೆಲಸಗಳು ನನಗೆ ತೃಪ್ತಿ ಕೊಟ್ಟಿಲ್ಲ. ನಾನು ಮನಸ್ಸು ಮಾಡಿದ್ರೆ ಅವರು ಬಹಳ ಬೇಗನೇ ಸ್ಥಾನವನ್ನು ಬಿಟ್ಟು ಹೋಗಬೇಕಾಗುತ್ತೆ. ನನಗೆ ಆ ಅಧಿಕಾರಿ ಇದೆ ಎಂದಿದ್ದಾರೆ. ಆದರೆ, ಸ್ವತಂತ್ರ್ಯ ಸಂಸ್ಥೆಯಾಗಿರುವ ಅಮೆರಿಕದ ಕೇಂದ್ರ ಬ್ಯಾಂಕ್‌ನಲ್ಲಿ ಸರಕಾರವು ಮಧ್ಯ ಪ್ರವೇಶಿಸಿ, ಅದರ ಅಧ್ಯಕ್ಷರನ್ನು ತೆಗೆದು ಹಾಕೋದು ಸುಲಭದ ಮಾತಲ್ಲ.

1913ರಲ್ಲಿ ಸ್ಥಾಪನೆಯಾದ ಫೆಡರಲ್ ರಿಸರ್ವ್, ಇಡೀ ಅಮೆರಿಕದ ಆರ್ಥಿಕ ವ್ಯವಸ್ಥೆಯನ್ನು ನಿಯಂತ್ರಿಸುತ್ತದೆ. ಆರ್ಥಿಕತೆಯಲ್ಲಿ ಉಂಟಾಗುವ ಏರಿಳಿತದ ಮೇಲೆ ನಿಗಾ ಇಟ್ಟು, ಅದಕ್ಕೆ ತಕ್ಕಂತೆ ಬಡ್ಡಿ ದರವನ್ನು ಹೆಚ್ಚಿಸುವುದು ಅಥವಾ ಕಡಿತಗೊಳಿಸುವ ಕ್ರಮವನ್ನು ಫೆಡರಲ್ ರಿಸರ್ವ್ ತೆಗೆದುಕೊಳ್ಳುತ್ತೆ.

**ಷೇರುಪೇಟೆಯಲ್ಲಿ ಮಾರಾಟದ ಒತ್ತಡ**

ಅಕಸ್ಮಾತ್ ಪೊವೆಲ್‌ರನ್ನು ತೆಗೆಯಲು ಟ್ರಂಪ್ ಪ್ರಯತ್ನ ಮುಂದುವರಿಸಿದ್ರೆ, ಷೇರುಪೇಟೆ ಹೂಡಿಕೆದಾರರು ತಮ್ಮ ಹೂಡಿಕೆಗಳನ್ನು ವಾಪಸ್ ಪಡೀತಾರೆ. ಆಗ ಷೇರುಪೇಟೆಯಲ್ಲಿ ಮಾರಾಟದ ಒತ್ತಡ ಉಂಟಾಗುತ್ತೆ ಹಾಗೂ ಸರಕಾರಿ ಬಾಂಡ್‌ಗಳಲ್ಲಿ ಹೂಡಿಕೆ ಪ್ರಮಾಣ ಜಾಸ್ತಿಯಾಗುತ್ತೆ. ಅದರ ಬೆನ್ನಲ್ಲೇ ಸಾಲದ ಮೇಲಿನ ಬಡ್ಡಿದರಗಳು ಭಾರೀ ಏರಿಕೆಯಾಗುತ್ತೆ. ಹಣದುಬ್ಬರ ಹೆಚ್ಚಾದಾಗ್ಲೆಲ್ಲಾ ಫೆಡರಲ್ ರಿಸರ್ವ್ ಅದಕ್ಕೆ ತಕ್ಕ ಕ್ರಮಗಳನ್ನು ಘೋಷಣೆ ಮಾಡಿ, ನಿರ್ಧಾರನ್ನು ಪ್ರಕಟಿಸುತ್ತೆ. ಆದರೆ, ರಾಜಕಾರಣವು ಇದರೊಂದಿಗೆ ಬೆರೆತರೆ, ಆಗ ಕೇಂದ್ರ ಬ್ಯಾಂಕ್‌ನ ನಿರ್ಧಾರದಲ್ಲೂ ಬದಲಾವಣೆಯಾಗುತ್ತೆ.

ಆರ್ಥಿಕತೆಯಲ್ಲಿ ಚೇತರಿಕೆ ಕಾಣದೆ, ಜನರು ಹಣವನ್ನು ಖರ್ಚು ಮಾಡದ ಪರಿಸ್ಥಿತಿ ಬಂದ್ರೆ, ಆಗ ಬಡ್ಡಿದರವನ್ನು ಕಡಿಮೆ ಮಾಡಲಾಗುತ್ತೆ. ಕಡಿಮೆ ಬಡ್ಡಿಗೆ ಹಣ ಸಿಗೋದ್ರಿಂದ ಸಾಲ ತೆಗೆದುಕೊಳ್ಳುವುದು ಹಾಗೂ ಹೆಚ್ಚು ಖರ್ಚು ಮಾಡೋದು ಜಾಸ್ತಿಯಾಗುತ್ತೆ. ಅದ್ರಿಂದ ವಸ್ತುಗಳಿಗೆ ಡಿಮ್ಯಾಂಡ್ ಸೃಷ್ಟಿಯಾಗುತ್ತೆ, ಹಾಗೇ ಜನರಿಗೆ ಉದ್ಯೋಗವೂ ಸೃಷ್ಟಿಯಾಗುತ್ತೆ.

## ಜಮ್ಮು-ಕಾಶ್ಮೀರದಲ್ಲಿ ಭಾರೀ ಮಳೆ: ಪ್ರವಾಹಕ್ಕೆ ಮೂವರು ಬಲಿ

**ಶ್ರೀನಗರ:** ಜಮ್ಮು ಮತ್ತು ಕಾಶೀರದ ರಾಂಬನ್ ಜಿಲ್ಲೆಯ ಚೆನಾಬ್ ನದಿಯ ಸಮೀಪವಿರುವ ಧರ್ಮಕುಂಡ್ ಗ್ರಾಮದಲ್ಲಿ ರಾತ್ರಿ ಸುರಿದ ತೀವ್ರ ಮಳೆಯಿಂದ ಉಂಟಾದ ಪ್ರವಾಹವು ಮೂರು ಜೀವಗಳನ್ನು ಬಲಿ ತೆಗೆದುಕೊಂಡಿದ್ದು, ಓರ್ವ ವ್ಯಕ್ತಿ ಕಾಣೆಯಾಗಿರುವ ಘಟನೆ ಸಂಭವಿಸಿದೆ. ಭೂಕುಸಿತ ,ಆಲಿಕಲ್ಲು ಮಳೆಯೊಂದಿಗೆ ನೈಸರ್ಗಿಕ ವಿಕೋಪವು ಆಸ್ತಿ ಮತ್ತು ಮೂಲಸೌಕರ್ಯಗಳಿಗೆ ಭಾರೀ ಹಾನಿಯನ್ನುಂಟುಮಾಡಿದೆ. ಹಲವಾರು ಕುಟುಂಬಗಳನ್ನು ಸ್ಥಳಾಂತರಿಸಲಾಗಿದೆ.

ಸ್ಥಳೀಯ ಅಧಿಕಾರಿಗಳ ಪ್ರಕಾರ, ನಿರಂತರ ಮಳೆಯಿಂದಾಗಿ ಸಮೀಪದ ನಾಲಾದಲ್ಲಿ ನೀರಿನ ಮಟ್ಟವು ನಿರಂತರವಾಗಿ ಏರಿಕೆಯಾಗಿತ್ತು. ಇದರಿಂದಾಗೊ ಹಠಾತ್ ಪ್ರವಾಹವಾಗಿ ಚೆನಾಬ್ ಸೇತುವೆಯ ಬಳಿ ಧರ್ಮಕುಂಡ್ ಗ್ರಾಮವನ್ನು ಪ್ರವೇಶಿಸಿತು. ಗ್ರಾಮದ ಹಲವು ಭಾಗಗಳಲ್ಲಿ ನೀರು ಹೆಚ್ಚುತ್ತಲೇ ಇರುವುದರಿಂದ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ



ಡಜನ್‌ಗಟ್ಟಲೆ ನಿವಾಸಿಗಳನ್ನು ರಕ್ಷಣಾ ತಂಡಗಳು ಸುರಕ್ಷಿತ ಪ್ರದೇಶಗಳಿಗೆ ಕರೆದೊಯ್ದಿವೆ.

ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಅವರು ಪರಿಸ್ಥಿತಿಯ ಗಂಭೀರತೆಯನ್ನು ಒಪ್ಪಿಕೊಂಡಿದ್ದು, ಸಮಯೋಚಿತ ಮತ್ತು ದಕ್ಷ ಪ್ರತಿಕ್ರಿಯೆಗಾಗಿ ಜಿಲ್ಲಾಡಳಿತವನ್ನು ಶ್ಲಾಘಿಸಿದ್ದಾರೆ.

ರಾಂಬನ್ ಪಟ್ಟಣದ ಸುತ್ತಮುತ್ತಲಿನ ಪ್ರದೇಶಗಳು ಸೇರಿದಂತೆ ರಾಂಬನ್ ಪ್ರದೇಶದಲ್ಲಿ ರಾತ್ರಿಯಿಡೀ ಭಾರೀ ಆಲಿಕಲ್ಲು ಮಳೆ, ಅನೇಕ ಭೂಕುಸಿತಗಳು ಮತ್ತು ವೇಗದ ಗಾಳಿ ಇತ್ತು.

ರಾಷ್ಟ್ರೀಯ ಹೆದ್ದಾರಿಯನ್ನು ನಿರ್ಬಂಧಿಸಲಾಗಿದೆ ಮತ್ತು ದುರ ದೃಷ್ಟವಶಾತ್, ಮೂರು ಸಾವುನೋವುಗಳು ಮತ್ತು ಆಸ್ತಿ ನಷ್ಟವಾಗಿದೆ ಎಂದು ಸಿಂಗ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.


ಜಿಲ್ಲಾಧಿಕಾರಿ ಬಷೀರ್-ಉಲ್-ಹಕ್ ಚೌಧರಿ ಅವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ.

**ಹತ್ತು ಮನೆಗಳು ಸಂಪೂರ್ಣ ನಾಶವಾಗಿದ್ದು, 25ರಿಂದ 30 ಮನೆಗಳು ಭಾಗಶಃ ಹಾನಿಗೊಳಗಾಗಿವೆ. ವಿನಾಶದ ಹೊರತಾಗಿಯೂ, ಧರಂಕುಂಡ್ ಪೊಲೀಸ್ ಮತ್ತು ಜಿಲ್ಲಾಡಳಿತದ ತ್ವರಿತ ಕಾರ್ಯಾಚರಣೆಯಿಂದಾಗಿ ಈ ಪೀಡಿತ ನೆರೆಪೀಡಿತ ಪ್ರದೇಶದಲ್ಲಿ ಸಿಲುಕಿಕೊಂಡಿದ್ದ ಸುಮಾರು 90 ರಿಂದ 100 ಜನರನ್ನು ಸುರಕ್ಷಿತವಾಗಿ ಸ್ಥಳಾಂತರ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.**

## ಟ್ರಂಪ್ ನೀತಿ ವಿರೋಧಿಸಿ ಪ್ರತಿಭಟನೆ: ಆಕ್ರೋಶ

**ವಾಷಿಂಗ್ಟನ್:** ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ನೀತಿಗಳು, ಕ್ರಮಗಳನ್ನು ವಿರೋಧಿಸಿ ಅಮೆರಿಕದಾದ್ಯಂತ ಸಾವಿರಾರು ಜನರು ಬೀದಿಗಿಳಿದು ಪ್ರತಿಭಟನೆ ನಡೆಸಿ ಆಕ್ರೋಶ ಹೊರಹಾಕಿದ್ದಾರೆ

ದೇಶದ 50 ರಾಜ್ಯಗಳಲ್ಲಿ 50 ಪ್ರತಿಭಟನೆಗಳು ಮತ್ತು ಒಂದು ಚಳುವಳಿ ಹೆಸರಲ್ಲಿ ದೇಶಾದ್ಯಂತ ಹೋರಾಟ ನಡೆಸುವ ಮೂಲಕ ಅಮೇರಿಕಾ ಅಧ್ಯಷ್ಯ ಡೊನಾಲ್ಡ್ ಟ್ರಂಪ್ ಅವರ ನೀತಿ ಮತ್ತು ನೀರ್ಧಾರಗಳನ್ನು ತೀವ್ರವಾಗಿ ಟೀಕಿಸಿದ್ದಾರೆ. ಅಮೇರಿಕಾದಲ್ಲಿ ರಾಜಕೀಯ ಪ್ರತಿಭಟನೆಗಳು ಹೆಚ್ಚು ಸಾಮಾನ್ಯ ವಾಗುತ್ತಿವೆ. ಏಪ್ರಿಲ್ ಆರಂಭದಲ್ಲಿ ನಡೆದ ''ಹ್ಯಾಂಡ್ಸ್ ಆಫ್ ಪ್ರದರ್ಶನಗಳು ದೇಶಾದ್ಯಂತ ನಗರಗಳಲ್ಲಿ ಹತ್ತಾರು ಸಾವಿರ ಜನರನ್ನು ಆಕರ್ಷಿಸಿದ್ದವು ಇದೀಗ ಅಧ್ಯಕ್ಷರ ನೀತಿ ವಿರೋಧಿಸಿ ಹೋರಾಟ ನಡೆದಿದೆ.



ಅಮೇರಿಕಾ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅವರ ಅವಧಿಯ ಮೊದಲ ತ್ರೈಮಾಸಿಕದಲ್ಲಿ ಅವರ ಕಾರ್ಯಕ್ಷಮತೆಯನ್ನು ಶೇಕಡಾ 45ರಷ್ಟು ಮತದಾರರು ಅನುಮೋದಿಸಿದ್ದಾರೆ. ಇದೇ ವೇಳೆ ಶೇಕಡಾ 41 ಕ್ಕಿಂತ ಹೆಚ್ಚು ಜನರು ವಿರೋಧಿಸಿದ್ದಾರೆ, 1952 ಮತ್ತು 2020 ರ ನಡುವೆ ಆಯ್ಕೆಯಾದ ಎಲ್ಲಾ ಅಧ್ಯಕ್ಷರಿಗೆ ಸರಾಸರಿ ಮೊದಲ ತ್ರೈಮಾಸಿಕ ರೇಟಿಂಗ್ ಶೇಕಡಾ 60ಕ್ಕಿಂತ ಕಡಿಮೆಯಾಗಿದೆ ಎಂದು ಪ್ರತಿಭಟನಾ ಕಾರರು ಆರೋಪಿಸಿದ್ದಾರೆ.

ಪ್ರತಿಭಟನೆಗಳು ಸರ್ಕಾರದ ದಕ್ಷತೆ ಇಲಾಖೆ, ಸರ್ಕಾರಿ ಉದ್ಯೋಗಗಳು ಮತ್ತು ಇತರ ಖರ್ಚುಗಳನ್ನು ಕಡಿತಗೊಳಿಸುವ ಡೊನಾಲ್ಡ್ ಟ್ರಂಪ್ ಅವರ ಉಪಕ್ರಮ ಮತ್ತು ಎಲ್ ಸಾಲ್ವಡಾರ್‌ನ ಪ್ರಜೆಯಾದ ಅಬ್ರೆಗೊ ಗಾರ್ಸಿಯಾ ಅವರನ್ನು ಹಿಂದಿರುಗಿಸಲು ಆಡಳಿತದ ಇಷ್ಟವಿಲ್ಲದಿರುವಿಕೆ ಸೇರಿದಂತೆ ಮತ್ತಿತರ ವಿಷಯ ಮುಂದಿಟ್ಟುಕೊಂಡು ಹೋರಾಟ ನಡೆಸಿದರು.

ಅಬ್ರೆಗೊ ಗಾರ್ಸಿಯಾ ಅವರನ್ನು ಗಡೀಪಾರು ಮಾಡುವುದನ್ನು ಟೀಕಿಸಲು ಶ್ವೇತಭವನದಲ್ಲಿ ನಡೆದ ಪ್ರತಿಭಟನೆಯಲ್ಲಿ ಸೇರಿಕೊಂಡಿದ್ದಾಗಿ ಗಿಹಾದ್ ಎಲ್ಜೆಂಡಿ ತಿಳಿಸಿದ್ದು ಡೊನಾಲ್ಡ್ ಟ್ರಂಪ್ ಅವರು ಎಲ್ ಸಾಲ್ವಡಾರ್ ಅವರನ್ನು ಮರಳಿ ಕರೆತರಲು ಸುಲಭವಾಗಿ ಒತ್ತಡ ಹೇರಬಹುದು ಎಂದು ಹೇಳಿದ್ದಾರೆ.

## ಮಾನವೀಯ ವಲಯದ ಮೇಲೆ ಇಸ್ರೇಲ್ ಬಾಂಬ್ ದಾಳಿ, ಮಕ್ಕಳು ಸೇರಿದಂತೆ ಕನಿಷ್ಠ 90 ಮಂದಿ ಸಾವು

**ದೀರ್ ಅಲ್-ಬಾಲಾಹ್:** ಕಳೆದ 48 ಗಂಟೆಗಳಲ್ಲಿ ಗಾಜಾ ಮೇಲೆ ಇಸ್ರೇಲ್ ನಡೆಸಿರುವ ದಾಳಿಯಲ್ಲಿ ಮಕ್ಕಳು ಸೇರಿದಂತೆ 90 ಕ್ಕೂ ಹೆಚ್ಚು ಮಂದಿ ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ ಎಂದು ಗಾಜಾದ ಆರೋಗ್ಯ ಸಚಿವಾಲಯ ಶನಿವಾರ ತಿಳಿಸಿದೆ. ಮಾನವೀಯ ವಲಯ ಎಂದು ಗುರುತಿಸಿದ ಸ್ಥಳದಲ್ಲಿ ಆಶ್ರಯ ಪಡೆದಿದ್ದ ಮಕ್ಕಳು, ಮಹಿಳೆಯರು ಸೇರಿದಂತೆ 15 ಮಂದಿ ಒಂದೇ ರಾತ್ರಿ ಮೃತಪಟ್ಟಿದ್ದಾರೆ ಎಂದು ಆಸ್ಪತ್ರೆ ಸಿಬ್ಬಂದಿ ತಿಳಿಸಿದ್ದಾರೆ.

ದಕ್ಷಿಣ ನಗರ ಖಾನ್ ಯೂನಿಸ್‌ನಲ್ಲಿ ಕನಿಷ್ಠ 11 ಜನರು ಸಾವನ್ನಪ್ಪಿದ್ದಾರೆ, ಸ್ಥಳಾಂತರಗೊಂಡ ಲಕ್ಷಾಂತರ ಜನರು ಮವಾಸಿ ಪ್ರದೇಶದ ಟೆಂಟ್‌ನಲ್ಲಿ ವಾಸವಿದ್ದು, ಇಸ್ರೇಲ್ ಇದನ್ನು ಮಾನವೀಯ ವಲಯವೆಂದು ಗುರುತಿಸಿದೆ. ರಫಾ ನಗರದಲ್ಲಿ ನಡೆದ ಪ್ರತ್ಯೇಕ ದಾಳಿಗಳಲ್ಲಿ ತಾಯಿ ಮತ್ತು ಮಗಳು ಸೇರಿದಂತೆ ಇತರ ನಾಲ್ವರು ಜನರು ಸಾವನ್ನಪ್ಪಿದ್ದಾರೆಂದು ಯುರೋಪಿಯನ್ ಆಸ್ಪತ್ರೆ ತಿಳಿಸಿದೆ.

ಹಮಾಸ್ ವಿರುದ್ಧ ಯುದ್ಧ ಆರಂಭಿರುವ ಇಸ್ರೇಲ್, ಗಾಜಾ ಪಟ್ಟಿಯನ್ನು ವಶಕ್ಕೆ ಪಡೆಯಬೇಕೆಂದು ಹಠಕ್ಕೆ



ಬಿದ್ದಿದೆ. ಇದರಂತೆ ಗಾಜಾ ಮೇಲೆ ತನ್ನ ದಾಳಿಯನ್ನು ತೀವ್ರವಗೊಳಿಸಿದೆ. ಈ ನಡುವೆ ಇಸ್ರೇಲ್‌ನ ಈ ಆಸೆಗೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಬೆನ್ನೆಲುಬಾಗಿ ನಿಂತಿದ್ದು, ಮಧ್ಯಪ್ರಾಚ್ಯ ನರಕವಾಗಿ ಬದಲಾಗಿದೆ. ದಾಳಿ ಪರಿಣಾಮ ಎಲ್ಲಿ ನೋಡಿದರೂ ಕುಸಿದು ಬಿದ್ದಿರುವ ಕಟ್ಟಡ ಹಾಗೂ ಕಟ್ಟಡಗಳ ಅವಶೇಷದ ಕೆಳಗೆ ಶವಗಳ ರಾಶಿಗಳು ಕಂಡು ಬರುತ್ತಿದೆ. ಇಸ್ರೇಲ್ ಯುದ್ಧ ನಿಲ್ಲಿಸಬೇಕೆಂದು ವಿಶ್ವಸಂಸ್ಥೆ ಒತ್ತಡ ಹೇರುತ್ತಲೇ ಬಂದಿದ್ದರೂ, ಯುದ್ಧದಿಂದ ಹಿಂದೆ ಸರಿಯುತ್ತಿಲ್ಲ. ಬದಲಿಗೆ ಯುದ್ಧವನ್ನು ಮತ್ತಷ್ಟು ತೀವ್ರಗೊಳಿಸಿದೆ. ಗಾಜಾ ಪಟ್ಟಿಯಲ್ಲಿ ಸ್ಮಶಾನದಂತೆ ಬದಲಾಗಿದೆ.

## ದಲಿತ ಯುವಕನ ಮೇಲೆ ಹಲ್ಲೆ, ಮೂತ್ರ ವಿಸರ್ಜಿಸಿ, ಲೈಂಗಿಕ ದೌರ್ಜನ್ಯ

**ಜೈಪುರ:** ರಾಜಸ್ಥಾನದ ಸಿಕಾರ್ ಜಿಲ್ಲೆಯ 19 ವರ್ಷದ ದಲಿತ ಯುವಕನೊಬ್ಬ, ಇಬ್ಬರು ವ್ಯಕ್ತಿಗಳು ತನ್ನ ಮೇಲೆ ಹಲ್ಲೆ ನಡೆಸಿ, ಮೂತ್ರ ವಿಸರ್ಜಿಸಿ, ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿರುವುದಾಗಿ ಪೊಲೀಸರು ಭಾನುವಾರ ತಿಳಿಸಿದ್ದಾರೆ.


ಏಪ್ರಿಲ್ 8 ರಂದು ಸಿಕಾರ್‌ನ ಫತೇಪುರ್ ಪ್ರದೇಶದಲ್ಲಿ ಈ ಘಟನೆ ನಡೆದಿದೆ ಎಂದು ಅವರು ಹೇಳಿದ್ದಾರೆ. ಆದರೆ ಯುವಕನ ಕುಟುಂಬ ದೂರು ನೀಡಿದ ನಂತರ ಏಪ್ರಿಲ್ 16 ರಂದು ಪೊಲೀಸರು ಎಫ್ಐಆರ್ ದಾಖಲಿಸಿದ್ದಾರೆ.

ದೂರಿನ ಪ್ರಕಾರ, ಏಪ್ರಿಲ್ 8 ರಂದು ತನ್ನ ಗ್ರಾಮದಲ್ಲಿ ಮದುವೆ ಮೆರವಣಿಗೆ ವೀಕ್ಷಿಸಲು ಯುವಕ ಹೊರಬಂದಾಗ, ಇಬ್ಬರು ಆರೋಪಿಗಳು ಕೆಲಸದ ನೆಪದಲ್ಲಿ ಆತನನ್ನು ಬಸ್ ನಿಲ್ದಾಣಕ್ಕೆ ಕರೆದಿದ್ದಾರೆ.

ನಂತರ ಇಬ್ಬರೂ ಯುವಕನನ್ನು ನಿರ್ಜನ ಸ್ಥಳಕ್ಕೆ ಕರೆದೊಯ್ದು ಆತನ ಖಾಸಗಿ ಭಾಗಗಳು ಸೇರಿದಂತೆ ಎಲ್ಲಾ ಭಾಗಗಳಿಗೆ ಹೊಡೆದಿದ್ದಾರೆ. ಬಲವಂತವಾಗಿ ಬಟ್ಟೆಗಳನ್ನು ಬಿಚ್ಚಿಸಿ ಆತನೊಂದಿಗೆ ಅಸ್ವಾಭಾವಿಕ ಲೈಂಗಿಕ ಕ್ರಿಯೆ ನಡೆಸಿದರು ಎಂದು ದೂರಿನಲ್ಲಿ ಆರೋಪಿಸಲಾಗಿದೆ.

**ಪಾಲನೆಗೆ ಕಾನೂನು ತೊಡಕು**

**ಈ ವಿಷಯದಲ್ಲಿ ನಾವು ಎಫ್ಐಆರ್ ದಾಖಲಿಸಿದ್ದೇವೆ. ಯುವಕನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗಿದೆ ಮತ್ತು ಅವರ ಹೇಳಿಕೆಯನ್ನು ದಾಖಲಿಸಲಾಗಿದೆ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಉಪ ವರಿಷ್ಠಾಧಿಕಾರಿ(ಡಿಎಸ್‌ಪಿ) ಅರವಿಂದ್ ಕುಮಾರ್ ಹೇಳಿದ್ದಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ(ದೌರ್ಜನ್ಯ ತಡೆ) ಕಾಯ್ದೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.**



ಅವರು ಕುಡಿದಿದ್ದರು, ಅವರು ನನಗೆ ಬಾಟಲಿಯಿಂದ ಹೊಡೆದರು, ನನ್ನ ಮೇಲೆ ಮೂತ್ರ ವಿಸರ್ಜಿಸಿದರು ಮತ್ತು ಜಾತಿ ನಿಂದನೆ ಮಾಡಿದರು ಎಂದು ಸಂತ್ರಸ್ತ ಯುವಕ ಆರೋಪಿಸಿದ್ದಾರೆ. ಆರೋಪಿಗಳು ತಮ್ಮ ಕೃತ್ಯವನ್ನು ವಿಡಿಯೋ ಮಾಡಿದ್ದಾರೆ ಮತ್ತು ಘಟನೆಯ ಬಗ್ಗೆ ಯಾರಿಗಾದರೂ ಹೇಳಿದರೆ ಅದನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳುವುದಾಗಿ ಬೆದರಿಸಿದ್ದಾರೆ ಎಂದು ಯುವಕ ತಿಳಿಸಿದ್ದಾರೆ.

ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಮತ್ತು ವಿರೋಧ ಪಕ್ಷದ ನಾಯಕ ಟಿಕಾ ರಾಮ್ ಜುಲ್ಲಿ ಘಟನೆಯನ್ನು ಖಂಡಿಸಿದ್ದು, ಈ ಘಟನೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸರಿ ಇಲ್ಲ ಎಂಬುದನ್ನು ಬಹಿರಂಗಪಡಿಸುತ್ತದೆ ಎಂದು ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

## ಪತ್ನಿ ತಲೆ ಕತ್ತರಿಸಿ ಸೈಕಲ್‌ನಲ್ಲಿ ಪೊಲೀಸ್ ಠಾಣೆಗೆ ತಂದ ಭೂಪ

**ಗುವಾಹತಿ:** ಕ್ಷುಲ್ಲಕ ಕಾರಣಕ್ಕೆ ಪಾಪಿ ಪತಿಯೋರ್ವ ತನ್ನ ಪತ್ನಿಯ ತಲೆಯನ್ನೇ ಕತ್ತರಿಸಿ ಅದನ್ನು ಸೈಕಲ್ ನಲ್ಲಿ ಪೊಲೀಸ್ ಠಾಣೆಗೆ ತಂದಿರುವ ಭಯಾನಕ ಘಟನೆ ಅಸ್ಸಾಂನಲ್ಲಿ ವರದಿಯಾಗಿದೆ.

ಅಸ್ಸಾಂನ ಚಿರಾಂಗ್ ಜಿಲ್ಲೆಯಲ್ಲಿ ನಿನ್ನೆ ರಾತ್ರಿ ಈ ಘಟನೆ ನಡೆದಿದ್ದು, ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ 60 ವರ್ಷದ ವ್ಯಕ್ತಿಯೊಬ್ಬ ತನ್ನ ಪತ್ನಿಯ ಶಿರಚ್ಛೇದ ಮಾಡಿ, ಆಕೆಯ ಕತ್ತರಿಸಿದ ತಲೆಯನ್ನು ಹೊತ್ತು ಸೈಕಲ್ ಬಂದು ಪೊಲೀಸರ ಮುಂದೆ ಶರಣಾಗಿದ್ದಾನೆ. ಬಿತೀಶ್ ಹಜೋಂಗ್ ಎಂಬ ವ್ಯಕ್ತಿ ತನ್ನ ಪತ್ನಿಯನ್ನು ಕೊಂದು ಬಳಿಕ ಆಕೆಯ ಶಿರಚ್ಛೇದ ಮಾಡಿದ್ದಾನೆ. ಬಳಿಕ ಆಕೆಯ ತಲೆಯನ್ನು ತನ್ನ ಸೈಕಲ್ ನಲ್ಲಿ ಹೇರಿಕೊಂಡು ಬಲ್ಲಮ್



ಗುರಿ ಹೊರಠಾಣೆ ತಲುಪಿ ಪೊಲೀಸರ ಮುಂದೆ ಶರಣಾಗಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪೊಲೀಸ್ ಠಾಣೆಯ ಸಿಬ್ಬಂದಿ ಆರೋಪಿ ಬಿತೀಶ್ ಹಜೋಂಗ್ ತನ್ನ ಕೈಯಲ್ಲಿ ಪತ್ನಿ ತಲೆಯನ್ನು ತಂದಿರುವ ವಿಡಿಯೋವನ್ನು ಮೊಬೈಲ್ ನಲ್ಲಿ ಚಿತ್ರಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಪೊಲೀಸರು, ಚಿರಾಂಗ್ ಜಿಲ್ಲೆಯ ಉತ್ತರ ಬಲ್ಲಮ್‌ಗುರಿಯ ನಿವಾಸಿ ಆರೋಪಿ ಬಿತೀಶ್ ಹಜೋಂಗ್ ದಿನಗೂಲಿ ಕಾರ್ಮಿಕನಾಗಿದ್ದು, ಪ್ರತಿನಿತ್ಯ ಮನೆಯಲ್ಲಿ ಪತ್ನಿಯೊಂದಿಗೆ ಜಗಳ ಮಾಡುತ್ತಿದ್ದ. ಈಗ್ಗೆ ನಿನ್ನೆ ಸಂಜೆ ಕೂಡ ಪತಿ ಪತ್ನಿಯರ ನಡುವೆ ಗಲಾಟೆ ಏರ್ಪಟ್ಟಿದ್ದು, ಗಲಾಟೆ ತಾರಕಕ್ಕೇರಿ ಬಿತೀಶ್ ಹಜೋಂಗ್ ಹರಿತವಾದ ಆಯುಧದಿಂದ ಪತ್ನಿ ಬಜಂತಿ ಮೇಲೆ ಹಲ್ಲೆ ಮಾಡಿದ್ದಾನೆ. ಆಕೆ ನೆಲಕ್ಕೆ ಕುಸಿಯುತ್ತಲೇ ಆಕೆಯ ಕುತ್ತಿಗೆ ಕತ್ತರಿಸಿ ಹಾಕಿದ್ದಾನೆ. ಮನೆಯಲ್ಲಿ ಕೂಗಾಟ ಕೇಳಿ ಓಡಿ ಬಂದ ನೆರೆಮನೆಯವರು ರಕ್ತದ ಮಡುವಿನಲ್ಲಿದ್ದ ಬಜಂತಿಯನ್ನು ನೋಡಿ ಆಘಾತಕೊಂಡಿದ್ದಾರೆ. ಬಳಿಕ ಬಿತೀಶ್ ಹಜೋಂಗ್ ಪತ್ನಿ ತಲೆ ಎತ್ತಿಕೊಂಡು ಸೈಕಲ್ ನಲ್ಲಿ ಹೋದ ಎಂದು ಹೇಳಿದ್ದಾರೆ.

## ಧಾರ್ಮಿಕ, ಅಭಿವ್ಯಕ್ತಿ ಸ್ವಾತಂತ್ರ್ಯದ ಹೊರತು ಶಾಂತಿ ಅಸಾಧ್ಯ

**ವ್ಯಾಟಿಕನ್ ಸಿಟಿ:** ಧಾರ್ಮಿಕ ಸ್ವಾತಂತ್ರ್ಯ ಹಾಗೂ ಇತರರ ಅಭಿಪ್ರಾಯಗಳನ್ನು ಗೌರವಿಸದ ಹೊರತು ಶಾಂತಿ ಸಾಧ್ಯವಿಲ್ಲ ಎಂದು ಪೋಪ್ ಫ್ರಾನ್ಸಿಸ್ ಈಸ್ಟರ್ ಭಾನುವಾರದ ಸಂದೇಶದಲ್ಲಿ ಹೇಳಿದ್ದಾರೆ. ಸೈಂಟ್ ಪೀಟರ್ ಬೆಸಿಲಿಕದಲ್ಲಿ ಗಾಲಿ ಕುರ್ಚಿಯಲ್ಲಿಯೇ ಕುಳಿತು 88 ವರ್ಷದ ಪೋಪ್ ಭಕ್ತರಿಗೆ ದರ್ಶನ ನೀಡಿದರು.

ವಿಶ್ವದಲ್ಲಿ ಹೆಚ್ಚಾಗುತ್ತಿರುವ ಯಹೂದಿ ವಿರೋಧಿ ವಾತಾವರಣ ಆತಂಕಕಾರಿ ಎಂದು ಹೇಳಿರುವ ಪೋಪ್, ಗಾಜಾದ ಯುದ್ಧ ಪರಿಸ್ಥಿತಿಯನ್ನು ಖಂಡಿಸಿದ್ದಾರೆ. ಅಲ್ಲದೆ ಮತ್ತೊಮ್ಮೆ ಕದನ ವಿರಾಮಕ್ಕೆ ಕರೆ ನೀಡಿದ್ದಾರೆ.

ಗಾಜಾದ ಜನರು ಮತ್ತು ಅದರ ಕ್ರಿಶ್ಚಿಯನ್ ಸಮುದಾಯದ ಬಗ್ಗೆ ನಾನು ಚಿಂತಾಕ್ರಾಂತನಾಗಿದ್ದೇನೆ. ಭೀಕರ ಸಂಘರ್ಷವು ಸಾವು ಮತ್ತು ವಿನಾಶಕ್ಕೆ ಕಾರಣವಾಗುತ್ತಿದೆ. ಶೋಚನೀಯ ಮಾನವೀಯ ಪರಿಸ್ಥಿತಿಯನ್ನು ಸೃಷ್ಟಿಸುತ್ತಿದೆ ಎಂದು ಅವರು ಭಾಷಣದಲ್ಲಿ ಹೇಳಿದ್ದಾರೆ. ಗಾಲಿ ಕುರ್ಚಿಯಲ್ಲಿ ಕುಳಿತಿದ್ದ ಅವರ ಪರವಾಗಿ ಇನ್ನೊಬ್ಬರು ಭಾಷಣ ಓದಿದರು.

ಅವರ ಈಸ್ಟರ್ ಭಾಷಣದ ಬಗ್ಗೆ ಯಾವುದೇ ಪೂರ್ವ ಮಾಹಿತಿ ಇರಲಿಲ್ಲ. ಭಾಷಣ ಕೇಳಲು ಸಂತ ಪೀಟರ್ಸ್ ಚೌಕದಲ್ಲಿ ಸುಮಾರು 35 ಸಾವಿರ ಮಂದಿ ಸೇರಿದ್ದರು.

### ಶೇಖ್ ಹಸೀನಾರನ್ನು ವಾಪಾಸ್ ಕರೆಸಿಕೊಳ್ಳಲು ಬಾಂಗ್ಲಾದೇಶದ ಹಂಗಾಮಿ ಸರ್ಕಾರ ಶತಾಯಗತಾಯ ಪ್ರಯತ್ನ

# ಶೇಖ್ ಹಸೀನಾ ವಿರುದ್ಧ ರೆಡ್ ಕಾರ್ನರ್ ನೋಟೀಸ್ ನೀಡುವಂತೆ ಬಾಗ್ಲಾ ಮನವಿ

**ನವದೆಹಲಿ:** ಕಳೆದ ವರ್ಷ ಬಾಂಗ್ಲಾದೇಶದಲ್ಲಿ ಎದ್ದ ದಂಗೆಯಿಂದ ತಪ್ಪಿಸಿಕೊಂಡು ಭಾರತಕ್ಕೆ ಬಂದಿದ್ದ ಅಲ್ಲಿಯ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರಿಗೆ ರೆಡ್ ಕಾರ್ನರ್ ನೋಟೀಸ್ ನೀಡುವಂತೆ ಇಂಟರ್ ಪೋಲ್‌ಗೆ ಮನವಿ ಮಾಡಲಾಗಿದೆ.

ಬಾಂಗ್ಲಾದೇಶ ಪೊಲೀಸರ ರಾಷ್ಟ್ರೀಯ ಕೇಂದ್ರ ಬ್ಯೂರೋ ಇಂಟರ್‌ಪೋಲ್‌ಗೆ ಶೇಖ್ ಹಸೀನಾ ಸೇರಿದಂತೆ 12 ವ್ಯಕ್ತಿಗಳ ವಿರುದ್ಧ ರೆಡ್ ಕಾರ್ನರ್ ನೋಟೀಸ್ ಹೊರಡಿಸುವಂತೆ ಕೋರಿಕೆಯನ್ನು ಸಲ್ಲಿಸಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಫೆ. 6 ರಂದು ಶೇಖ್ ಹಸೀನಾ ಭಾಷಣದಿಂದ ಆಕ್ರೋಶಗೊಂಡ ಉದ್ರಿಕ್ತರ ಗುಂಪೊಂದು ಢಾಕಾದಲ್ಲಿರುವ ಅವರ ತಂದೆಯ ನಿವಾಸವನ್ನು ಧ್ವಂಸಗೊಳಿಸಿ ಬೆಂಕಿ ಹಚ್ಚಿದೆ. ಶೇಖ್ ಹಸೀನಾ ತಂದೆ, ಬಾಂಗ್ಲಾದೇಶ ಸಂಸ್ಥಾಪಕ ಶೇಖ್ ಮುಜಿಬುರ್ ರೆಹಮಾನ್ ಅವರ ಸ್ಮಾರಕ ಮತ್ತು ಅವರ ನಿವಾಸವನ್ನು ಧ್ವಂಸಗೊಳಿಸಿದ್ದರು. ಮನೆಗೆ ಬೆಂಕಿ ಹಚ್ಚಿ, ಜೆಸಿಬಿ, ಮೂಲಕ ಮನೆ ನಾಶ ಮಾಡಲು ಯತ್ನಿಸಿದ್ದರು.

ಶೇಖ್ ಹಸೀನಾರನ್ನು ವಾಪಾಸ್ ಕರೆಸಿಕೊಳ್ಳಲು ಬಾಂಗ್ಲಾದೇಶದ ಹಂಗಾಮಿ ಸರ್ಕಾರ ಶತಾಯಗತಾಯ ಪ್ರಯತ್ನ ನಡೆಸುತ್ತಿದೆ. ಕೆಲವುದಿನಗಳ ಹಿಂದೆಯಷ್ಟೇ ಢಾಕಾ ನ್ಯಾಯಾಲಯವು ಆಕೆಯ ಕುಟುಂಬ ಸದಸ್ಯರ ಬ್ಯಾಂಕ್ ಖಾತೆಗಳು ಸೇರಿದಂತೆ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಆದೇಶ ನೀಡಿತ್ತು. ಗಡಿಪಾರಾಗಿ ಭಾರತದಲ್ಲಿರುವ ಹಸೀನಾ ಅವರ

**ಪಾಲನೆಗೆ ಕಾನೂನು ತೊಡಕು**

**77 ವರ್ಷದ ಹಸೀನಾ, ಕಳೆದ ವರ್ಷ ಆಗಸ್ಟ್ ನಲ್ಲಿ ಭುಗಿಲೆದ್ದ ಗಲಭೆಗಳ ನಂತರ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿದ್ದರು. ನಂತರ ಅವರು ಭಾರತಕ್ಕೆ ಪಲಾಯನ ಮಾಡಿದ್ದರು. ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಶೇಖ್ ಹಸೀನಾ ಅವರನ್ನು ಮರಳಿ ಕರೆತರಲು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ. ಆಕೆಯ ಪಾಸ್‌ಪೋರ್ಟ್ ಕೂಡ ರದ್ದುಗೊಂಡಿದೆ. ಅವರು ಭಾರತ ಸರ್ಕಾರಕ್ಕೂ ಪತ್ರ ಬರೆದರು. ಭಾರತ ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ.**




ಧನ್ಮೊಂಡಿ ನಿವಾಸ ಸುದಾಸಧನ್ ಮತ್ತು ಅವರ ಕುಟುಂಬ ಸದಸ್ಯರು ಹೊಂದಿರುವ ಇತರ ಕೆಲವು ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಕೋರ್ಟ್ ಆದೇಶ ನೀಡಿತ್ತು.

ನೊಬೆಲ್ ಪ್ರಶಸ್ತಿ ವಿಜೇತರಾದ ಮೊಹಮ್ಮದ್ ಯೂನುಸ್ ನೇತೃತ್ವದಲ್ಲಿ ಬಾಂಗ್ಲಾದಲ್ಲಿ ಹಂಗಾಮಿ ಸರ್ಕಾರ ಅಸ್ತಿತ್ವದಲ್ಲಿದೆ. ಈ ಸರ್ಕಾರವನ್ನು ಬೀಳಿಸಲು ಶೇಖ್ ಹಸೀನಾ ಪಿತೂರಿ ನಡೆಸುತ್ತಿದ್ದಾರೆ ಎನ್ನುವ ಆರೋಪವೂ ಬಾಂಗ್ಲಾದಲ್ಲಿ ಕೇಳಿಬರುತ್ತಿದೆ. ಇದರ ಬೆನ್ನಲ್ಲೇ ಈಗ ಅವರಿಗೆ ರೆಡ್ ಕಾರ್ನರ್ ನೋಟೀಸ್ ನೀಡುವಂತೆ ಇಂಟರ್‌ಪೋಲ್‌ಗೆ ಮನವಿ ಹೋಗಿದೆ.

ಬಾಂಗ್ಲಾದೇಶದ ಕೋರ್ಟ್‌ಗಳು, ತನಿಖಾ ಸಂಸ್ಥೆಗಳು ಮೊದಲಾದವುಗಳಿಂದ ಮನವಿಗಳು ಬಂದಾಗ ನ್ಯಾಷನಲ್ ಸೆಂಟ್ರಲ್ ಬ್ಯೂರೋ ಇಂಟರ್ ಪೋಲ್‌ಗೆ ಈ ರೀತಿಯ ಮನವಿ ಮಾಡುತ್ತದೆ ಎನ್ನಲಾಗಿದೆ. ವಿವಿಧ ಪ್ರಕರಣಗಳಲ್ಲಿ ನಡೆಯುತ್ತಿರುವ ತನಿಖೆ ವೇಳೆ ಕೇಳಿ ಬಂದ ಆರೋಪಗಳ ಸಂಬಂಧ ಈ ಮನವಿಗಳನ್ನು ಮಾಡಲಾಗಿದೆ ಎಂದು ಅಲ್ಲಿನ ಪೊಲೀಸರು ಸ್ಪಷ್ಟಪಡಿಸಿದ್ದಾರೆ.

**ಇಂಟರ್ ಪೋಲ್ ಸಹಾಯ**

**ಇದೀಗ ಹಸೀನಾರನ್ನು ವಾಪಾಸ್ ಕರೆಸಿಕೊಳ್ಳುವ ಕೊನೆಯ ಪ್ರಯತ್ನವಾಗಿ ಬಾಂಗ್ಲಾದೇಶ ಇಂಟರ್ ಪೋಲ್ ಮೊರೆ ಹೋಗಿದೆ. ಈ ಬಗ್ಗೆ ಸಹಾಯಕ ಇನ್ಸ್‌ಪೆಕ್ಟರ್ ಜನರಲ್ ಎನಾಮುಲ್ ಹಕ್ ಸಾಗೋರ್ ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ್ದು, ಹಸೀನಾ ವಿರುದ್ಧ ರೆಡ್ ಕಾರ್ನರ್ ನೊಟೀಸ್ ಜಾರಿಗೊಳಿಸುವಂತೆ ಇಂಟರ್ ಪೋಲ್‌ಗೆ ಮನವಿ ಮಾಡಲಾಗಿದೆ. ವಿದೇಶಗಳಿಗೆ ಪರಾರಿಯಾಗಿರುವವರನ್ನು ಪತ್ತೆ ಹಚ್ಚಲು ಇಂಟರ್‌ಪೋಲ್ ಸಹಾಯ ಮಾಡುತ್ತದೆ ಎಂದಿದ್ದಾರೆ.**

**ಭಾರತ ವಿರೋಧಿ ನಿಲುವು**

**ದೇಶ ಭ್ರಷ್ಟರಾದ ಶೇಖ್ ಹಸೀನಾ ಹಾಗೂ ಇತರರನ್ನು ಬಂಧಿಸಲು ಇಂಟರ್‌ಪೋಲ್ ನೆರವು ಪಡೆಯುವಂತೆ ಕಳೆದ ವರ್ಷದ ನವೆಂಬರ್ ತಿಂಗಳಲ್ಲೇ ಅಂತಾರಾಷ್ಟ್ರೀಯ ಅಪರಾಧ ನ್ಯಾಯಮಂಡಳಿಯ ಮುಖ್ಯ ಪ್ರಾಸಿಕ್ಯೂಟರ್ ಕಚೇರಿಯು ಬಾಂಗ್ಲಾದ ಪೊಲೀಸ್‌ಗೆ ತಿಳಿಸಿತ್ತು. ಬಾಂಗ್ಲಾದೇಶದಲ್ಲಿ ಹಲವು ವರ್ಷಗಳಿಂದ ಪ್ರಧಾನಿಯಾಗಿದ್ದಶೇಖ್ ಹಸೀನಾ 2024ರಲ್ಲಿ ಬಾಂಗ್ಲಾದೇಶದಲ್ಲಿ ಬೃಹತ್ ವಿದ್ಯಾರ್ಥಿ ಪ್ರತಿಭಟನೆ ಬೆನ್ನಲ್ಲೇ ಭಾರತಕ್ಕೆ ತಪ್ಪಿಸಿಕೊಂಡು ಬಂದಿದ್ದರು. ಹಸೀನಾ ಅವರು ಭಾರತದ ಜೊತೆ ಸ್ನೇಹ ಸಂಬಂಧ ಹೊಂದಿದ್ದರು. ಅವರ ನಿರ್ಗಮನದ ಬಳಿಕ ಅಸ್ತಿತ್ವಕ್ಕೆ ಬಂದಿರುವ ಸರ್ಕಾರವು ಸ್ಪಷ್ಟವಾಗಿ ಭಾರತ ವಿರೋಧಿ ನಿಲುವನ್ನು ಹೊಂದಿದೆ.**

## ಮಿನಿ ನ್ಯೂಸ್

### ಒಂದು ದೇಗುಲ, ಒಂದು ಬಾವಿ, ಒಂದು ಸ್ಮಶಾನ ತತ್ವ ಪಾಲಿಸಿ: ಹಿಂದೂಗಳಿಗೆ ಭಾಗವತ್ ಕರೆ

**ಉತ್ತರ ಪ್ರದೇಶ:** ಜಾತಿಗಳ ನಡುವಿನ ಭೇದವನ್ನು ನಿರ್ಮೂಲನೆ ಮಾಡಬೇಕು ಎಂದು ಹೇಳಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ ಭಾಗವತ್, ಒಂದು ದೇವಸ್ಥಾನ, ಒಂದು ಬಾವಿ ಹಾಗೂ ಒಂದು ಸ್ಮಶಾನ ಎಂಬ ತತ್ವ ಅನುಸರಿಸುವ ಮೂಲಕ ಸಾಮಾಜಿಕ ಸಾಮರಸ್ಯಕ್ಕೆ ಹಿಂದೂಗಳು ಶ್ರಮಿಸಬೇಕು ಎಂದು ಕರೆ ನೀಡಿದ್ದಾರೆ. ಅಲೀಗಢಕ್ಕೆ 5 ದಿನಗಳ ಪ್ರವಾಸ ಕೈಗೊಂಡಿರುವ ಅವರು, ಎಚ್.ಬಿ ಇಂಟರ್ ಕಾಲೇಜು ಹಾಗೂ ಪಂಚನ್ ನಗರಿ ಪಾರ್ಕ್‌ನಲ್ಲಿ ಸಂಘಟನೆಯ ಎರಡು ಶಾಖೆಗಳ ಸ್ವಯಂ ಸೇವಕರನ್ನು ಉದ್ದೇಶಿಸಿ ಮಾತನಾಡಿದರು. ಶಾಂತಿ ಸ್ಥಾಪನೆಗೆ ಶ್ರಮಿಸುವ ಜಾಗತಿಕ ಜವಾಬ್ದಾರಿ ಭಾರತದ ಮೇಲಿದೆ. ಈ ಮಹತ್ವದ ಹೊಣೆಗಾರಿಕೆ ಪೂರೈಸಲು ಸಾಮಾಜಿಕ ಒಗ್ಗಟ್ಟು ಸಾಧಿಸುವುದು ಭಾರತದ ಪಾಲಿಗೆ ಬಹಳ ಮುಖ್ಯ ಎಂದು ಭಾಗವತ್ ಹೇಳಿದ್ದಾರೆ ಎಂದು ಆರ್‌ಎಸ್‌ಎಸ್ ಮೂಲಗಳು ತಿಳಿಸಿವೆ. ಸಂಸ್ಕಾರ ಹಿಂದೂ ಸಮಾಜದ ತಳಪಾಯ. ಹೀಗಾಗಿ ಪಾರಂಪರಿಕ, ಸಾಂಸ್ಕೃತಿಕ ಮೌಲ್ಯಗಳು ಹಾಗೂ ನೈತಿಕ ತತ್ವಗಳ ಆಧಾರದ ಮೇಲೆ ಸಮಾಜವನ್ನು ನಿರ್ಮಿಸಲು ಹಿಂದೂಗಳು ಶ್ರಮಿಸಬೇಕು' ಎಂದು ಹೇಳಿದ್ದಾಗಿ ಮೂಲಗಳು ಹೇಳಿವೆ.

### ಮುರ್ಶಿದಾಬಾದ್ ಹಿಂಸಾಚಾರ ನ್ಯಾಯಾಂಗ ತನಿಖೆಗೆ ಸಿಪಿಐ(ಎಂ) ಆಗ್ರಹ

**ಕೋಲ್ಕತ್ತ:** ಪಶ್ಚಿಮ ಬಂಗಾಳದ ಮುರ್ಶಿದಾಬಾದ್ ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ಹಿಂಸಾಚಾರದ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕೆಂದು ಸಿಪಿಐ(ಎಂ) ಆಗ್ರಹಿಸಿದೆ. 2026ರ ವಿಧಾನಸಭೆ ಚುನಾವಣೆಗೂ ಮುನ್ನ ರಾಜಕೀಯ ಲಾಭಕ್ಕಾಗಿ ಹಿಂಸಾಚಾರವನ್ನು ನಡೆಸಲು ಆಡಳಿತಾರೂಢ ಟಿಎಂಸಿ ಮತ್ತು ವಿರೋಧ ಪಕ್ಷ ಬಿಜೆಪಿ ಒಪ್ಪಂದ ಮಾಡಿಕೊಂಡಿವೆ ಎಂದು ಆರೋಪಿಸಿದೆ. ಕೋಲ್ಕತ್ತದ ಬ್ರಿಗೇಡ್ ಪರೇಡ್ ಮೈದಾನದಲ್ಲಿ ನಡೆದ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಪಕ್ಷದ ರಾಜ್ಯ ಕಾರ್ಯದರ್ಶಿ ಮೊಹಮ್ಮದ್ ಸಲೀಂ, ನಿರುದ್ಯೋಗ. ಬೆಲೆ ಏರಿಕೆ ಮತ್ತು ಭ್ರಷ್ಟಾಚಾರದಂತಹ ಸಮಸ್ಯೆಗಳಿಂದ ಜನರ ಗಮನವನ್ನು ಬೇರೆಡೆ ಸೆಳೆಯಲು 2 ಪಕ್ಷಗಳು ಸ್ಪರ್ಧಾತ್ಮಕ ಕೋಮುವಾದದಲ್ಲಿ ತೊಡಗಿವೆ' ಎಂದು ವಾಗ್ದಾಳಿ ನಡೆಸಿದ್ದಾರೆ. ಸತ್ಯವನ್ನು ಹೊರ ತರಲು ಮುರ್ಶಿದಾಬಾದ್ ಹಿಂಸಾಚಾರ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕೆಂದು ನಾವು ಒತ್ತಾಯಿಸುತ್ತೇವೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಜನರಿಗೆ ದ್ರೋಹ ಬಗೆದಿದೆ. ವಕ್ಫ್ ಕಾಯ್ದೆ ವಿರುದ್ಧ ದೇಶದಾದ್ಯಂತ ಪ್ರತಿಭಟನೆ ನಡೆಯುತ್ತಿದೆ. ಆದರೆ, ಮುರ್ಶಿದಾಬಾದ್ ಹೊರತುಪಡಿಸಿ ಎಲ್ಲಿಯೂ ಗಲಭೆಗಳು ನಡೆದಿಲ್ಲ. ಇದು ಗಂಭೀರ ಪ್ರಶ್ನೆಗಳನ್ನು ಹುಟ್ಟು ಹಾಕುತ್ತದೆ ಎಂದು ಅವರು ಹೇಳಿದ್ದಾರೆ.

### ಪಾಕಿಸ್ತಾನದಲ್ಲಿ ಹಿಂದೂ ಸಚಿವರ ಮೇಲೆ ದಾಳಿ: ಪ್ರಧಾನಿ ಶೆಹಬಾಜ್ ಖಂಡನೆ

• ಉದಯವಾಹಿನಿ ಇಸ್ಲಾಮಾಬಾದ್

ಪಾಕಿಸ್ತಾನದ ಸಿಂದ್ ಪ್ರಾಂತ್ಯದಲ್ಲಿ ವಿವಾದಾತ್ಮಕ ನೀರಾವರಿ ಕಾಲುವೆ ಯೋಜನೆಗಳನ್ನು ವಿರೋಧಿಸಿ ನಡೆದ ಪ್ರತಿಭಟನೆಯ ವೇಳೆ ಹಿಂದೂ ಸಚಿವರೊಬ್ಬರ ಮೇಲೆ ದಾಳಿ ನಡೆಸಿರುವ ಘಟನೆ ವರದಿಯಾಗಿದೆ.

ಪಾಕಿಸ್ತಾನ ಸರ್ಕಾರದ ಧಾರ್ಮಿಕ ವ್ಯವಹಾರಗಳ ರಾಜ್ಯ ಸಚಿವ ಖೇಲ್ ದಾಸ್ ಕೊಹಿಸ್ತಾನಿ, ಥಟ್ಟಾ ಜಿಲ್ಲೆಯಲ್ಲಿ ಪ್ರಯಾಣಿಸುತ್ತಿದ್ದಾಗ ಅವರ ವಾಹನದ ಮೇಲೆ ದಾಳಿ ನಡೆಸಿರುವ ಪ್ರತಿಭಟನಾಕಾರರು ಟೊಮೆಟೊ ಹಾಗೂ ಆಲೂಗಡ್ಡೆಗಳನ್ನು ಎಸೆದಿದ್ದಾರೆ. ದಾಳಿಯಲ್ಲಿ ಸಚಿವರಿಗೆ ಯಾವುದೇ ಗಾಯವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಚಿವರ ಮೇಲಿನ ದಾಳಿಯನ್ನು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಶರೀಫ್ ತೀವ್ರವಾಗಿ ಖಂಡಿಸಿದ್ದಾರೆ.

ಅಲ್ಲದೆ ಈ ಘಟನೆಯ ವಿರುದ್ಧ ತನಿಖೆ ನಡೆಸುವುದಾಗಿ ಭರವಸೆ ನೀಡಿದ್ದಾರೆ. ಯಾವುದೇ ಕಾರಣಕ್ಕೂ ಜನಪ್ರತಿನಿಧಿಗಳ ಮೇಲಿನ ದಾಳಿಯನ್ನು ಒಪ್ಪಲು ಸಾಧ್ಯವಿಲ್ಲ. ಇದರಲ್ಲಿ ಭಾಗಿಯಾದವರಿಗೆ ತಕ್ಕ ಶಿಕ್ಷೆಯನ್ನು ನೀಡಲಾಗುವುದು' ಎಂದು ಹೇಳಿದ್ದಾರೆ.

### ಪುಟಿನ್ ಅವರ ಈಸ್ಟರ್ ಕದನ ವಿರಾಮದ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಝುಲೆನ್‌ಸ್ಕಿ

**ಚೆರ್ನಿಹಿವ್ :** ರಷ್ಯಾದಿಂದ ನಿಜವಾದ ಕದನ ವಿರಾಮಕ್ಕೆ ಮಾತ್ರ ಪ್ರತಿಕ್ರಿಯೆ ನೀಡುವುದಾಗಿ ಉಕ್ರೇನ್ ಹೇಳಿದೆ. ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಉಕ್ರೇನ್‌ನಲ್ಲಿ ತಾತ್ಕಾಲಿಕ ಈಸ್ಟರ್ ಕದನ ವಿರಾಮವನ್ನು ಘೋಷಿಸಿದ್ದರ ಬಗ್ಗೆ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್ ಈ ಅನುಮಾನ ವ್ಯಕ್ತಪಡಿಸಿದ್ದಾರೆ.

ರಷ್ಯಾದಿಂದ ಉಕ್ರೇನ್ ಮೇಲೆ ಆಕ್ರಮಣ ಪ್ರಾರಂಭವಾಗಿ ಮೂರು ವರ್ಷಗಳ ನಂತರ ಶನಿವಾರ ಉಭಯ ರಾಷ್ಟ್ರಗಳು ದೊಡ್ಡ ಪ್ರಮಾಣದಲ್ಲಿ ಕೈದಿಗಳ ವಿನಿಮಯವನ್ನು ಮಾಡಿಕೊಂಡಿದ್ದವು.

ಆ ಬಳಿಕ, ಮಾನವೀಯ ಕಾರಣಗಳನ್ನು ಉಲ್ಲೇಖಿಸಿ ಪುಟಿನ್ ಶನಿವಾರದಿಂದ ಉಕ್ರೇನ್‌ನಲ್ಲಿ ತಾತ್ಕಾಲಿಕ ಯುದ್ಧ ವಿರಾಮವನ್ನು ಘೋಷಿಸಿದ್ದರು. ಕದನ ವಿರಾಮವನ್ನು ಹೇಗೆ ಮೇಲ್ವಿಚಾರಣೆ ಮಾಡಲಾಗುತ್ತದೆ. ವೈಮಾನಿಕ ದಾಳಿಗಳು ಅಥವಾ ಭೂಸೇನೆಯ ಯುದ್ಧಗಳು ಒಳಗೊಳ್ಳುತ್ತದೆಯೇ ಎಂಬುದರ ಕುರಿತು ಪುಟಿನ್ ಯಾವುದೇ ವಿವರಗಳನ್ನು ನೀಡಿಲ್ಲ.


### ಕಿಯಾ ಮೋಟರ್ಸ್ ಘಟಕದಿಂದ 900 ಎಂಜಿನ್ ಕಳ್ಳತನ: 9 ಮಂದಿ ಬಂಧನ

**ಪೆನುಕೊಂಡ:** ಆಂಧ್ರಪ್ರದೇಶದ ಶ್ರೀ ಸತ್ಯ ಸಾಯಿ ಜಿಲ್ಲೆಯಲ್ಲಿನ ಕಿಯಾ ಮೋಟರ್ಸ್ ಘಟಕವೊಂದರಿಂದ 900 ಎಂಜಿನ್‌ಗಳನ್ನು ಕಳವು ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಒಂಬತ್ತು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಪೆನುಕೊಂಡ ನ್ಯಾಯಾಲಯವು ಆರೋಪಿಗಳಿಗೆ 14 ದಿನ ನ್ಯಾಯಾಂಗ ಬಂಧನ ವಿಧಿಸಿದೆ. ಆಟೊಮೊಬೈಲ್ ಉದ್ಯಮವನ್ನು ಬೆಚ್ಚಿಬೀಳಿಸಿದ್ದ ಬೃಹತ್ ಪ್ರಮಾಣದ ಕಳ್ಳತನದ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಕೇವಲ 10 ಶೇಕಡದಷ್ಟು ಮಾತ್ರ ತನಿಖೆ ಪೂರ್ಣಗೊಂಡಿದೆ. ಕಳವು ಮಾಡಿರುವ ಎಂಜಿನ್ ಗಳನ್ನು ಆರೋಪಿಗಳು ಹಲವು ರಾಜ್ಯಗಳಿಗೆ ಕಳ್ಳಸಾಗಾಣೆ ಮಾಡಿ ಮಾರಾಟ ಮಾಡುತ್ತಿದ್ದರು. ಆಂಧ್ರಪ್ರದೇಶದ ಗಡಿಯಾಚೆಗೂ ಅಕ್ರಮ ಜಾಲವೊಂದು ಸಕ್ರಿಯವಾಗಿರುವ ಮುನ್ಸೂಚನೆ ಸಿಗುತ್ತಿದೆ' ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ.

ಕಿಯಾ ಅಧಿಕಾರಿಗಳು ಕಳೆದ ತಿಂಗಳು ಆಂತರಿಕ ಪರಿಶೀಲನೆ ನಡೆಸಿದ ವೇಳೆ ಎಂಜಿನ್‌ಗಳು ಕಳವಾಗಿರುವ ಬಗ್ಗೆ ಮಾಹಿತಿ ಲಭಿಸಿತ್ತು. ಈ ಬಗ್ಗೆ ಮಾರ್ಚ್ 19ರಂದು ದೂರು ದಾಖಲಾಗಿತ್ತು.




# ಚಿನ್ನಸ್ವಾಮಿ ಸೋಲಿನ ಲೆಕ್ಕ ಚುಕ್ತಾ

## ದೇವದತ್ ಪಡಿಕ್ಕಲ್– ವಿರಾಟ್ ಕೊಹ್ಲಿ ಅಬ್ಬರಕ್ಕೆ ಪಂಜಾಬ್ ಕಿಂಗ್ಸ್ ನಿರುತ್ತರ

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಈ ಸೀಸನ್ ನಲ್ಲಿ ಆಡಿರುವ ಮೂರು ಪಂದ್ಯಗಳನ್ನು ಸೋತಿದೆ ಎಂಬುದು ನಿಜ.

ಆದರೆ ಹೊರಗೆ ಆಡಿದ ಐದಕ್ಕೆ ಐದೂ ಪಂದ್ಯಗಳನ್ನು ಗೆಲ್ಲುವ ಮೂಲಕ ಹೊಸ ಸಾಧನೆ ಮಾಡಿದೆ. 2023ರ ಸೀಸನ್ ನಲ್ಲಿ ಗುಜರಾತ್ ಟೈಟಾನ್ಸ್ ತಂಡವಷ್ಟೇ ಇಂತಹ ಸಾಧನೆ ಮಾಡಿತ್ತು. ದೇವದತ್ ಪಡಿಕ್ಕಲ್ ಅವರು ಈ ಸೀಸನ್ ನ ಮೊದಲ ಅರ್ಧಶತಕ ಗಳಿಸಿದರೆ ವಿರಾಟ್ ಕೊಹ್ಲಿ ಅವರು 67ನೇ ಅರ್ಧಶತಕ ಗಳಿಸುವ ಮೂಲಕ ಐಪಿಎಲ್ ನಲ್ಲಿ ಅತಿ ಹೆಚ್ಚು ಅರ್ಧಶತಕ ಗಳಿಸಿದ ಸಾಧನೆ ಮಾಡಿದರು.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಶುಕ್ರವಾರದಂದು ಪಂಜಾಬ್ ಕಿಂಗ್ಸ್ ತಂಡದ ವಿರುದ್ಧ ಅನುಭವಿಸಿದ್ದ ಸೋಲಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಕೇವಲ 2 ದಿನದಲ್ಲೇ ತಿರುಗೇಟು ನೀಡಿದೆ. ಅದೂ ಪಂಜಾಬ್ ಕಿಂಗ್ಸ್ ತವರು ಮೈದಾನವಾದ ಮುಲ್ಲನ್ ಪುರ್ ಕ್ರೀಡಾಂಗಣದಲ್ಲಿ! ಈ ಮೂಲಕ ಆಡಿರುವ 8 ಪಂದ್ಯಗಳಲ್ಲಿ 5 ಗೆಲುವಿನೊಂದಿಗೆ 10 ಅಂಕಗಳನ್ನು ಕಲೆಹಾಕಿ ಅಂಕಪಟ್ಟಿಯಲ್ಲಿ 3ನೇ ಸ್ಥಾನಕ್ಕೇರಿದೆ.

ಮುಲ್ಲನ್ ಪುರದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಪಂದ್ಯದಲ್ಲಿ ಆರ್ ಸಿಬಿ ತಂಡ ಪಂಜಾಬ್ ಕಿಂಗ್ಸ್ ವಿರುದ್ಧ 9 ವಿಕೆಟ್ ಗಳಿಂದ ಗೆಲುವು ಸಾಧಿಸಿತು.

ಗೆಲುವಿಗೆ 158 ರನ್ ಗಳ ಗುರಿ ಪಡೆದ ಆರ್ ಸಿಬಿ ಇನ್ನೂ 9 ಎಸೆತಗಳು ಬಾಕಿ ಇರುವಂತೆ ಗುರಿ ತಲುಪಿತು. ಮಾಜಿ ನಾಯಕ ವಿರಾಟ್ ಕೊಹ್ಲಿ( ಅಜೇಯ 73) ಮತ್ತು ಕನ್ನಡಿಗ ದೇವದತ್ ಪಡಿಕ್ಕಲ್(61) ಅವರು ಗೆಲುವಿನ ರೂವಾರಿಗಳಾದರು.

ಇವರಿಬ್ಬರು ಎರಡನೇ ವಿಕೆಟ್ ಗೆ 103 ರನ್ ಗಳ ಜೊತೆಯಾಟ ಆಡಿದ್ದು ನಿರ್ಣಾಯಕವೆನಿಸಿತು. ದೇವದತ್ ಪಡಿಕ್ಕಲ್ ಕೇವಲ 35 ಎಸೆತಗಳಲ್ಲಿ 5 ಬೌಂಡರಿ ಮತ್ತು 4 ಸಿಕ್ಸರ್ ಗಳನ್ನು ಒಳಗೊಂಡ 61 ರನ್ ಗಳಿಸಿದರು.

ಇನ್ನು ವಿರಾಟ್ ಕೊಹ್ಲಿ ಅವರು 54 ಎಸೆತಗಳಿಂದ 7 ಬೌಂಡರಿ ಮತ್ತು 1 ಸಿಕ್ಸರ್ ಗಳನ್ನು ಒಳಗೊಂಡ 73 ರನ್ ಗಳಿಸಿದರು. ಆರಂಭಿಕನಾಗಿ ಬಂದು ಅಜೇಯ ಅರ್ಧಶತಕ ಗಳಿಸಿದ ಅವರು ಅರ್ಹವಾಗಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.



**ವಿರಾಟ್ ಕೊಹ್ಲಿ ಪಡಿಕ್ಕಲ್ ಗೆಲುವಿನ ರೂವಾರಿಗಳು**

### ಸಂಕ್ಷಿಪ್ತ ಸ್ಕೋರ್

ಪಂಜಾಬ್ ಕಿಂಗ್ಸ್ 20 ಓವರ್ ಗಳಲ್ಲಿ 157/6, ಪ್ರಭ್ ಸಿಮ್ರಾನ್ ಸಿಂಗ್ 33, ಶಶಾಂಕ್ ಸಿಂಗ್ ಅಜೇಯ 31, ಮಾರ್ಕೋ ಯಾನ್ಸನ್ ಅಜೇಯ 25, ಕೃನಾಲ್ ಪಾಂಡ್ಯ 18ಕ್ಕೆ 1, ಸುಯಶ್ ಶರ್ಮಾ 26ಕ್ಕೆ 2, ಶೆಫರ್ಡ್ 18ಕ್ಕೆ 1

ರಾಯಲ್ ಚಾಲೆಂಜರ್ಸ್ 18.5 ಓವರ್ ಗಳಲ್ 159/3, ವಿರಾಟ್ ಕೊಹ್ಲಿ ಅಜೇಯ73, ದೇವದತ್ ಪಡಿಕ್ಕಲ್ 61, ಜಿತೇಶ್ ಶರ್ಮಾ ಔಟಾಗದೆ 11, ಹರ್ ಪ್ರೀತ್ ಬ್ರಾರ್ 27ಕ್ಕೆ 1, ಅರ್ಶದೀಪ್ ಸಿಂಗ್ 26ಕ್ಕೆ 1, ಚಹಲ್ 36ಕ್ಕೆ 1

**ರನ್ ಗಳಿಸಲು ಒದ್ದಾಡಿದ ಪಂಜಾಬ್**

**ಟಾಸ್ ಸೋತು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ ಉತ್ತಮ ಆರಂಭ ಪಡೆದರೂ ಅದನ್ನು ಕೊನೆವರೆಗೆ ಮುಂದುವರಿಸಲು ಸಾಧ್ಯವಾಗಲಿಲ್ಲ. ಪ್ರಿಯಾಂಶ್ ಆರ್ಯ ಮತ್ತು ಪ್ರಭ್ ಸಿಮ್ರಾನ್ ಸಿಂಗ್ ಅವರು ಪ್ರಥಮ ವಿಕೆಟ್ ಗೆ 4.2 ಓವರ್ ಗಳಲ್ಲಿ 42 ರನ್ ಗಳ ಜೊತೆಯಾಟವಾಡಿದರು. ಪ್ರಿಯಾಂಶ್ ಆರ್ಯ ಅವರು 15 ಎಸೆತಗಳಲ್ಲಿ 3 ಬೌಂಡರಿ ಮತ್ತು 1 ಸಿಕ್ಸರ್ ಗಳಿದ್ದ 22 ರನ್ ಗಳಿಸಿ ಕೃನಾಲ್ ಪಾಂಡ್ಯ ಬೌಲಿಂಗ್ ನಲ್ಲಿ ಟಿಂ ಡೇವಿಡ್ ಗೆ ಕ್ಯಾಚ್ ನೀಡಿದರು. ಈ ವಿಕೆಟ್ ಪತನದ ಬಳಿಕ ಸರಿಯಾಗಿ 20 ರನ್ ಗಳು ಬಂದ ನಂತರ ಇಂಪ್ಯಾಕ್ಟ್ ಪ್ಲೇಯರ್ ಆಗಿದ್ದ ಮತ್ತೊಬ್ಬ ಆರಂಭಿಕ ಪ್ರಭ್ ಸಿಮ್ರಾನ್ ಸಿಂಗ್ ಅವರನ್ನು ಸಹ ಕೃನಾಲ್ ಪಾಂಡ್ಯ ಅವರೇ ಮತ್ತೆ ಟಿಂ ಡೇವಿಡ್ ಗೆ ಕ್ಯಾಚ್ ಕೊಡಿಸುವಲ್ಲಿ ಯಶಸ್ವಿಯಾದರು. 17 ಎಸೆತಗಳನ್ನು ಎದುರಿಸಿದ ಪ್ರಭ್ ಸಿಮ್ರಾನ್ ಸಿಂಗ್ ಅವರು 5 ಬೌಂಡರಿ ಮತ್ತು 1 ಸಿಕ್ಸರ್ ಒಳಗೊಂಡ 33 ರನ್ ಗಳಿಸಿದರು. ಇಲ್ಲಿಂದ ಬಳಿಕ ಆರ್‌ಸಿಬಿ ಬೌಲರ್ ಗಳ ಕೈ ಮೇಲಾಯಿತು. ಶ್ರೇಯಸ್ ಅಯ್ಯರ್ (6) ಅವರನ್ನು ಶೆಫರ್ಡ್ ಅವರು ಕೃನಾಲ್ ಪಾಂಡ್ಯಗೆ ಕ್ಯಾಚ್ ಕೊಡಿಸಿದರು. ಇದಾದ ಬಳಿಕ ಕಳೆದ ಪಂದ್ಯದ ಹೀರೋ ನೇಹಾಲ್ ವಧೇರಾ (5) ಅವರು ರನೌಟ್ ಆದರು. ಈ ಹಂತದಲ್ಲಿ ಜೋಶ್ ಇಂಗ್ಲಿಸ್(29) ಕೆಲ ಬಿರುಸಿನ ಹೊಡೆತಗಳನ್ನು ಹೊಡೆದರು. ಮತ್ತು ಶಶಾಂಕ್ ಸಿಂಗ್( ಅಜೇಯ 31) ಅವರು ವೇಗವಾಗಿ ರನ್ ಗಳಿಸಲು ಯಶಸ್ವಿಯಾಗಲಿಲ್ಲ. ಅಂತಿಮವಾಗಿ ಮಾರ್ಕೋ ಯಾನ್ಸನ್ ಅವರು ಎರಡು ಸಿಕ್ಸರ್ ಗಳನ್ನು ಹೊಡೆದಿದ್ದರಿಂದ 150 ರನ್ ಗಳ ಗಡಿ ದಾಟುವಂತಾಯಿತು. ಆರ್ ಸಿಬಿ ಪರ ಸ್ಪಿನ್ನರ್ ಗಳಾದ ಕೃನಾಲ ಪಾಂಡ್ಯ ಮತ್ತು ಸುಯಶ್ ಶರ್ಮಾ ತಲಾ 2 ವಿಕೆಟ್ ಕಬಳಿಸಿದರು. ಉಳಿದೊಂದು ವಿಕೆಟ್ ರೊನಾರಿಯೋ ಶೆಪರ್ಡ್ ಪಾಲಾಯಿತು.**

# ಧೋನಿಗೆ ಭಾರೀ ಅವಮಾನ!

## ಸಿಎಸ್‌ಕೆಗೆ ಹಿಗ್ಗಾಮುಗ್ಗಾ ಬಾರಿಸಿದ ರೋಹಿತ್, ಸೂರ್ಯಕುಮಾರ್

ಟೂರ್ನಿಯಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಸೋಲಿನ ಸುಳಿಗೆ ಸಿಲುಕುತ್ತಾ ಹೋಗುತ್ತಿದ್ರೆ, ಮುಂಬೈ ಇಂಡಿಯನ್ಸ್ ತಂಡ ಗೆಲುವಿನ ಹಳಿಗೆ ಮೆಲ್ಲಗೆ ಮರಳುತ್ತಿದೆ. ಸಿಎಸ್‌ಕೆ ವಿರುದ್ಧ ಮುಂಬೈ ಇಂಡಿಯನ್ಸ್ 9 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಐಪಿಎಲ್ ಪಂದ್ಯದಲ್ಲಿ ಹಾರ್ದಿಕ್ ಪಾಂಡ್ಯ ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡರು. ಇದರಿಂದ ಎದುರಾಳಿ ಚೆನ್ನೈ ತಂಡ ಮೊದಲ ಬ್ಯಾಟಿಂಗ್ ಮಾಡಿತು. ಪಂದ್ಯದಲ್ಲಿ ಆರಂಭಿಕರಾಗಿ ಕ್ರೀಸ್‌ಗೆ ಆಗಮಿಸಿದ ಶೇಕ್ ರಶೀದ್ 19 ಹಾಗೂ ರಚಿನ್ ರವೀಂದ್ರ 05 ರನ್‌ಗೆ ಬೇಗನೇ ಔಟ್ ಆದರು. ಬಳಿಕ ಬಂದ ಆಯುಷ್ ಮ್ಹಾತ್ರೆ 32 ರನ್ ಗಳಿಸಿ ತಂಡದ ರನ್‌ಗಳನ್ನ ಹಿಗ್ಗಿಸುತ್ತಿದ್ದರು. ಆದ್ರೆ ಇದೇ ವೇಳೆ ದೀಪಕ್ ಚಹರ್ ಬೌಲಿಂಗ್‌ನಲ್ಲಿ ವಿಕೆಟ್ ಒಪ್ಪಿಸಿದರು.

ರವೀಂದ್ರ ಜಡೇಜಾ ಈ ಪಂದ್ಯದಲ್ಲಿ ಅತ್ಯುತ್ತಮ ಬ್ಯಾಟಿಂಗ್ ಮಾಡಿ 35 ಎಸೆತಗಳಲ್ಲಿ 4 ಫೋರ್ 2 ಸಿಕ್ಸರ್ ನಿಂದ ಅರ್ಧಶತಕ ಸಿಡಿಸಿದರು. ಎಂದಿನಂತೆ ಶಿವಂ ದುಬೆ ಬ್ಯಾಟಿಂಗ್‌ನಲ್ಲಿ ಆರ್ಭಟಿಸಿದರು. ಈ ಪಂದ್ಯದಲ್ಲಿ ಕೇವಲ 32 ಬಾಲ್ ಎದುರಿಸಿದ ದುಬೆ 2 ಬೌಂಡರಿ 4 ಸಿಕ್ಸರ್‌ನಿಂದ 50 ಚಚ್ಚಿದರು. ನಾಯಕ ಧೋನಿ ಈ ಪಂದ್ಯದಲ್ಲೂ ಕೇವಲ 4 ರನ್‌ಗೆ ವಿಕೆಟ್ ಒಪ್ಪಿಸಿದರು. ದುಬೆ, ಜಡೇಜಾ ಅವರ ಅರ್ಧಶತಕದಿಂದ ಚೆನ್ನೈ 20 ಓವರ್‌ನಲ್ಲಿ 176 ರನ್‌ಗಳ ಗುರಿ ನೀಡಿತ್ತು. ಈ ರನ್‌ಗಳ ಹಿಂದೆ ಬಿದ್ದ ಮುಂಬೈ ಇಂಡಿಯನ್ಸ್ ಒಳ್ಳೆಯ ಆರಂಭ ಪಡೆದುಕೊಂಡಿತು. ತಂಡದ ಮೊತ್ತ 63 ಆಗಿದ್ದಾಗ ರಯಾನ್ ರಿಕೆಲ್ಟನ್ ಔಟ್ ಆದರು. ಪ್ರತಿ ಪಂದ್ಯದಲ್ಲಿ ಸುಲಭವಾಗಿ ಔಟ್ ಆಗುತ್ತಿದ್ದ ಸ್ಫೋಟಕ ಬ್ಯಾಟರ್ ರೋಹಿತ್ ಶರ್ಮಾ ಸಿಡಿಲಬ್ಬರದ ಬ್ಯಾಟಿಂಗ್ ಮಾಡಿದರು. ಚೆನ್ನೈ ಬೌಲರ್ ಗಳನ್ನ ಚೆಂಡಾಡಿದ ರೋಹಿತ್ ಕೇವಲ 33 ಎಸೆತಗಳಲ್ಲಿ 50 ರನ್‌ಗಳನ್ನು ಚಚ್ಚಿದರು. ಇದು ಈ ಸೀಸನ್‌ನಲ್ಲಿ ರೋಹಿತ್ ಅವರ ಮೊದಲ ಹಾಫ್ ಸೆಂಚುರಿ ಆಗಿದೆ.

ರೋಹಿತ್ ಶರ್ಮಾ ಜೊತೆ ಒಳ್ಳೆಯ ಬ್ಯಾಟಿಂಗ್ ಮಾಡಿದ ಸೂರ್ಯಕುಮಾರ್ ಯಾದವ್ ಕೂಡ ಚೆನ್ನೈ ಬೌಲರ್ ಗಳಿಗೆ ಬೆಂಡೆತ್ತಿದರು. ಪಂದ್ಯದಲ್ಲಿ ಕೇವಲ 30 ಎಸೆತಗಳನ್ನು ಎದುರಿಸಿದ ಸೂರ್ಯಕುಮಾರ್ 6 ಬೌಂಡರಿ ಹಾಗೂ 5 ಬಿಗ್ ಸಿಕ್ಸರ್‌ಗಳಿಂದ 68 ರನ್ ಗಳಿಸಿ ಅಜೇಯರಾಗಿ ಉಳಿದರು.

ಇನ್ನು ರೋಹಿತ್ ಕೂಡ ಹಾಫ್‌ಸೆಂಚುರಿ ಬಾರಿಸಿ ಬ್ಯಾಟಿಂಗ್ ಮುಂದುವರೆಸಿದರು. 45 ಎಸೆತದಲ್ಲಿ 4 ಬೌಂಡರಿಗಳ ಜೊತೆಗೆ 6 ಅತ್ಯದ್ಭುತವಾದ ಸಿಕ್ಸರ್ ಗಳಿಂದ ರೋಹಿತ್ 76 ರನ್‌ಗಳ ಕಾಣಿಕೆ ನೀಡಿದರು. ಇದರಿಂದ ಮುಂಬೈ ಇಂಡಿಯನ್ಸ್ 9 ವಿಕೆಟ್‌ಗಳ ಅಮೋಘವಾದ ಗೆಲುವು ಪಡೆಯಿತು.




**ಅರ್ಧ ಶತಕ ಸಿಡಿಸಿದ ಶರ್ಮ**

# ಗಿಲ್‌ಗೆ ದಂಡ ವಿಧಿಸಿದ ಬಿಸಿಸಿಐ

ಇಂಡಿಯನ್ ಪ್ರೀಮಿಯರ್ ಲೀಗ್‌ನ 35ನೇ ಪಂದ್ಯದಲ್ಲಿ ಸ್ಲೋ ಓವರ್ ರೇಟ್ ತಪ್ಪು ಮಾಡಿದಕ್ಕಾಗಿ ಗುಜರಾತ್ ಟೈಟಾನ್ಸ್ ತಂಡದ ನಾಯಕ ಶುಭ್‌ಮನ್ ಗಿಲ್‌ಗೆ 12 ಲಕ್ಷ ರೂ. ದಂಡ ವಿಧಿಸಲಾಗಿದೆ. ಐಪಿಎಲ್ ನಿಯಮದ ಪ್ರಕಾರ, ಪ್ರತಿ ತಂಡಗಳು 20 ಓವರ್‌ಗಳನ್ನು 1 ಗಂಟೆ 30 ನಿಮಿಷಗಳಲ್ಲಿ ಪೂರ್ಣಗೊಳಿಸಬೇಕು. ಈ ಸಮಯದೊಳಗೆ 20 ಓವರ್‌ಗಳನ್ನು ಪೂರ್ಣಗೊಳಿಸದಿದ್ದರೆ ಆಯಾ ತಂಡಗಳ ನಾಯಕನಿಗೆ ತಲಾ 12 ಲಕ್ಷ ರೂ. ದಂಡ ವಿಧಿಸಲಾಗುತ್ತದೆ.

ಅದರಂತೆ ಇದೀಗ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಪಂದ್ಯದಲ್ಲಿ ಸ್ಲೋ ಓವರ್ ರೇಟ್ ತಪ್ಪು ಮಾಡಿದ ಗುಜರಾತ್ ಟೈಟಾನ್ಸ್ ತಂಡದ ನಾಯಕ ಶುಭ್‌ಮನ್ ಗಿಲ್‌ಗೆ 12 ಲಕ್ಷ ರೂ. ಫೈನ್ ವಿಧಿಸಲಾಗಿದೆ. ಇದರೊಂದಿಗೆ ಈ ಬಾರಿಯ ಐಪಿಎಲ್‌ನಲ್ಲಿ ದಂಡದ ಶಿಕ್ಷೆಗೆ ಗುರಿಯಾದ 7ನೇ ನಾಯಕ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ....



**ಅಕ್ಷರ್ ಪಟೇಲ್:** ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಾಯಕ ಅಕ್ಷರ್ ಪಟೇಲ್ ನಿಗದಿತ ಸಮಯದೊಳಗೆ 20 ಓವರ್‌ಗಳನ್ನು ಪೂರ್ಣಗೊಳಿಸಿರಲಿಲ್ಲ. ಹೀಗಾಗಿ ಅವ ರಿಗೆ 12 ಲಕ್ಷ ರೂ. ದಂಡ ವಿಧಿಸಲಾಗಿದೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966